ಸಂಪುಟ: 21, ಸಂಚಿಕೆ: 93, ಪುಟಗಳು: 8, ಶುಕ್ರವಾರ, 12 ಜನವರಿ 2024 RNI NO. KARKAN/2002/08054
epaper: www.sanjemugilu.com



ನೇಣು ಸಾರಥ್ಯದಲ್ಲಿ...
ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶುಕ್ರವಾರ 12, ಜನವರಿ -2024)

- ಶ್ರೀ ಶೋಭಕೃತನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಪುಷ್ಯ ಮಾಸ, ಶುಕ್ಲ ಪಕ್ಷ,
- ಪ್ರಥಮಿ / ದ್ವಿತೀಯ,
- ಉತ್ತರಾಷಾಢ ನಕ್ಷತ್ರ / ಶ್ರವಣ ನಕ್ಷತ್ರ.
- ರಾಹುಕಾಲ 11:05 ರಿಂದ 12:31
- ಗುಳಿಕಕಾಲ 08:13 ರಿಂದ 09:34
- ಯಮಗಂಡಕಾಲ 03:23 ರಿಂದ 04:49

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

# ಹಂಪಿಯಲ್ಲಿ ಚಾತುರ್ಮಾಸ ತಪಸ್ಸು ನಡೆದ್ದ ಶ್ರೀರಾಮ...

## ಸೀತೆಯನ್ನು ಮರಳಿ ಪಡೆಯಲು ವಿರೂಪಾಕ್ಷ ದೇವರ ಆರ್ಶೀವಾದ ಪಡೆದರಂತೆ!



**ಬಳ್ಳಾರಿ:** ಅಯೋಧ್ಯೆ ರಾಮಮಂದಿರ ಉದ್ಘಾಟನೆಗೆ ದಿನಗಣನೆ ಆರಂಭವಾಗಿದೆ. ಶ್ರೀರಾಮನನ್ನು ನೆನೆಪಿಸುವಂತಾ ಹಲವು ಪುಣ್ಯಕ್ಷೇತ್ರಗಳು ಕರ್ನಾಟಕದಲ್ಲಿವೆ. ಅದರಲ್ಲಿ ವಿಜಯನಗರ ಜಿಲ್ಲೆ ಹಂಪಿ ಸಹ ಒಂದು. ಹಂಪಿಯನ್ನ ರಾಮಾಯಣದಲ್ಲಿ ಕಿಷ್ಕಿಂದಾ ನಗರ ಅಂತ ಕರೆಯಲಾಗುತ್ತಿತ್ತು. ಈ ಕಿಷ್ಕಿಂದ ನಗರ ಹಂಪಿಗೂ ಅಯೋಧ್ಯೆ ರಾಮನಿಗೂ ಸಾಕಷ್ಟು ಸಂಬಂಧ ಇದೆ. ಹಂಪಿಯ ಕಿಷ್ಕಿಂದ ನಗರದಲ್ಲಿ ಶ್ರೀರಾಮ ಬಂದು ನೆಲೆಸಿದ್ದ, ಹಂಪಿಯ ಹಲವು ಭಾಗಗಳಲ್ಲಿ ಸಂಚರಿಸಿದ್ದ ಅನ್ನೋ ಪೌರಾಣಿಕ ಹಿನ್ನೆಲೆ ಇದೆ.

ಹೌದು ಶ್ರೀರಾಮಚಂದ್ರ, ಸೀತಾ ಮಾತೆ ಅಪಹರಣವಾದ ಸಂದರ್ಭದಲ್ಲಿ ಸೀತೆಯನ್ನು ಅರಸುತ್ತಾ ಹಂಪಿಗೆ ಬಂದಿದ್ದರು ಎಂಬ ಪ್ರತೀತಿಯಿದೆ. ಅದಕ್ಕೆ ಸಾಕಷ್ಟು ಕುರುಹುಗಳು ಸಹ ಇಲ್ಲಿ ದೊರೆಯುತ್ತವೆ. ಆಗಿನ ಕಿಷ್ಕಿಂದ ನಗರವೇ ಈಗಿನ ವಿಜಯನಗರ ಜಿಲ್ಲೆಯ ಹಂಪಿ. ಹಂಪಿಯ ಮಾಲ್ಯವಂತ ಪರ್ವತದಲ್ಲಿರುವ ಐತಿಹಾಸಿಕ ರಘುನಾಥ ದೇವಾಲಯದಲ್ಲಿ ಶ್ರೀರಾಮ ನಾಲ್ಕು ತಿಂಗಳ ಕಾಲ ತಪಸ್ಸು ಮಾಡುತ್ತಾರಂತೆ. ಪುಟ 2



## ಸಂಕ್ಷಿಪ್ತ ಸುದ್ದಿ

### ಕಣ್ಣುಗಳನ್ನು ಕಿತ್ತು, ಕತ್ತು ಹಿಸುಕಿ ಹತ್ಯೆ



**ಬಿಹಾರ:** ಹಣಕ್ಕಾಗಿ ಶುರುವಾದ ಜಗಳ ಕೊಲೆಯಲ್ಲಿ ಅಂತ್ಯಗೊಂಡಿದೆ. ಸ್ನೇಹಿತರೇ ಯುವಕನ ಕಣ್ಣುಗಳನ್ನು ಕಿತ್ತು, ಕತ್ತು ಹಿಸುಕಿ ಕೊಲೆ ಮಾಡಿರುವ ಘಟನೆ ಬಿಹಾರದ ಅರಾದಲ್ಲಿ ನಡೆದಿದೆ. ಹಣಕ್ಕಾಗಿ ಜಗಳ ಆರಂಭವಾಗಿತ್ತು, ಮೃತ ವ್ಯಕ್ತಿ ಕೂಲಿಕಾರ್ಮಿಕನಾಗಿದ್ದ. ಬಾರಾ ಬಸಂತ್‌ಪುರ ಗ್ರಾಮದ ನಿವಾಸಿಯಾಗಿರುವ ಸಿಂಗ್, ಸ್ನೇಹಿತರು ಆತನನ್ನು ಪಾರ್ಟಿಗೆಂದು ಕರೆದೊಯ್ದು ಚಾಕುವಿನಿಂದ ಪುಟ 2

### ಮಾಜಿ ರೂಪದರ್ಶಿ ದಿವ್ಯಾ ಅಹುಜಾ ಹತ್ಯೆ ಪ್ರಕರಣ ಬಂಧನ



**ಪಶ್ಚಿಮ ಬಂಗಾಳ:** ಮಾಜಿ ರೂಪದರ್ಶಿ ದಿವ್ಯಾ ಪಹುಜಾ ಕೊಲೆ ಆರೋಪಿಯನ್ನು ಪಶ್ಚಿಮ ಬಂಗಾಳದಲ್ಲಿ ಪೊಲೀಸರು ಬಂಧಿಸಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಮಾಜಿ ಮಾಡೆಲ್ ನ ಶವವನ್ನು ಮತ್ತೊಬ್ಬ ಆರೋಪಿ ರವಿ ಬಾಂದ್ರಾ ಜತೆ ವಿಲೇವಾರಿ ಮಾಡಿದ್ದ ಬಾಲ್ ರಾಜ್ ಗಿಲ್ ಗುರುವಾರ ಸಂಜೆ ವಿಮಾನ ನಿಲ್ದಾಣದಲ್ಲಿ ವಿಮಾನ ಹತ್ತಲು ಪ್ರಯತ್ನಿಸುತ್ತಿದ್ದಾಗ ಬಂಧಿಸಲಾಗಿದೆ. ಪುಟ 2

### ನಾರಾಯಣಗೌಡಗೆ ತಪ್ಪಿಲ್ಲ ಸಂಕಷ್ಟ

**ಬೆಂಗಳೂರು:** ಕರ್ನಾಟಕ ರಕ್ಷಣಾ ವೇದಿಕೆ ಕಳೆದ ವರ್ಷ ಡಿಸೆಂಬರ್ 27 ರಂದು ರಾಜಧಾನಿ ಬೆಂಗಳೂರಿನಲ್ಲಿ ನಾಮಫಲಕ ಮಹಾ ಅಭಿಯಾನ ಕೈಗೊಂಡಿತ್ತು. ಅಂಗಡಿ-ಮುಗ್ಗಟ್ಟು, ಮಾಲ್‌ಗಳು ಸೇರಿದಂತೆ ವಾಣಿಜ್ಯ ಮಳಿಗೆಗಳ ಪುಟ 2

## ಕಾಂಗ್ರೆಸ್ ಗ್ಯಾರಂಟಿಗಳಿಗೆ ಬಿಜೆಪಿ ಕೌಂಟರ್ ಕೊಡಲು ಸಿದ್ಧತೆ

# ಮೋದಿ ಗ್ಯಾರಂಟಿಗೆ ಪ್ರಚಾರ

**ಬೆಂಗಳೂರು:** ಲೋಕಸಭೆ ಚುನಾವಣೆಯಲ್ಲಿ ಸತತ ಮೂರನೇ ಬಾರಿ ಅಧಿಕಾರದ ಗದ್ದುಗೆ ಏರಲು ಬಿಜೆಪಿ ಪ್ಲಾನ್ ಮಾಡಿಕೊಳ್ಳುತ್ತಿದೆ. ಕರ್ನಾಟಕದಲ್ಲಿ ಎಲ್ಲಾ 28 ಕ್ಷೇತ್ರಗಳನ್ನು ಗೆಲ್ಲಲು ತಂತ್ರಗಾರಿಕೆ ಮಾಡಲಾಗುತ್ತಿದ್ದು, ಮುಖಂಡರಿಂದ ಅಭಿಪ್ರಾಯ ಸಂಗ್ರಹಿಸಲಾಗುತ್ತಿದೆ. ನಿನ್ನೆ ನಡೆದ ಸಭೆಯಲ್ಲಿ ಕಾಂಗ್ರೆಸ್ ಗ್ಯಾರಂಟಿಗಳನ್ನು ಕೌಂಟರ್ ಮಾಡುವುದು ಹೇಗೆ ಎಂಬ ಬಗ್ಗೆಯೂ ಚರ್ಚೆ ನಡೆದಿದೆ.

ಲೋಕಸಭೆ ಚುನಾವಣೆ ಪ್ರಚಾರದ ವೇಳೆ ಕಾಂಗ್ರೆಸ್ ಗ್ಯಾರಂಟಿ ವರ್ಸಸ್ ಮೋದಿ ಗ್ಯಾರಂಟಿ ನಡೆಯುವ ಸಾಧ್ಯತೆ ಇದೆ. ಈಗಾಗಲೇ ರಾಜ್ಯಾದ್ಯಂತ ಕಾಂಗ್ರೆಸ್ ಗ್ಯಾರಂಟಿಗಳ ಜೊತೆಗೆ ಮೋದಿ ಗ್ಯಾರಂಟಿ ಜಾಹೀರಾತುಗಳು ಕೂಡ ಕಾಣಸಿಗುತ್ತಿವೆ. ಅಲ್ಲದೆ, ಕೇಂದ್ರ ಸರ್ಕಾರದ ಯೋಜನೆಗಳನ್ನೇ ಹೆಚ್ಚು ಪ್ರಚುರ ಪಡಿಸಿ ಮೋದಿಯೇ ಗ್ಯಾರಂಟಿ ಎಂದು ಬಿಂಬಿಸಲು ಬಿಜೆಪಿ ಮುಂದಾಗಿದೆ.

ಕೇಂದ್ರ ಯೋಜನೆಗಳ ಫಲಾನುಭವಿಗಳ ಬಳಿ ತೆರಳಿ ಮೋದಿ ಗ್ಯಾರಂಟಿ ಎಂದು ಬಿಂಬಿಸಲು ಕಾರ್ಯಕರ್ತರಿಗೆ ಸೂಚನೆ ನೀಡಲಾಗಿದೆ. ಅಲ್ಲದೆ, ರಾಜ್ಯ ಸರ್ಕಾರದ ಗ್ಯಾರಂಟಿಗಳ ಅನುಷ್ಠಾನದಲ್ಲಿನ ಸಮಸ್ಯೆಗಳು ಮತ್ತು ಕೇಂದ್ರ ಸರ್ಕಾರದ ಯೋಜನೆಗಳ ಯಶಸ್ವಿ ಅನುಷ್ಠಾನವನ್ನು ಜನರಿಗೆ ಮನವರಿಕೆ ಮಾಡಲು ತಿಳಿಸಲಾಗಿದೆ. ಪುಟ 2





### ರಾಮಲಲ್ಲಾ ಪ್ರಾಣಪ್ರತಿಷ್ಠೆಗೂ ಮುನ್ನ 11 ದಿನಗಳ ವಿಶೇಷ ಆಚರಣೆ



**ನವದೆಹಲಿ:** ಅಯೋಧ್ಯೆಯಲ್ಲಿ ನೂತನವಾಗಿ ನಿರ್ಮಾಣ ವಾಗಿರುವ ರಾಮ ಮಂದಿರ ಉದ್ಘಾಟನೆಗೆ ಇನ್ನು 10 ದಿನಗಳು ಬಾಕಿ ಉಳಿದಿವೆ. ದೇಶದೆಲ್ಲೆಡೆ ಇದಕ್ಕಾಗಿ ಸಿದ್ಧತೆಗಳು ಭರದಿಂದ ಸಾಗುತ್ತಿದ್ದು, ಹಲವೆಡೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಇದೇ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ವಿಶೇಷ ಆಡಿಯೋ ಸಂದೇಶವನ್ನು ಬಿಡುಗಡೆ ಮಾಡಿದ್ದಾರೆ. ಪುಟ 2

### ಭಾರತದಲ್ಲಿ 2028ರ ಹೊತ್ತಿಗೆ ನಿರ್ಮಾಣವಾಗಲಿದೆ ದೇಶದ ಮೊದಲ ಅಂತರಿಕ್ಷ ನಿಲ್ದಾಣ

**ನವದೆಹಲಿ:** ಭಾರತದಲ್ಲಿ 2028ರಷ್ಟೊತ್ತಿಗೆ ಭಾರತೀಯ ಅಂತರಿಕ್ಷ ನಿಲ್ದಾಣ ಸ್ಥಾಪನೆಯಾಗಲಿದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಮಾಹಿತಿ ನೀಡಿದೆ. ಇಸ್ರೋ ಅಧ್ಯಕ್ಷ ಎಸ್ ಸೋಮನಾಥ್ ಮಾತನಾಡಿ, ಭಾರತವು ತನ್ನ ಅಸ್ತಿತ್ವದಲ್ಲಿರುವ ಸಾಮರ್ಥ್ಯಗಳನ್ನು ಬಳಸಿಕೊಂಡು 2028 ರ ವೇಳೆಗೆ ಮೊದಲ ಭಾರತೀಯ ಬಾಹ್ಯಾಕಾಶ ನಿಲ್ದಾಣ ಸ್ಥಾಪಿಸಲು ಮುಂದಾಗಿದೆ ಎಂದಿದ್ದಾರೆ.

ಭಾರತದ ಪ್ರತಿಭೆ ಜಾಗತಿಕ ಮಟ್ಟದಲ್ಲಿ ಸದ್ದು ಮಾಡುತ್ತಿದೆ, ಮುಂದಿನ 5 ರಿಂದ 10 ವರ್ಷಗಳಲ್ಲಿ ಭೂಮಿಯ ಮೇಲಿನ ವಿವಿಧ ಕಾರ್ಯಗಳಿಗಾಗಿ ಕೈಗಾರಿಕೆಗಳು ನೂರಾರು ಬಾಹ್ಯಾಕಾಶ ನೌಕೆಗಳನ್ನು ನಿರ್ಮಿಸಬೇಕಾಗುತ್ತದೆ ಎಂದು ಅವರು ಹೇಳಿದರು. ಪುಟ 2



### ಬೆಂಗಳೂರು ರಿಂಗ್ ರೈಲು

## ಅಂತಿಮ ಹಂತದ ಸರ್ವೆ ಕಾರ್ಯ ಆರಂಭ



**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಈ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಬೆಂಗಳೂರು ಹೊರವಲಯದ ಸುತ್ತಲೂ ಸುಮಾರು 287 ಕಿಮೀ ಉದ್ದದ ರಿಂಗ್ ರೈಲು ನಿರ್ಮಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಇದರ ಅಧ್ಯಯನಕ್ಕಾಗಿ ಈಗಾಗಲೆ 7 ಕೋಟಿ ರೂ. ಮಂಜೂರಾಗಿತ್ತು. ಇದೀಗ ಯೋಜನೆಗಾಗಿ ರೈಲ್ವೆ ಇಲಾಖೆಯಿಂದ ಅಂತಿಮ ಹಂತದ ಲೊಕೇಶನ್ ಸರ್ವೆ ಕಾರ್ಯ ನಡೆಯುತ್ತಿದೆ. ಪುಟ 2

## ಸಮುದ್ರ ಸೇತುವೆ ಲೋಕಾರ್ಪಣೆ

**ಮುಂಬೈ:** 60 ವರ್ಷದ ಹಿಂದೆ ಸಿದ್ಧಗೊಂಡ ಕನಸಿನ ಯೋಜನೆ, ದೇಶದ ಅತಿ ಉದ್ದದ ಸಮುದ್ರ ಸೇತುವೆಯಾದ ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್ ಅನ್ನು ಇಂದು ಪ್ರಧಾನಿ ನರೇಂದ್ರ ಮೋದಿ ಲೋಕಾರ್ಪಣೆ ಮಾಡಿದರು.



ಮುಂಬೈನ ಸೆವ್ರಿ ಮತ್ತು ರಾಯಗಡ ಜಿಲ್ಲೆಯ ನ್ಹವಾ ಶೇವಾ ಪ್ರದೇಶದ ನಡುವಿನ 21.8 ಕಿಲೋಮೀಟರ್ ಉದ್ದದ ಸೇತುವೆಯು ಪ್ರಸ್ತುತ ಎರಡು ಗಂಟೆಗಳಿಂದ ಸುಮಾರು 15-20 ನಿಮಿಷಗಳಿಗೆ ಪ್ರಯಾಣದ ಅವಧಿಯನ್ನು ಕಡಿಮೆ ಮಾಡಲಿದೆ. ಪುಟ 2

### ಇ-ಕೆವೈಸಿಗೆ ಗ್ರಾಹಕರಿಂದ ಭಾರತ್ ಗ್ಯಾಸ್ ಏಜೆನ್ಸಿಯಿಂದ ಲಂಚ ವಸೂಲಿ



**ಕೋಲಾರ:** ಉಚಿತವಾಗಿ ಇ-ಕೆವೈಸಿ ಮಾಡುವ ನಿರ್ದೇಶನವಿದ್ದರೂ ಅಡುಗೆ ಅನಿಲ ಗ್ರಾಹಕರಿಂದ ಭಾರತ್ ಗ್ಯಾಸ್ ಏಜನ್ಸಿ ಲಂಚ ವಸೂಲಿ ಮಾಡುತ್ತಿರುವ ಆರೋಪ ಕೋಲಾರ ಜಿಲ್ಲೆಯ ಬಂಗಾರಪೇಟೆ ಪಟ್ಟಣದ ಕೇಳಿಬಂದಿದೆ. ಇದರ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಪುಟ 2

### ಬೆಳಗಾವಿಯಲ್ಲಿ ಮಹಾರಾಷ್ಟ್ರ ಆರೋಗ್ಯ ವಿಮೆ ಜಾರಿ

## ಕೆಎಲ್‌ಇ, ಅರಿಹಂತ ಆಸ್ಪತ್ರೆಗೆ ನೋಟಿಸ್

**ಬೆಳಗಾವಿ:** ಮಹಾರಾಷ್ಟ್ರ ಸರ್ಕಾರದ ಆರೋಗ್ಯ ವಿಮೆ ಜಾರಿ ವಿಚಾರವಾಗಿ ಬೆಳಗಾವಿಯ ಕೆಎಲ್‌ಇ ಹಾಗೂ ಅರಿಹಂತ ಆಸ್ಪತ್ರೆಗೆ ನೋಟಿಸ್ ಜಾರಿ ಮಾಡಲಾಗಿದೆ. ಮಹಾರಾಷ್ಟ್ರ ಆರೋಗ್ಯ ವಿಮೆಯನ್ನು ಆರೋಗ್ಯ ಇಲಾಖೆ ಗಮನಕ್ಕೆ ತರದೇ ಅನುಷ್ಠಾನಗೊಳಿಸಿದ್ದಕ್ಕಾಗಿ ಡಿಎಚ್‌ಓ ಡಾ. ಮಹೇಶ್ ಕೋಣಿ ನೋಟಿಸ್ ಜಾರಿ ಮಾಡಿದ್ದಾರೆ. ಯಾವ ಕಾನೂನಿಡಿ ಮಹಾರಾಷ್ಟ್ರ ಆರೋಗ್ಯ ವಿಮೆಗೆ ಸಂಬಂಧಿಸಿ ಒಡಂಬಡಿಕೆ ಮಾಡಿಕೊಂಡಿದ್ದೀರಿ ಅದರಡಿ ಇಲ್ಲಿಯ ವರೆಗೆ ಚಿಕಿತ್ಸೆ ಪಡೆದವರ ಸಂಖ್ಯೆ ಎಷ್ಟು ಎಂದು ಪ್ರಶ್ನಿಸಿ ರೋಗಿಗಳ ವಿವಿರ ಸಮೇತ ಮಾಹಿತಿ ನೀಡಲು ನೋಟಿಸ್ ನಲ್ಲಿ ಸೂಚಿಸಲಾಗಿದೆ.




ನೋಟಿಸ್ ತಲುಪಿದ 24 ಗಂಟೆಯಲ್ಲಿ ಉತ್ತರ ನೀಡಬೇಕು ಎಂದೂ ಸೂಚಿಸಲಾಗಿದೆ. ಈ ಮಧ್ಯೆ, ಗಡಿ ವಿಚಾರದಲ್ಲಿ ಮಹಾರಾಷ್ಟ್ರ ಸರ್ಕಾರ ಮತ್ತೆ ಉದ್ಧಟತನ ತೋರಿದೆ. ಪುಟ 2

### ನಿಷೇಧಾಜ್ಞೆ ಉಲ್ಲಂಘಿಸಿ ಬೈಕ್ ರ್‍ಯಾಲಿ ನಡೆಸಿದ್ದ ಪ್ರಕರಣ

## ಮಂಡ್ಯದ 17 ಬಿಜೆಪಿ ಕಾರ್ಯಕರ್ತರಿಗೆ ಸಮನ್ಸ್

**ಮಂಡ್ಯ:** ನಿಷೇಧಾಜ್ಞೆ ಉಲ್ಲಂಘಿಸಿ 2017ರಲ್ಲಿ ಬೈಕ್ ರ್‍ಯಾಲಿ ನಡೆಸಿದ್ದ ಪ್ರಕರಣಕ್ಕೆ ಸಂಬಂಧಿಸಿ ಮಂಡ್ಯ ಬಿಜೆಪಿಯ 17 ಮಂದಿ ಕಾರ್ಯಕರ್ತರಿಗೆ ಪಾಂಡವಪುರ ಜೆಎಂಎಫ್ ಸಿ ಕೋರ್ಟ್ ಸಮನ್ಸ್ ಜಾರಿಗೊಳಿಸಿದೆ. ಈ ಕಾರ್ಯಕರ್ತರು ಎಸ್ ಡಿಪಿಐ, ಪಿಎಫ್ ಐ ಸಂಘಟನೆಗಳ ವಿರುದ್ಧದ ಪ್ರತಿಭಟನೆಗೆ ಮಂಗಳೂರಿಗೆ ಹೊರಟಿದ್ದರು. ಪಾಂಡವಪುರದಿಂದ ಮಂಗಳೂರಿಗೆ ಬೈಕ್ ರ್‍ಯಾಲಿ ಮೂಲಕ ಹೊರಟಿದ್ದರು. ಇದೇ ವೇಳೆ ಪಾಂಡವಪುರದಲ್ಲಿ ಪ್ರತಿಭಟನಾಕಾರರನ್ನು ತಡೆದಿದ್ದ ಪೊಲೀಸರು, ಎಫ್ ಐಆರ್ ದಾಖಲಿಸಿ ನಂತರ ಚಾರ್ಜ್ ಶೀಟ್ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆಗೆ ಕೋರ್ಟ್ ಗೆ ಹಾಜರಾಗದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರಿಗೆ ಸಮನ್ಸ್ ಜಾರಿ ಮಾಡಲಾಗಿದೆ. ಡಿಸೆಂಬರ್ ತಿಂಗಳಲ್ಲೇ ಕೋರ್ಟ್ ಸಮನ್ಸ್ ಜಾರಿ ಮಾಡಿದ್ದು, ಇದೀಗ ಮಾಹಿತಿ ಬಹಿರಂಗಗೊಂಡಿದೆ.



ಒಂದೆಡೆ, ಬಿಜೆಪಿ ಕಾರ್ಯಕರ್ತರ ಹಾಗೂ ಹಿಂದೂ ಪರ ಸಂಘಟನೆಗಳ ಕಾರ್ಯಕರ್ತರ ವಿರುದ್ಧದ ಪ್ರಕರಣಗಳನ್ನು ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ರಿಓಪನ್ ಮಾಡುತ್ತಿದೆ ಎಂಬ ಪುಟ 2

## ಕೇಂದ್ರದ ವಿರುದ್ಧ ಮಹದೇವಪ್ಪ ಕಿಡಿ



**ಬೆಂಗಳೂರು:** ಅನ್ನಭಾಗ್ಯ ಯೋಜನೆಗೆ ಅಕ್ಕಿ ನೀಡದ ಕೇಂದ್ರ ಸರ್ಕಾರ ಧರ್ಮದ ಹೆಸರಲ್ಲಿ ಅಕ್ಷತೆಯ ಗಂಟನ್ನು ಮನೆ ಮನೆಗೆ ಕಳಿಸುತ್ತಿರುವುದು ನೈಜ ಧರ್ಮದ ಕಲ್ಪನೆಗೆ ವಿರುದ್ಧವಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಎಚ್‌ಸಿ ಮಹದೇವಪ್ಪ ಕಿಡಿಕಾರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಸಂಬಂಧ ಕೇಂದ್ರ ಸರ್ಕಾರ ನಡೆಯನ್ನು ವಿರೋಧಿಸಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಹಸಿವು ಮುಕ್ತ ಕರ್ನಾಟಕದ ಉದ್ದೇಶದಿಂದ ಜಾರಿಗೊಳಿಸಿದ್ದ ಅನ್ನಭಾಗ್ಯ ಯೋಜನೆಗೆ ಹೆಚ್ಚಿನ ಹಣ ನೀಡಿ ಕೊಂಡುಕೊಳ್ಳುತ್ತೇವೆ ಎಂದಾಗಲೂ ಕೇಂದ್ರದಿಂದ ಅಕ್ಕಿ ನೀಡದವರು ಈ ದಿನ ಧರ್ಮದ ಹೆಸರಲ್ಲಿ ಅಕ್ಷತೆಯ ಗಂಟನ್ನು ಮನೆ ಮನೆಗೆ ಕಳಿಸುತ್ತಿರುವುದು ನೈಜ ಧರ್ಮದ ಕಲ್ಪನೆಗೆ ವಿರುದ್ಧವಾಗಿದೆ. ಬಡವರ ಹಸಿವಿಗೆ ಅನ್ನ ನೀಡುವುದಕ್ಕಿಂತಲೂ ದೊಡ್ಡ ಧರ್ಮ ಇದೆಯೇ ಬಡವರ ಹಸಿವಿಗೆ ನೀಡುವ ಅನ್ನದ ವಿಷಯದಲ್ಲೂ ರಾಜಕೀಯ ಮಾಡುವಂತಹ ಅಮಾನವೀಯ ಪ್ರವೃತ್ತಿ ತೋರಿದ ಇವರು ಧರ್ಮದ ಕುರಿತಂತೆ ಮಾತನಾಡುತ್ತಿದ್ದರೆ ಅದನ್ನು ಕಂಡು ನಗಬೇಕೋ ಅಳಬೇಕೋ ಎಂದು ನನಗೆ ತಿಳಿಯುತ್ತಿಲ್ಲ.

## ನಾವು ಶ್ರೀರಾಮಚಂದ್ರನನ್ನು ಪೂಜಿಸ್ತೀವಿ ಬಿಜೆಪಿ ರಾಜಕೀಯಕ್ಕೆ ನಮ್ಮ ವಿರೋಧ

**ಬೆಂಗಳೂರು:** ನಾವು ಶ್ರೀರಾಮಚಂದ್ರನ ವಿರುದ್ಧ ಇಲ್ಲ. ಬಿಜೆಪಿ ಅವರು ರಾಮ ಮಂದಿರವನ್ನು ರಾಜಕೀಯ ವಸ್ತುವನ್ನಾಗಿ ಮಾಡಿಕೊಂಡಿದ್ದಾರೆ. ಅದನ್ನು ನಾವು ಖಂಡಿಸುತ್ತಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಲ್ಲಿ ಮಾತನಾಡಿದ ಅವರು, ನಾವು ಶ್ರೀರಾಮಚಂದ್ರನ ಭಕ್ತರು, ನಾವು ಶ್ರೀರಾಮಚಂದ್ರನ ಪೂಜೆ ಮಾಡುತ್ತೇವೆ. ಕೇದ್ರ ಸಚಿವರುಗಳು ರಾಜಕೀಯ ಮಾತನಾಡುತ್ತಿದ್ದಾರೆ ಅಷ್ಟೇ. ರಾಜಕೀಯ ಮಾತನಾಡೋರಿಗೆ ಔಷಧವಿಲ್ಲ ಎಂದು ಕಿಡಿಕಾರಿದರು.



ನಾವು ಶ್ರೀರಾಮಚಂದ್ರನ ವಿರುದ್ಧವಿಲ್ಲ. ಶ್ರೀರಾಮಚಂದ್ರನನ್ನ ನಾವು ಗೌರವಿಸುತ್ತೇವೆ, ಪೂಜೆ ಮಾಡುತ್ತೇವೆ. ಭಜನೆ ಮಾಡುತ್ತೇವೆ. ರಾಮಮಂದಿರಕ್ಕೆ ನಮ್ಮದು ವಿರೋಧವಿಲ್ಲ. ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ. ಅದಕ್ಕೆ ನಮ್ಮ ವಿರೋಧ ಎಂದು ಸ್ಪಷ್ಟಪಡಿಸಿದರು. ಇದೇ ವೇಳೆ ಯಡಿಯೂರಪ್ಪನವರು ಆರೋಪಕ್ಕೆ ಕಿಡಿಕಾರಿದ ಅವರು, ಈಗ ಯಾಕೆ ಇವರು ಅಯೋಧ್ಯೆಗೆ ಹೋಗುತ್ತಿದ್ದಾರೆ. ಶ್ರೀರಾಮಚಂದ್ರ ಇಲ್ಲಿ ಇಲ್ವಾ ಇಲ್ಲೂ ಎಲ್ಲಾ ಪೂಜೆ ಮಾಡುತ್ತಿದ್ದಾರೆ. ಅಷ್ಟೇ ಎಂದು ಸಿಎಂ ತಿರುಗೇಟು ಕೊಟ್ಟರು. ರಾಜ್ಯ ಸರ್ಕಾರದಿಂದ 22 ರಂದು ಎಲ್ಲಾ ಮುಜರಾಯಿ ದೇವಾಲಯಗಳಲ್ಲಿ ಪೂಜೆ ಸಲ್ಲಿಸಲು ಆದೇಶ ಮಾಡಿರುವ ವಿಚಾರದ ಬಗ್ಗೆ ನನಗೆ ಗೊತ್ತಿಲ್ಲ ಎಂದು ಸಿಎಂ ಹೇಳಿದರು. ಮುಜರಾಯಿ ಇಲಾಖೆಯ ಆದೇಶವೇ ಗೊತ್ತಿಲ್ಲ, ಆ ಹೇಳಿಕೆ ನಾನು ಕೊಟ್ಟಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ ಕೊಟ್ಟಿದ್ದಾರೆ.

# ಕೋಟಿ ಕೋಟಿ ಹಣದಾಸೆಗೆ ವೇಶ್ಯಾವಾಟಿಕೆ ಆರಂಭಿಸಿದ ಟೆಕ್ಕಿ

**ಬೆಂಗಳೂರು:** ಒಂದೂವರೆ ಲಕ್ಷ ಸಂಬಳದ ಕೆಲಸದಲ್ಲಿದ್ದ ಟೆಕ್ಕಿ ಹಣದ ದಾಹಕ್ಕೆ ಬಿದ್ದು ಸ್ಟಾಕ್ ಮಾರ್ಕೆಟ್‌ನಲ್ಲಿ ಹೂಡಿಕೆ ಮಾಡಿ ಹಣ ಕಳೆದುಕೊಂಡು ಲಕ್ಷಲಕ್ಷ ಸಾಲ ಮಾಡಿದನು. ಆದರೆ ತಂತ್ರಜ್ಞಾನದಲ್ಲಿ ಹೆಚ್ಚಿನ ಜ್ಞಾನ ಹೊಂದಿದ್ದ ಈತ ಕೆಲಸಕ್ಕೆ ಗುಡ್ ಬೈ ಹೇಳಿ ಮ್ಯಾಟ್ರಿಮೋನಿ ಮಾದರಿಯ ಆ್ಯಪ್ ಅಭಿವೃದ್ಧಿ ಮಾಡಿ ಹಣ ಸಂಪಾದಿಸುತ್ತಿದ್ದನು. ನಂತರ ಕೋಟ್ಯಾಂತರ ರೂಪಾಯಿ ಸಂಪಾದಿಸಲು ಈ ಟೆಕ್ಕಿ ಹಿಡಿದಿದ್ದೇ ವೇಶ್ಯಾವಾಟಿಕೆ ದಂಧೆಯ ಹಾದಿ!

ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಟೆಕ್ಕಿಯಾಗಿ ಕೆಲಸ ಮಾಡುತ್ತಿದ್ದ ವೈಶಾಕ್‌ಗೆ ವೇತನಕ್ಕೇನು ಕೊರತೆ ಇರಲಿಲ್ಲ. ತಿಂಗಳಿಗೆ ಒಂದೂವರೆ ಲಕ್ಷ ರೂಪಾಯಿ ಸಂಬಳ ಪಡೆಯುತ್ತಿದ್ದನು. ಹೈಟೆಕ್ ಲೈಫ್ ಸಾಗಿಸುತ್ತಿದ್ದನು. ಆದರೆ ಸ್ಟಾಕ್ ಮಾರ್ಕೆಟ್ ಹುಚ್ಚಿಗೆ ಬಿದ್ದ ವೈಶಾಕ್ ಅದರಲ್ಲಿ ಹೂಡಿಕೆ ಮಾಡಿ ಹಣ ಕಳೆದುಕೊಂಡಿದ್ದಾನೆ. ಅಲ್ಲದೆ, ಲಕ್ಷ ಲಕ್ಷ ಸಾಲ ಮಾಡಿದ್ದಾನೆ. ಟೆಕ್ನಾಲಜಿಯಲ್ಲಿ ತಂತ್ರಾಜ್ಞಾನದಲ್ಲಿ ಜ್ಞಾನ ಹೊಂದಿದ್ದ ವೈಶಾಕ್, ಉತ್ತಮ ವೇತನದ ಕೆಲಸ ಬಿಟ್ಟು ತಲೆ ಕೆಡಿಸಿಕೊಂಡಿದ್ದನು. ನಂತರ ಹಣ ಸಂಪಾದಿಸಲು ಮ್ಯಾಟ್ರಿಮೋನಿ ಮಾದರಿಯ ಆ್ಯಪ್ ಅಭಿವೃದ್ಧಿಪಡಿಸಿ ಅದರಲ್ಲಿ ವಿವಾಹವಾಗಲು ಇಚ್ಛಿಸುತ್ತಿರುವ ಯುವಕ-ಯುವತಿಯರನ್ನು ಆ್ಯಡ್ ಮಾಡಿ ಸಂಪರ್ಕ ಕಲ್ಪಿಸುತ್ತಿದ್ದನು. ಇಬ್ಬರಿಗೂ ಪರಸ್ಪರ ಕಾಂಟ್ಯಾಕ್ಟ್ ಮಾಡಿಸಲು ಹಣ ಪಡೆಯುತ್ತಿದ್ದನು. ಹೀಗೆ ಉತ್ತಮ ರೀತಿಯಲ್ಲಿ ಬ್ಯುಸಿನೆಸ್ ಸಾಗುತ್ತಿದ್ದಂತೆ ಬಿಟೆಕ್ ಮುಗಿಸಿದ್ದ ಗೋವಿಂದರಾಜು ಎಂಬಾತ ಈ ಆ್ಯಪ್‌ಗೆ ಎಂಟ್ರಿಕೊಟ್ಟಿದ್ದಾನೆ. ಆ್ಯಪ್‌ನ ಪ್ರೈವಸಿ ವರ್ಕ್ ನೋಡಿ ಶಾಕ್ ಆಗಿದ್ದ ಗೋವಿಂದರಾಜು, ವೈಶಾಕ್‌ನನ್ನು ಸಂಪರ್ಕಿಸಿ ಮ್ಯಾಟ್ರಿಮೋನಿ ಕೆಲಸದ ಬದಲು ವೇಶ್ಯಾವಾಟಿಕೆ ದಂಧೆ ನಡೆಸುವಂತೆ ಖತರ್ನಾಕ್ ಐಡಿಯಾ ಕೊಟ್ಟಿದ್ದಾನೆ.



ಅಲ್ಲದೆ, ವಿದೇಶಿ ಮಹಿಳೆಯರಿಗೆ ಸಖತ್ ಡಿಮ್ಯಾಂಡ್ ಇದೆ, ಕೋಟಿ ಕೋಟಿ ಹಣ ಮಾಡಬಹುದು ಎಂದು ಮೈಂಡ್ ವಾಶ್ ಮಾಡಿದ್ದಾನೆ. ಅದಾಗಲೇ ಗೋವಿಂದರಾಜು ವಿದೇಶಿ ಪಿಂಪ್ ಜೊತೆ ಸಂಪರ್ದದಲ್ಲಿದ್ದ. ಆಕೆಯಿಂದ ವಿದೇಶಿ ಯುವತಿಯರು ಸಿಗುತ್ತಾರೆ. ನೀನು ಕಾಂಟೆಕ್ಟ್‌ನಲ್ಲಿ ಗ್ರಾಹಕರನ್ನು ಹುಡುಕು ಎಂದು ವೈಶಾಕ್‌ಗೆ ಹೇಳಿದ್ದಾನೆ.

ಕೋಟಿ ಕೋಟಿ ಹಣ ಸಂಪಾದಿಸಲು ದಂಧೆಗೆ ಇಳಿದ ವೈಶಾಗ್‌ಗೆ ಗೋವಿಂದರಾಜು ಆತನ ಆ್ಯಪ್‌ನಲ್ಲಿದ್ದ ಕೆಲವು ಕಸ್ಟಮರ್‌ಗಳನ್ನು ಹುಡುಕಿ ಕೊಡುತ್ತಿದ್ದ. ದಿನ ಕಳೆದಂತೆ ಈ ದಂಧೆಯಿಂದ ಹೆಚ್ಚಿನ ಹಣ ಬರುವುದನ್ನು ನೋಡಿದ ವೈಶಾಕ್, ಇತರೆ ಇಬ್ಬರೊಂದಿಗೆ ಸೇರಿಕೊಂಡು ಹಲವು ವರ್ಷಗಳಿಂದ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದನು. ಸದ್ಯ, ಈ ದಂಧೆ ಬೆಳಕಿಗೆ ಬಂದಿದೆ. ರಷ್ಯಾ, ಖಜಕಿಸ್ತಾನ ಸೇರಿ ಬೇರೆ ಬೇರೆ ದೇಶಗಳಿಂದ ಯುವತಿಯರನ್ನು ಕರೆಸುತ್ತಿದ್ದರು. ಈ ವಿಚಾರ ತಿಳಿದ ಬೆಂಗಳೂರು ನಗರದ ಬೈಯ್ಯಪ್ಪನಹಳ್ಳಿ ಠಾಣಾ ಪೊಲೀಸರು, ಆರೋಪಿಗಳಾದ ವಿದೇಶಿ ಮಹಿಳೆ, ಗೋವಿಂದರಾಜು ಹಾಗೂ ವೈಶಾಕ್‌ನನ್ನ ಬಂಧಿಸಿದ್ದಾರೆ.

# ತನ್ನ ಪ್ರೀತಿಗೆ ಅಡ್ಡಿಯಾದ ಅಂತ ಭಾವನನ್ನೆ ಕೊಲ್ಲಿಸಿದ ನಾದಿನಿ

**ಕಲಬುರಗಿ:** ಆವತ್ತು ನಿರ್ಜನ ಪ್ರದೇಶದಲ್ಲಿ ವ್ಯಕಿಯೋರ್ವನ ಶವ ಪತ್ತೆಯಾಗಿತ್ತು. ಕೂಲಿ ಕೆಲಸ ಮಾಡುತ್ತಾ ಜೀವನ ಸಾಗಿಸುತ್ತಿದ್ದ ಅಂಬರಾಯ ಎಂಬಾತನನ್ನು ಅದ್ಯಾರೋ ಬರ್ಬರ ಹತ್ಯೆ ಮಾಡಿದ್ದರು. ಆ ಹತ್ಯೆ ಕೇಸ್ ಬಿಗ್ ಟ್ವಿಸ್ಟ್ ಸಿಕ್ಕಿದ್ದು, ಪತ್ನಿಯ ತಂಗಿಯೇ ತನ್ನ ಪ್ರಿಯಕರನ ಜೊತೆ ಸೇರಿಕೊಂಡು ಮರ್ಡರ್ ಮಾಡಿಸಿದ್ದಾಳೆ. ಹೌದು. ಕಲಬುರಗಿ ಜಿಲ್ಲೆ ಕಮಲಾಪುರ ತಾಲೂಕಿನ ಓಕಳಿ ರಸ್ತೆಯ, ನಿರ್ಜನ ಪ್ರದೇಶದಲ್ಲಿ ವ್ಯಕ್ತಿಯೋರ್ವನ ಶವ ಸಿಕ್ಕಿದ್ದ ಕೇಸ್‌ಗೆ ಮೆಗಾ ಟ್ವಿಸ್ಟ್ ಸಿಕ್ಕಿದೆ. ಕೇಸ್ ಬೆನ್ನತ್ತಿದ ಪೊಲೀಸರಿಗೆ ಶಾಕ್ ಆಗಿದೆ. ಯಾಕೆಂದರೆ ಅಲ್ಲಿ ಕೊಲೆಗಾರರು ಬೇರ್‍ಯಾರು ಅಲ್ಲ, ಭೀಕರವಾಗಿ ಹತ್ಯೆಯಾಗಿರೋ ಅಂಬರಾಯ ಪಟ್ಟೆದಾರ್‌ನ ಪತ್ನಿಯ ತಂಗಿಯೇ ಕೊಲೆಯ ಸೂತ್ರಧಾರಿ ಅನ್ನೋ ಅಂಶ ಬೆಳಕಿಗೆ ಬಂದಿದೆ. ತನ್ನ ಪ್ರೀತಿಗೆ ಅಡ್ಡಿಯಾಗಿದ್ದು ಮತ್ತು ತನ್ನೊಂದಿಗೆ ಸಹಕರಿಸು ಅಂತ ಭಾವನಾದ ಅಂಬರಾಯ ಪ್ರತಿನಿತ್ಯ ಪೀಡಿಸುತ್ತಿದ್ದನಂತೆ. ಇದರಿಂದ ಬೇಸತ್ತ ನಾದಿನಿ ಅಂಬಿಕಾ ತನ್ನ ಪ್ರಿಯಕರನಿಗೆ ವಿಷಯ ತಿಳಿಸಿದ್ದಳಂತೆ. ಅದಕ್ಕೊಂದು ಪರಿಹಾರ ಹುಡುಕು, ಇಲ್ಲದಿದ್ದರೇ ಆತ ನನ್ನನ್ನು ಸುಮ್ಮನ್ನೆ ಬಿಡೋದಿಲ್ಲ ಅಂದಿದ್ದಳು. ಅದರಂತಯೇ ಆವತ್ತು ಪ್ರಿಯಕರನೊಂದಿಗೆ ಸೇರಿ ಭಾವನನ್ನೆ ಹತ್ಯೆ ಮಾಡಿಸಿದ್ದಾಳೆ ಕಿರಾತಕಿ ಅಂಬಿಕಾ ಅಲಿಯಾಸ್ ರಾಧಿಕಾ. ಆವತ್ತು ಭಾವನ ಶವ ಸಿಗುತ್ತಿದ್ದಂತೆ ಇಡೀ ಕುಟುಂಬ ಶೋಕ ಸಾಗರದಲ್ಲಿತ್ತು. ಅಷ್ಟೆ ಏಕೆ ಈ ಅಂಬಿಕಾ ಕೂಡಾ ತನಗೇನು ಗೊತ್ತೆ ಇಲ್ಲ ಎನ್ನುವಂತೆ ನಾಟಕ ಮಾಡಿದ್ದಳು. ಆದರೆ ಪೊಲೀಸರ ತನಿಖೆ ವೇಳೆ ಬೆಚ್ಚಿ ಬಿಳಿಸೋ ಅಂಶ ಬಯಲಿಗೆ ಬಂದಿದ್ದು, ಖುದ್ದು ನಾದಿನಿಯೇ ಕೊಲೆಯ ಸೂತ್ರಧಾರಿ ಮತ್ತು ಆಕೆಯೇ ತನ್ನ ಪ್ರಿಯಕರನಿಗೆ ಹೇಳಿ ಕೊಲೆ ಮಾಡಿಸಿದ್ದಾಳೆ ಎನ್ನೋದು ಬೆಳಕಿಗೆ ಬಂದಿದೆ. ಸದ್ಯ ಕೊಲೆಗಾರ್ತಿ ಅಂಬಿಕಾ ಸೇರಿದಂತೆ ಏಳು ಜನ ಆರೋಪಿಗಳನ್ನ ಪೊಲೀಸರು ಬಂಧಿಸಿ ಜೈಲಿಗಟ್ಟಿದ್ದಾರೆ.





# 34 ಸ್ಕ್ಯಾನಿಂಗ್ ಸೆಂಟರ್ ಸೀಜ್

**ಬೆಂಗಳೂರು:** ರಾಜ್ಯಾದ್ಯಂತ ಆರೋಗ್ಯ ಇಲಾಖೆ ಅಧಿಕಾರಿಗಳು ಹಲವೆಡೆ ದಾಳಿ ನಡೆಸಿ, ಭ್ರೂಣದ ಲಿಂಗ ಪತ್ತೆ ಮಾಡಿ ಬಹಿರಂಗಪಡಿಸುವಂತಹ ಅಕ್ರಮ ಚಟುವಟಿಕೆಗಳ ಆರೋಪದ ಮೇಲೆ 34 ಸ್ಕ್ಯಾನಿಂಗ್ ಸೆಂಟರ್‌ಗಳನ್ನು ಮುಚ್ಚಿದ್ದಾರೆ. ದಾಳಿ ವೇಳೆ ಅಧಿಕಾರಿಗಳು 156 ಮಂದಿ ನಕಲಿ ವೈದ್ಯರನ್ನೂ ಪತ್ತೆ ಹಚ್ಚಿದ್ದು, ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಈ ಮಧ್ಯೆ, ಆರೋಗ್ಯ ಇಲಾಖೆ ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಆಘಾತಕಾರಿ ವಿವರಗಳು ಬಯಲಿಗೆ ಬಂದಿವೆ.

ಭ್ರೂಣದ ಅಕ್ರಮ ಲಿಂಗ ಪತ್ತೆ ಮತ್ತು ಗರ್ಭಪಾತ ಪ್ರಕರಣಗಳ ಬಗ್ಗೆ ತಿಳಿಯಲು ಎಲ್ಲಾ ಸ್ಕ್ಯಾನಿಂಗ್ ಸೆಂಟರ್‌ಗಳು ಮತ್ತು ಕ್ಲಿನಿಕ್‌ಗಳಲ್ಲಿ ತಪಾಸಣೆ ನಡೆಸುವಂತೆ ಆರೋಗ್ಯ ಇಲಾಖೆಯು ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳು ಮತ್ತು ಸಮುದಾಯ ಆರೋಗ್ಯಾಧಿಕಾರಿಗಳಿಗೆ ಆದೇಶ ನೀಡಿದೆ.

ಆದಷ್ಟು ಬೇಗ ವರದಿ ಸಲ್ಲಿಸುವಂತೆ ರಾಜ್ಯ ಸರ್ಕಾರ ಅಧಿಕಾರಿಗಳಿಗೆ ಆದೇಶ ನೀಡಿದೆ. 5,083 ಸ್ಕ್ಯಾನಿಂಗ್ ಸೆಂಟರ್‌ಗಳು ಮತ್ತು ನರ್ಸಿಂಗ್ ಹೋಂಗಳಲ್ಲಿ ಒಂದು ತಿಂಗಳ ಕಾಲ ತಪಾಸಣೆ ನಡೆಸಿದ ನಂತರ ಅಧಿಕಾರಿಗಳು ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ.

ಅಕ್ರಮಗಳನ್ನೆಸಗಿದ ಆರೋಪದ ಮೇಲೆ 34 ಸ್ಕ್ಯಾನಿಂಗ್ ಕೇಂದ್ರಗಳನ್ನು ಮುಚ್ಚಲಾಗಿದೆ ಮತ್ತು ವಿವಿಧ ವ್ಯತ್ಯಾಸಗಳ ಕುರಿತು 429 ಕೇಂದ್ರಗಳಿಗೆ ನೋಟಿಸ್ ನೀಡಲಾಗಿದೆ ಎಂದು ವರದಿ ತಿಳಿಸಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಗರಿಷ್ಠ ಸಂಖ್ಯೆಯ ಸ್ಕ್ಯಾನಿಂಗ್ ಕೇಂದ್ರಗಳನ್ನು ಮುಚ್ಚಲಾಗಿದೆ.



**156 ನಕಲಿ ವೈದ್ಯರು ಪತ್ತೆ:** ರಾಜ್ಯಾದ್ಯಂತ ನಡೆಸಿದ ದಾಳಿಯಲ್ಲಿ ಆರೋಗ್ಯ ಇಲಾಖೆ 156 ನಕಲಿ ವೈದ್ಯರನ್ನು ಪತ್ತೆ ಮಾಡಿದೆ. ಗ್ರಾಮೀಣ ಪ್ರದೇಶದಲ್ಲಿ ನಕಲಿ ವೈದ್ಯರ ಸಂಖ್ಯೆ ಹೆಚ್ಚಿದೆ. ಈ ಅಕ್ರಮ ವೈದ್ಯಾಧಿಕಾರಿಗಳ ವಿರುದ್ಧ ಇಲಾಖೆ ಕ್ರಮ ಕೈಗೊಂಡಿದೆ ಎಂದು ವರದಿ ತಿಳಿಸಿದೆ.

# ಬಿಜೆಪಿ ಅಭಿಪ್ರಾಯ ಸಂಗ್ರಹಣೆ ಸಭೆ: ಮುಖಂಡರಿಂದ ಭಿನ್ನ ಅಭಿಪ್ರಾಯಗಳು

**ಬೆಂಗಳೂರು:** ಲೋಕಸಭೆ ಚುನಾವಣೆಗೆ ಉಡುಪಿ-ಚಿಕ್ಕಮಗಳೂರು, ಉತ್ತರ ಕನ್ನಡ, ಶಿವಮೊಗ್ಗ ಮತ್ತು ದಕ್ಷಿಣ ಕನ್ನಡ ಕ್ಷೇತ್ರಗಳಲ್ಲಿ ಯಾವ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕು ಎಂದು ಬಿಜೆಪಿ ನಾಯಕರು ಬೆಂಗಳೂರು ನಗರದ ಯಲಹಂಕದಲ್ಲಿರುವ ಖಾಸಗಿ ರೆಸಾರ್ಟ್‌ನಲ್ಲಿ ಅಭಿಪ್ರಾಯ ಸಂಗ್ರಹಿಸಿದ್ದಾರೆ. ಆದರೆ, ಸಭೆಯಲ್ಲಿ ಪುತ್ತೂರು ಕ್ಷೇತ್ರದಲ್ಲಿ ಅರುಣ್ ಕುಮಾರ್ ಪುತ್ತಿಲ ಬಂಡಾಯದ ಸ್ಪರ್ಧೆಯಿಂದ ಬಿಜೆಪಿ ಹೊಡೆತ ತಿಂದ ಬಗ್ಗೆ ಹೆಚ್ಚು ಚರ್ಚೆಯಾಗಿದೆ. ಇಂತಹ ತಪ್ಪು ನಿರ್ಧಾರ ಕೈಗೊಳ್ಳದಂತೆ ಮುಖಂಡರು ಎಚ್ಚರಿಕೆಯ ಸಲಹೆಯನ್ನು ನೀಡಿದ್ದಾರೆ.



ದಕ್ಷಿಣ ಕನ್ನಡ ಲೋಕಸಭಾ ಕ್ಷೇತ್ರದ ಅಭಿಪ್ರಾಯ ಸಂಗ್ರಹದ ವೇಳೆ ವಿಧಾನಸಭಾ ಚುನಾವಣೆಯಲ್ಲಿನ ಪುತ್ತೂರು ಕ್ಷೇತ್ರದಲ್ಲಿ ಪಕ್ಷದ ಸೋಲಿನ ಬಗ್ಗೆಯೇ ಹೆಚ್ಚು ಚರ್ಚೆ ನಡೆಯಿತು. ಸುಳ್ಯದಿಂದ ಅಭ್ಯರ್ಥಿ ಕರೆದುಕೊಂಡು ಬಂದು ಪುತ್ತೂರಿನಲ್ಲಿ ಟಿಕೆಟ್ ಕೊಟ್ಟಿದ್ದು ಸೋಲಿಗೆ ಕಾರಣವಾಗಿದೆ. ಆ ರೀತಿ ಮಾಡಬಾರದಿತ್ತು. ಪಕ್ಷೇತರ ಅಭ್ಯರ್ಥಿಯಾಗಿದ್ದ ಅರುಣ್ ಕುಮಾರ್ ಪುತ್ತಿಲ ಕೂಡಾ ನಮ್ಮವರೇ. ಲೋಕಸಭಾ ಚುನಾವಣೆಗೆ ಎಲ್ಲರೂ ಒಟ್ಟಿಗೆ ಹೋಗುವ ಕೆಲಸ ಆಗಬೇಕು ಎಂದು ಮುಖಂಡರು ಸಲಹೆ ನೀಡಿದ್ದಾರೆ. ಸಭೆಗೆ ದಕ್ಷಿಣ ಕನ್ನಡ ಜಿಲ್ಲೆಯ ಹಾಲಿ ಸಂಸದ ನಳಿನ್ ಕುಮಾರ್ ಕಟೀಲ್ ಗೈರಾಗಿದ್ದಾರೆ. ಜಿಲ್ಲೆಯಲ್ಲಿ ಕಟೀಲ್ ಅವರಿಗೆ ಟಿಕೆಟ್ ನೀಡದಂತೆ ಬಿಜೆಪಿ ಕಾರ್ಯಕರ್ತರೇ ಹೇಳುತ್ತಿದ್ದಾರೆ. ಕಟೀಲ್ ಕೆಲಸದ ಬಗ್ಗೆಯೂ ಟೀಕಿಸುತ್ತಿದ್ದಾರೆ. ಈ ನಡುವೆ ಪುತ್ತೂರು ಕ್ಷೇತ್ರದಲ್ಲಿ ಬಿಜೆಪಿಯನ್ನು ಮೂರನೇ ಸ್ಥಾನಕ್ಕೆ ತಳ್ಳಿ ಕಾಂಗ್ರೆಸ್‌ಗೆ ಪ್ರಬಲ ಪೈಪೋಟಿ ನಡೆಸಿ ಸೋಲುಂಡಿರುವ ಹಿಂದೂ ಯುವ ನಾಯಕ ಅರುಣ್ ಕುಮಾರ್ ಪುತ್ತಿಲ ಅವರು ಪುತ್ತೂರು ಮಾತ್ರವಲ್ಲದೆ ಜಿಲ್ಲಾದ್ಯಂತ ಪ್ರವಾಸ ಮಾಡುತ್ತಿದ್ದಾರೆ. ಇವರಿಗೆ ಟಿಕೆಟ್ ನೀಡಬೇಕು ಎಂದು ಪುತ್ತಿಲ ಪರಿವಾರ ಒತ್ತಾಯಿಸುತ್ತಾ ಬರುತ್ತಿದೆ. ಉಡುಪಿ-ಚಿಕ್ಕಮಗಳೂರು ಅಭ್ಯರ್ಥಿ ಆಯ್ಕೆ ವೇಳೆ ಎಲ್ಲರ ಅಭಿಪ್ರಾಯ ಪಡೆದು ತೀರ್ಮಾನ ಮಾಡುವುದು ಸೂಕ್ತ. ಹಿಂದುತ್ವದ ಮೇಲೆಯೂ ಚುನಾವಣೆಗೆ ಹೋಗಬೇಕಾಗುತ್ತದೆ ಎಂದು ಉಡುಪಿ ಮತ್ತು ಚಿಕ್ಕಮಗಳೂರು ಕ್ಷೇತ್ರದ ಮುಖಂಡರು ಎರಡು ರೀತಿಯ ಅಭಿಪ್ರಾಯ ವ್ಯಕ್ತವಾಗಿದೆ. ಉಡುಪಿ-ಚಿಕ್ಕಮಗಳೂರು ಕ್ಷೇತ್ರದಲ್ಲಿ ಜಯಪ್ರಕಾಶ್ ಹೆಗ್ಡೆ ಕಾಂಗ್ರೆಸ್ ಅಭ್ಯರ್ಥಿಯಾದರೆ ಬಿಜೆಪಿ ಗೆಲುವಿಗೆ ಕಷ್ಟವಾಗಬಹುದು. ನಾವು ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಬೇಕಾಗುತ್ತದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಅಲ್ಲದೆ, ಅಭ್ಯರ್ಥಿ ಆಯ್ಕೆ ಮಾಡುವಾಗ ನೋಡಿ, ಯೋಚಿಸಿ ತೀರ್ಮಾನ ಮಾಡಿ ಎಂದು ಸಭೆಯಲ್ಲಿ ಮಾಜಿ ಸಚಿವ ಪ್ರಮೋದ್ ಮಧ್ವರಾಜ್ ಸಲಹೆ ನೀಡಿದ್ದಾರೆ.

## ತಪಸ್ಸು ನಡೆಸಿದ್ದ ಶ್ರೀರಾಮ...

ಅಲ್ಲಿ ರಾಮ ತಪಸ್ಸು ಮಾಡುವ ವಿಗ್ರಹ ಸಹ ಇದೆ. ಶ್ರೀರಾಮ, ಸೀತಾ ಮಾತೆ ಶಸ್ತ್ರಗಳಿಲ್ಲದೆ ಶಾಂತವಾಗಿ ಕುಳಿತಿರುವ ವಿಗ್ರಹಗಳಿವೆ. ಈ ರೀತಿಯ ವಿಗ್ರಹಗಳು ದೇಶದ ಬೇರೆ ಯಾವ ಭಾಗದಲ್ಲೂ ಕಾಣ ಸಿಗುವುದಿಲ್ಲ. ಜೊತೆಗೆ ಬಂಡೆಗಲ್ಲಿನ ಪರ್ವತದಲ್ಲಿ ಶ್ರೀರಾಮನ ಆಜ್ಞೆಯಂತೆ ಲಕ್ಷ್ಮಣ ಬಾಣ ಬಿಟ್ಟು ರಾಮ ತೀರ್ಥ ಸೃಷ್ಟಿ ಮಾಡಿದ ಅಗಾಂದ ಈಗಿನವರಗೆ ನೀರು ನಿರಂತರವಾಗಿ ಅಲ್ಲಿ ಸಿಗುತ್ತೆ. ಬಾಣದ ಗುರುತಿನ ಹಾಗೆ ರಾಮತೀರ್ಥವಿದೆ. ಅಲ್ಲೇ ಶ್ರೀರಾಮ ನಿತ್ಯ ಶಿವಲಿಂಗ ನಂದಿ ವಿಗ್ರಹಕ್ಕೆ ಪೂಜೆ ಸಲ್ಲಿಸುತ್ತಿದ್ದ ಎಂದು ಗೈಡ್ ಪರಶುರಾಮ ಮಳಗಿ ಮಹತ್ವದ ಮಾಹಿತಿ ನೀಡಿದ್ದಾರೆ.

ಇನ್ನು ಮಾಲ್ಯವಂತ ಪರ್ವತದ ಬಳಿ ರಾಮ ಲಕ್ಷ್ಮಣರ ದಿವ್ಯ ತೇಜಸ್ಸನ್ನು ಕಂಡು ಹನುಮಂತ.. ಪ್ರಭು ಶ್ರೀರಾಮ ಚಂದ್ರರು ಕಿಷ್ಕಿಂದಿಗೆ ಬಂದಿದ್ದಾರೆ ಅಂತಾ ಸುಗ್ರೀವರಿಗೆ ತಿಳಿಸುತ್ತಾರೆ. ಆಗ ಸುಗ್ರೀವ ತನ್ನ ಅಣ್ಣ ವಾಲಿಯಿಂದ ಬಚಾವಾಗಲು ವೃಷಿ ಮುನಿ ಬೆಟ್ಟದ ಮುಂದೆ ಇರುವ ಗುಹೆಯಲ್ಲಿ ವಾಸವಿರುತ್ತಾರೆ.

ಸುಗ್ರೀವ ಶ್ರೀರಾಮನನ್ನ ಭೇಟಿ ಮಾಡಿ ತನಗೆ ಆಗಿರು ಅನ್ಯಾಯವನ್ನ ಹೇಳಿಕೊಳ್ಳುತ್ತಾರೆ ಜೊತೆಗೆ ಸೀತಾ ಮಾತೆಯನ್ನ ರಾವಣ ಪುಷ್ಪಕ ವಿಮಾನದಲ್ಲಿ ಅಪಹರಿಸಿಕೊಂಡು ಹೋಗುತ್ತಿದ್ದ ವೇಳೆ.. ಆಭರಣಗಳನ್ನ ಚೆಲ್ಲುತ್ತಾ, ಮತ್ತು ತನ್ನ ಸೆರಗನ್ನು ಭೂಮಿಗೆ ಎಳೆಸುತ್ತ ಹೋಗಿದ್ದ ಗುರುತುಗಳನ್ನ ತೋರಿಸುತ್ತಾನೆ.

ನಂತರ ಆಭರಣಗಳನ್ನ ನೋಡಿದ ರಾಮ ಇದು ಸೀತೆಯದೇ ಅಂತಾ ಗೊತ್ತಾಗಿ ಅಲ್ಲಿಂದ ಸೀತೆಯ ಹುಡುಕಲು ವಾನರ ಸಹಾಯ ಕೇಳುತ್ತಾನೆ. ಆನಂತರವೇ ವಾಲಿಯನ್ನ ಸಂಹಾರ ಮಾಡಿ ಸುಗ್ರೀವನಿಗೆ ಪಟ್ಟಾಭಿಷೇಕ ಮಾಡಿ ವಾನರ ಸೇನೆಯೊಂದಿಗೆ ಲಂಕಾ ಕಡೆ ಪ್ರಯಾಣ ಬೆಳೆಸುತ್ತಾನೆ ಎಂಬ ಮಾತಿದೆ ಎಂದು ಮತ್ತೊಬ್ಬ ಗೈಡ್ ವಿಶ್ವನಾಥ ಹೇಳಿದ್ದಾರೆ.

ಶ್ರೀರಾಮ ವಾನರ ಸೈನ್ಯ, ಸುಗ್ರೀವ ಸಹಾಯ ಪಡೆದು ಲಂಕೆಗೆ ಹೋಗುತ್ತಾರೆ ಅಂತಾ ಪೌರಾಣಿಕ ಕತೆ ಹೇಳುತ್ತದೆ. ಜೊತೆಗೆ ಪಂಪಾ ವಿರೂಪಾಕ್ಷ ದೇವರಿಗೆ ಪೂಜೆ ಸಲ್ಲಿಸಿ ಅವರ ಆರ್ಶೀವಾದ ಪಡೆದು ರಾಮ ಲಂಕೆಗೆ ಹೋಗಿದ್ದು ಅನ್ನೊದನ್ನು ಹೇಳಲಾಗುತ್ತಿದೆ. ಲಂಕೆಗೆ ಹೋದ ಬಳಿಕ ರಾವಣನನ್ನ ಸಂಹಾರ ಮಾಡಿ ಸೀತೆಯನ್ನ ಮರಳಿ ಕರೆದುಕೊಂಡು ಬರುವಾಗ ಕಿಷ್ಕಿಂದ ನಗರದಲ್ಲಿ ಕೆಲ ದಿನಗಳ ಕಾಲ ತಂಗಿದ್ದು.. ನಂತರ ಇಲ್ಲಿಂದ ಅಯೋಧ್ಯೆಗೆ ತೆರಳುತ್ತಾರೆ ಎಂಬ ಪ್ರತೀತಿ ಇದೆ. ಒಟ್ಟಿನಲ್ಲಿ ಅಯೋಧ್ಯೆ ಶ್ರೀರಾಮ ಚಂದ್ರನಿಗೂ ಹಂಪಿಗೂ ಸಾಕಷ್ಟು ನಂಟು ಇರುವ ಕುತೂಹಲಕಾರಿ ಕುರುಹುಗಳು ಇಲ್ಲಿ ಗೋಚರವಾಗುತ್ತದೆ.

## ಮೋದಿ ಗ್ಯಾರಂಟಿಗೆ ಪ್ರಚಾರ

ರಾಜ್ಯ ಸರ್ಕಾರದ ಘೋಷಣೆಗಳು ಗ್ಯಾರಂಟಿಯಲ್ಲ, ಇನ್ನೂ ಸಮರ್ಪಕವಾಗಿ ಅನುಷ್ಠಾನ ಆಗಿಲ್ಲ, ಮೋದಿ ಸರ್ಕಾರದ ಯೋಜನೆಗಳು ಮತ್ತು ಅದರಿಂದ ಪ್ರಯೋಜನ ಪಡೆಯುತ್ತಿರುವ ಫಲಾನುಭವಿಗಳ ಬಗ್ಗೆ ಜನರಿಗೆ ಮನವರಿಕೆ ಮಾಡಿ ವರ್ಡ್ಸ್ ಆಫ್ ಮೌತ್ ಕ್ಯಾಂಪೇನ್ ಗೆ ಬಿಜೆಪಿ ಪ್ಲಾನ್ ಮಾಡಿಕೊಂಡಿದೆ.

ದಳ ಮಂಡ್ಯ ಲೋಕಸಭಾ ಅಭ್ಯರ್ಥಿ ಯಾರು

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡದಿರಲು ನಿಖಿಲ್ ಕುಮಾರಸ್ವಾಮಿ ನಿರ್ಧಾರ ಮಾಡಿದ್ದಾರೆ. ಬಿಜೆಪಿ ಜೆಡಿಎಸ್ ಮೈತ್ರಿಯೊಂದಿಗೆ ಮಂಡ್ಯದಲ್ಲಿ ಸ್ಪರ್ಧೆ ಮಾಡಿದರೆ ಗೆಲುವಿನ ಹಾದಿ ಸುಗಮ ಅನ್ನೋ ಲೆಕ್ಕಾಚಾರದಿಂದ ಮಾಜಿ ಮತ್ತು ಹಾಲಿ ಶಾಸಕರು ನಿಖಿಲ್ ಸ್ಪರ್ಧೆ ಮಾಡಲು ಒತ್ತಡ ಹಾಕಿದ್ದರು.

ಸಾಕಷ್ಟು ಒತ್ತಡವಿದ್ದರೂ ಮಂಡ್ಯ ಲೋಕಸಭಾ ಸ್ಪರ್ಧೆಯಿಂದ ನಿಖಿಲ್ ದೂರ ಉಳಿದಿದ್ದಾರೆ. ಸ್ಪರ್ಧೆ ಬದಲು ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಸಂಪೂರ್ಣ ಓಡಾಟ ನಡೆಸಲು ನಿರ್ಧರಿಸಿದ್ದಾರೆ. 28 ಲೋಕಸಭಾ ಕ್ಷೇತ್ರಗಳಲ್ಲಿ ಸಭೆ ನಡೆಸಿ ರಾಜ್ಯದಲ್ಲಿ ಹೆಚ್ಚು ಜೆಡಿಎಸ್ ಬಿಜೆಪಿ ಸ್ಥಾನ ಬರುವಂತೆ ನೋಡಿಕೊಳ್ಳಲು ತೀರ್ಮಾನಿಸಿದ್ದಾರೆ.

ಒಟ್ಟಾರೆಯಾಗಿ, ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಹಾಲಿ ಸಂಸದರಾಗಿರುವ ಸುಮಲತಾ ಅವರಿಗೇ ಟಿಕೆಟ್ ಸಿಗುತ್ತಾ ಅಥವಾ ಅವರಿಗೆ ಬೇರೆ ಕ್ಷೇತ್ರದ ಟಿಕೆಟ್ ಕೊಟ್ಟು ಈ ಕ್ಷೇತ್ರದಲ್ಲಿ ಹೊಸ ಮುಖವನ್ನು ಇಳಿಸಲಾಗುತ್ತಾ ಎಂಬುದೀಗ ಪ್ರಶ್ನೆಯಾಗಿದೆ.

## ವಿಶೇಷ ಆಚರಣೆ

ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಮೋದಿ, ಅಯೋಧ್ಯೆಯಲ್ಲಿ ರಾಮ ಲಲ್ಲಾ ಪಟ್ಟಾಭಿಷೇಕಕ್ಕೆ ಕೇವಲ 11 ದಿನಗಳು ಮಾತ್ರ ಉಳಿದಿವೆ, ನಾನು ಕೂಡ ಈ ಮಂಗಳಕರ ಸಂದರ್ಭಕ್ಕೆ ಸಾಕ್ಷಿಯಾಗುತ್ತಿರುವುದು ನನ್ನ ಅದೃಷ್ಟ, ಭಗವಂತ ನನಗೆ ಎಲ್ಲಾ ಭಾರತೀಯರನ್ನು ಪ್ರತಿನಿಧಿಸುವ ಅವಕಾಶವನ್ನು ನೀಡಿದ್ದಾನೆ.

ಇಂದಿನಿಂದ 11 ದಿನಗಳ ವಿಶೇಷ ಧಾರ್ಮಿಕ ವಿಧಿವಿಧಾನವನ್ನು ಪ್ರಾರಂಭಿಸುತ್ತಿದ್ದೇನೆ, ಸಾರ್ವಜನಿಕರಾಗಿ ನಿಮ್ಮೆಲ್ಲರ ಆಶೀರ್ವಾದ ಕೋರುತ್ತೇನೆ, ಈ ಸಮಯದಲ್ಲಿ ನನ್ನ ಭಾವನೆಗಳನ್ನು ಪದಗಳಲ್ಲಿ ವ್ಯಕ್ತಪಡಿಸುವುದು ತುಂಬಾ ಕಷ್ಟ, ಆದರೆ ನಾನು ನನ್ನ ಕಡೆಯಿಂದಾದ ಪ್ರಯತ್ನ ಮಾಡಿದ್ದೇನೆ ಎಂದು ಬರೆದಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ರಾಮ್ ರಾಮ್ ಎಂದು ಹೇಳುವ ಮೂಲಕ ವಿಡಿಯೋ ಆರಂಭಿಸಿದ್ದಾರೆ. ಎಲ್ಲೆಡೆ ಶ್ರೀರಾಮನ ಭಕ್ತಿಯ ಅದ್ಭುತ ವಾತಾವರಣ ನಿರ್ಮಾಣವಾಗಿದೆ. ದೇಶದ ಪ್ರತಿಯೊಬ್ಬರೂ ಜನವರಿ 22 ಕ್ಕೆ ಕಾಯುತ್ತಿದ್ದಾರೆ.

ಮತ್ತು ಈಗ ಅಯೋಧ್ಯೆಯಲ್ಲಿ ರಾಮಲಲ್ಲಾ ಪಟ್ಟಾಭಿಷೇಕಕ್ಕೆ ಕೇವಲ 11 ದಿನಗಳು ಮಾತ್ರ ಉಳಿದಿವೆ. ನನ್ನ ಜೀವನದಲ್ಲಿ ಮೊದಲ ಬಾರಿಗೆ ಭಕ್ತಿಯ ವಿಭಿನ್ನ ಭಾವನೆಯನ್ನು ಅನುಭವಿಸುತ್ತಿದ್ದೇನೆ ಎಂದು ಬರೆದುಕೊಂಡಿದ್ದಾರೆ.

## ಲೋಕಾರ್ಪಣೆ

ರಾಜ್ಯದ ಎರಡು ದೊಡ್ಡ ನಗರಗಳನ್ನು ಸಂಪರ್ಕಿಸುವ ಮುಂಬೈ ಪುಣೆ ಎಕ್ಸ್‌ಪ್ರೆಸ್‌ವೇಗೆ ಮತ್ತಷ್ಟು ಸಂಪರ್ಕ ಕಲ್ಪಿಸುತ್ತದೆ. 6 ಲೇನ್ ಮಾರ್ಗ ಹೊಂದಿದೆ. ಸಮುದ್ರದ ಮೇಲೆ 16.50 ಕಿಲೋಮೀಟರ್ ಮತ್ತು ಭೂಮಿಯಲ್ಲಿ 5.50 ಕಿಲೋಮೀಟರ್ ಉದ್ದವನ್ನು ಹೊಂದಿದೆ. ಈ ಸೇತುವೆಗೆ ಅಟಲ್ ಬಿಹಾರಿ ವಾಜಪೇಯಿ ಸೇವ್ರಿ-ನವ ಶೇವಾ ಅಟಲ್ ಸೇತು ಎಂದು ಹೆಸರನ್ನು ಇಡಲಾಗಿದೆ.

ಸೇತುವೆಯ ವಿಶೇಷತೆ ಏನು

ಈ ಯೋಜನೆಯು ಸರಿಸುಮಾರು 21 ಕಿ.ಮೀ. ಉದ್ದದ 6 ಲೇನ್ (3+3-ಲೇನ್, 2 ತುರ್ತು ಲೇನ್) ಸೇತುವೆಯನ್ನು ಮುಂಬೈ ನಗರದ ಶಿವಡಿ ಮತ್ತು ಮುಖ್ಯ ಭೂಭಾಗದ ನ್ಹಾವಾವನ್ನು ಸಂಪರ್ಕಿಸುತ್ತದೆ. ಮುಂಬೈ-ಪುಣೆ ಎಕ್ಸ್‌ಪ್ರೆಸ್‌ವೇ, ಮುಂಬೈ-ಗೋವಾ ಎಕ್ಸ್‌ಪ್ರೆಸ್‌ವೇ, ವಿರಾರ್-ರಾಯ್‌ಘಡ‌ರ್ ಕಾರಿಡಾರ್ ಸಂಪರ್ಕ ಇನ್ನು ಮುಂದೆ ಸುಲಭವಾಗಲಿದೆ.

ಈ ರಸ್ತೆಯಲ್ಲಿ 4 ಚಕ್ರದ ವಾಹನಗಳಿಗೆ ಗಂಟೆಗೆ ಗರಿಷ್ಠ 100 ಕಿ.ಮೀ ವೇಗದ ಮಿತಿಯನ್ನು ನಿಗದಿಪಡಿಸಲಾಗಿದೆ. ಬೈಕ್, ಆಟೋರಿಕ್ಷಾ, ಟ್ರ್ಯಾಕ್ಟರ್ ಸಂಚಾರವನ್ನು ನಿರ್ಬಂಧಿಸಲಾಗಿದೆ.

1962 ರಲ್ಲೇ ಎರಡು ನಗರಗಳ ಮಧ್ಯೆ ಸಂಚಾರ ವ್ಯವಸ್ಥೆ ಮಾಡಲು ಯೋಜನೆ ರೂಪಿಸಲಾಗಿತ್ತು. ಈ ಯೋಜನೆ ಜಾರಿ ಸಂಬಂಧ ಹಲವು ಅಧ್ಯಯನಗಳು ನಡೆದಿದ್ದವು. 2008ರಲ್ಲಿ ಮಹಾರಾಷ್ಟ್ರ ಸರ್ಕಾರ ಈ ಯೋಜನೆ ಜಾರಿಗೆ ಸಂಬಂಧ ಟೆಂಡರ್ ಆಹ್ವಾನಿಸಿತ್ತು. ಈ ಯೋಜನೆಯಲ್ಲಿ ರಾಜಕೀಯದ ಗಾಳಿ ಬೀಸಿ ಭಾರೀ ಟೀಕೆ ಬಂದ ಹಿನ್ನೆಲೆಯಲ್ಲಿ ಟೆಂಡರ್ ಪ್ರಕ್ರಿಯೆ ಸ್ಥಗಿತಗೊಂಡಿತ್ತು. ಕೊನೆಗೆ ಎಲ್ಲಾ ಇಲಾಖೆಗಳ ಅನುಮತಿ ಪಡೆದ ಬಳಿಕ 2016ರ ಡಿಸೆಂಬರ್ 24 ರಂದು ಪ್ರಧಾನಿ ನರೇಂದ್ರ ಮೋದಿ ಈ ಯೋಜನೆ ನಿರ್ಮಾಣಕ್ಕೆ ಶಂಕುಸ್ಥಾಪನೆ ಮಾಡಿದ್ದರು. ಭೂಮಿ ಸ್ವಾಧೀನ ಪಡಿಸಿದ ಬಳಿಕ 2018ರ ಏಪ್ರಿಲ್ 24 ರಂದು ಕಾಮಗಾರಿ ಆರಂಭವಾಗಿತ್ತು.

ನಿಗದಿ ಪ್ರಕಾರ ಸೆಪ್ಟೆಂಬರ್ 22, 2022ಕ್ಕೆ ಮುಕ್ತಾಯವಾಗಬೇಕಿತ್ತು. ಆದರೆ ಕೋವಿಡ್, ಲಾಕ್‌ಡೌನ್ ನಂತರ ಕಾರ್ಮಿಕರ ಸಮಸ್ಯೆಯಿಂದಾಗಿ ಯೋಜನೆ ಮುಂದಕ್ಕೆ ಹೋಗಿ ಈಗ ಉದ್ಘಾಟನೆಗೊಂಡಿದೆ.

ಆರಂಭದಲ್ಲಿ ಈ ಯೋಜನೆ ನಿರ್ಮಾಣಕ್ಕೆ 14,712.70 ಕೋಟಿ ರೂ. ವೆಚ್ಚವಾಗಬಹುದು ಎಂದು ಅಂದಾಜಿಸಲಾಗಿತ್ತು. ಆದರೆ ಈಗ ಈ ವೆಚ್ಚ 16,904.43 ಕೋಟಿ ರೂ.ಗೆ ಏರಿಕೆಯಾಗಿದೆ ಎಂದು ಆರ್‌ಟಿಐ ಅಡಿ ಉತ್ತರ ಸಿಕ್ಕಿತ್ತು.

## ಸರ್ವೆ ಕಾರ್ಯ ಆರಂಭ

ಈ ಲೊಕೇಶನ್ ಸರ್ವೆಯಲ್ಲಿ ರೈಲ್ವೆ ಇಲಾಖೆ ಹಲವು ಮಾಹಿತಿ ಸಂಗ್ರಹಿಸಿದೆ. ಅಲೈನ್ ಮೆಂಟ್, ನಿಲ್ದಾಣಗಳ ಸಂಖ್ಯೆ ಮತ್ತು ಮ್ಯಾಪಿಂಗ್, ಸಿವಿಲ್ ಸ್ಟ್ರಕ್ಚರ್-ಬ್ರಿಡ್ಜ್ ಗಳು ಯೋಜನೆಗೆ ಬೇಕಾಗುವ ಲ್ಯಾಂಡ್ ಬಗ್ಗೆ ಮಾಹಿತಿ ಸಂಗ್ರಹಿಸಿದೆ.

## ಮೊದಲನೆ ಪುಟದಿಂದ...

ಈ ರಿಂಗ್ ರೈಲ್ ಏಳು ಪ್ರಮುಖ ನಿಲ್ದಾಣಗಳನ್ನು ಹೊಂದಿರಲಿದೆ. ನೀಡವಂದ, ದೊಡ್ಡಬಳ್ಳಾಪುರ, ದೇವನಹಳ್ಳಿ, ಮಾಲೂರು, ಹೀಲಲಿಗೆ, ಹೆಜ್ಜಾಲ, ಸೋಲುರು ಪ್ರಮುಖ ನಿಲ್ದಾಣಗಳಾಗಿವೆ. ಬೆಂಗಳೂರು ಉಪನಗರ ರೈಲ್ವೇ ಯೋಜನೆ (ಬಿಎಸ್ ಆರ್ ಪಿ), ನಮ್ಮ ಮೆಟ್ರೋ ರೈಲಿಗೆ ಪೂರಕವಾಗಿ ನಗರದ ಸುತ್ತ ವೃತ್ತಾಕಾರವಾಗಿ ರಿಂಗ್ ರೈಲು ಯೋಜನೆ ನಿರ್ಮಾಣಗೊಳ್ಳಲಿದೆ. ನಗರದಲ್ಲಿ ಮುಂದಿನ 20-30 ವರ್ಷಗಳ ಸಂಚಾರ ದಟ್ಟಣೆ ಸಮಸ್ಯೆ ನಿವಾರಣೆಯಲ್ಲಿ ರಿಂಗ್ ರೈಲ್ ಪ್ರಮುಖ ಪಾತ್ರ ವಹಿಸಲಿದೆ.

ನಿಡವಂದದಿಂದ ದೊಡ್ಡಬಳ್ಳಾಪುರವರೆಗೆ 40.9 ಕಿಮೀ, ದೊಡ್ಡಬಳ್ಳಾಪುರದಿಂದ ದೇವನಹಳ್ಳಿವರೆಗೆ 28.5 ಕಿಮೀ, ದೇವನಹಳ್ಳಿಯಿಂದ ಮಾಲೂರುವರೆಗೆ 46.5 ಕಿಮೀ, ಮಾಲೂರಿನಿಂದ ಹೀಲಳಿಗೆವರೆಗೆ 52 ಕಿಮೀ, ಹೀಲಳಿಗೆಯಿಂದ ಹೆಜ್ಜಾಲವರೆಗೆ 42 ಕಿಮೀ, ಹೆಜ್ಜಾಲದಿಂದ ಸೋಲೂರುವರೆಗೆ 43.5 ಕಿಮೀ, ಸೋಲೂರಿನಿಂದ ನಿಡವಂದವರೆಗೆ 34.2 ಕಿಮೀ ಸಂಪರ್ಕ ಕಲ್ಪಿಸಲಿದೆ.

## ಅಂತರಿಕ್ಷ ನಿಲ್ದಾಣ

ಭಾರತದ ಮೊದಲ ಬಾಹ್ಯಾಕಾಶ ನಿಲ್ದಾಣವನ್ನು ಸ್ಥಾಪಿಸುವಲ್ಲಿ ಯಶಸ್ವಿಯಾದ ನಂತರ, ನೀವು (ಗಗನಯಾತ್ರಿಗಳು) ಬಂದು ಪ್ರಯೋಗಗಳನ್ನು ನಡೆಸಲು ಪ್ರಯೋಗಾಲಯವಾಗಿ ಅಭಿವೃದ್ಧಿಪಡಿಸಲು ನಾವು ಬಯಸುತ್ತೇವೆ ಎಂದು ಹೇಳಿದ್ದಾರೆ.

2035 ರ ವೇಳೆಗೆ ನಾವು ಮಾನವರನ್ನು ಬಾಹ್ಯಾಕಾಶಕ್ಕೆ ಕಳುಹಿಸಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು. ಖಗೋಳಶಾಸ್ತ್ರಕ್ಕೆ ಸಂಬಂಧಿಸಿದ ಸಂಶೋಧನೆಗಳನ್ನು ಮಾಡಬಹುದಾದ ಪ್ರಯೋಗಾಲಯಗಳು, ಸಂಸ್ಥೆಗಳು, ವೈಜ್ಞಾನಿಕ ಸಂಸ್ಥೆಗಳನ್ನು ನಾವು ಹೊಂದಿರಲಿದ್ದೇವೆ.

ಮುಂದಿನ ದಿನಗಳಲ್ಲಿ ಭಾರತೀಯ ಬಾಹ್ಯಾಕಾಶ ನಿಲ್ದಾಣದಿಂದ ಹೆಚ್ಚಿನ ಪ್ರಯೋಜನವಾಗಲಿದೆ ಎಂದು ಇಸ್ರೋ ಮುಖ್ಯಸ್ಥರು ಹೇಳಿದ್ದಾರೆ. ಉದ್ಯಮವು ಬಾಹ್ಯಾಕಾಶ ಕ್ಷೇತ್ರದ ಅಭಿವೃದ್ಧಿಗೆ ಕೊಡುಗೆ ನೀಡಲು ಅವಕಾಶವನ್ನು ಪಡೆಯುತ್ತದೆ. ಬಾಹ್ಯಾಕಾಶ ನಿಲ್ದಾಣವನ್ನು ನಿರ್ಮಿಸಲು ಅತ್ಯಾಧುನಿಕ ತಂತ್ರಜ್ಞಾನ ಮತ್ತು ಅವುಗಳನ್ನು ನಿರ್ವಹಿಸುವ ಪ್ರಾವೀಣ್ಯತೆಯ ವಿಚಾರದಲ್ಲಿ ಭಾರೀ ಪ್ರಮಾಣದ ಸಂಪನ್ಮೂಲಗಳನ್ನು ಹೊಂದುವ ಅವಶ್ಯಕತೆಯಿದೆ.

## ಕಾರ್ಯಕರ್ತರಿಗೆ ಸಮನ್ಸ್

ಪ್ರತಿಪಕ್ಷದ ಆರೋಪದ ಬೆನ್ನಲ್ಲೇ ಈ ವಿದ್ಯಮಾನವೂ ನಡೆದಿದೆ.

ಪೊಲೀಸರ ವಿರುದ್ಧ ಬಿಜೆಪಿ ಆಕ್ರೋಶ

ಕಾರ್ಯಕರ್ತರಿಗೆ ಸಮನ್ಸ್ ಜಾರಿ ವಿಚಾರವಾಗಿ ಪೊಲೀಸರ ವಿರುದ್ಧ ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ. ಇಷ್ಟು ವರ್ಷ ಇಲ್ಲದ ಸಮನ್ಸ್ ಈಗ ಯಾಕೆ ಎಂದು ಬಿಜೆಪಿ ಪ್ರಶ್ನೆ ಮಾಡಿದೆ. ಜತೆಗೆ, ರಾಜ್ಯ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ. ಹಿಂದೂ, ಬಿಜೆಪಿ ಕಾರ್ಯಕರ್ತರನ್ನು ಟಾರ್ಗೆಟ್ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದೆ.

ಈ ಮಧ್ಯೆ, ನಾವು ಯಾವುದೇ ನೋಟಿಸ್ ನೀಡಿಲ್ಲ, ಅದು ಕೋರ್ಟ್ ನಿಂದ ಜಾರಿಯಾಗಿರುವ ಸಮನ್ಸ್ ಎಂದು ಪೊಲೀಸರು ಸ್ಪಷ್ಟನೆ ನೀಡಿದ್ದಾರೆ. ಕಳೆದ ತಿಂಗಳೇ ಸಮನ್ಸ್ ಜಾರಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

## ಆಸ್ಪತ್ರೆಗೆ ನೋಟಿಸ್

**ಮತ್ತೆ ಮಹಾರಾಷ್ಟ್ರ ಉದ್ದಟತನ:** ಗಡಿ ವಿವಾದ ಇರುವ 865 ಗ್ರಾಮಗಳ ಜನರಿಗೆ ಆರೋಗ್ಯ ವಿಮೆ ಜಾರಿ ವಿಚಾರವಾಗಿ ಮಹಾರಾಷ್ಟ್ರ ಮುಖ್ಯಮಂತ್ರಿಗಳ ವಿಶೇಷಾಧಿಕಾರಿ ಮಂಗೇಶ್ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಆರೋಗ್ಯ ಪರಿಹಾರ ನಿಧಿ ಯೋಜನೆ ಬಗ್ಗೆ ಈಗಾಗಲೇ ತಿಳಿಸಿದ್ದೇವೆ. ಬೆಳಗಾವಿಯಲ್ಲಿ ಸುದ್ದಿಗೋಷ್ಠಿ ನಡೆಸಿಯೂ ನಾವು ಮಾಹಿತಿ ನೀಡಿದ್ದೇವೆ. ಇದು ಗಡಿ ಭಾಗದ ಮರಾಠಿ ಭಾಷಿಕರಿಗಾಗಿ ಅನುಷ್ಠಾನ ಮಾಡ್ತಿದ್ದೇವೆ ಎಂದು ವಿಡಿಯೋ ಹೇಳಿಕೆಯಲ್ಲಿ ಅವರು ತಿಳಿಸಿದ್ದಾರೆ.

ಮುಖ್ಯಮಂತ್ರಿ ಏಕನಾಥ ಶಿಂಧೆ ಸೂಚನೆ ಮೇರೆಗೆ ಯೋಜನೆ ಜಾರಿ ಮಾಡಿದ್ದೇವೆ. ಬೆಳಗಾವಿಯ ಅರಿಹಂತ ಆಸ್ಪತ್ರೆಗೆ 1 ಲಕ್ಷ ರೂ. ಸಂದಾಯ ಮಾಡಿದ್ದೇವೆ. ಮಹಾರಾಷ್ಟ್ರ ಸಿಎಂ ಪರಿಹಾರ ನಿಧಿಯಿಂದ 1 ಲಕ್ಷ ಹಣ ಸಂದಾಯ ಮಾಡಲಾಗಿದೆ. ಇದನ್ನು ಕನ್ನಡ ಪರ ಹೋರಾಟಗಾರರು ವಿರೋಧಿಸಿದ್ದಾರೆ. ಅಲ್ಲದೇ ಬೆಳಗಾವಿ ಜಿಲ್ಲಾಡಳಿತ ನಮಗೆ ನೋಟಿಸ್ ಜಾರಿಗೊಳಿಸಿದೆ. ಕರ್ನಾಟಕ ಸರ್ಕಾರದ ಈ ನಿರ್ಧಾರ ಖಂಡಿಸುತ್ತೇವೆ. ಗಡಿ ಭಾಗದ ಜನರಿಗೆ ಈ ಯೋಜನೆ ವರವಾಗಿದೆ. ಇದನ್ನು ಕರ್ನಾಟಕ ಸರ್ಕಾರ ವಿರೋಧಿಸಬಾರದೆಂದು ಮಂಗೇಶ್ ಚಿವಟೆ ವಿಡಿಯೋ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಲಂಚ ವಸೂಲಿ

ಪಟ್ಟಣದಲ್ಲಿ ಸಾವಿರಾರು ಗ್ರಾಹಕರಿದ್ದು, ಪ್ರತಿ ಗ್ರಾಹಕರಿಂದ 20 ರೂಪಾಯಿ ವಸೂಲಿ ಮಾಡಲಾಗುತ್ತಿದೆ. ಸದ್ಯ ಹಣ ವಸೂಲಿ ವಿಡಿಯೋ ವೈರಲ್ ಆಗುತ್ತಿದ್ದು, ಸಂಬಂಧಪಟ್ಟ ಆಹಾರ ಇಲಾಖೆ ಅಧಿಕಾರಿಗಳು ಏಜೆನ್ಸಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಜನರು ಒತ್ತಾಯಿಸಿದ್ದಾರೆ.

ಗ್ರಾಮ ಪಂಚಾಯ್ತಿಯಲ್ಲಿ ಲಂಚಾವತಾ: ವಿಡಿಯೋ ವೈರಲ್,

ಕೋಲಾರ ಜಿಲ್ಲೆಯ ಕೆಜಿಎಫ್ ತಾಲ್ಲೂಕು ಕ್ಯಾಸಂಬಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಪಿಡಿಓ ಮತ್ತು ಬಿಲ್ ಕಲೆಕ್ಟರ್ ಲಂಚ ಪಡೆಯುತ್ತಿರುವ ವಿಡಿಯೋ ವೈರಲ್ ಆಗಿದೆ. ಇ-ಖಾತೆಯ ಮರು ಪ್ರಿಂಟ್ ನೀಡಲು ಪಿಡಿಓ ರಶ್ಮಿ ಹಾಗೂ ಬಿಲ್ ಕಲೆಕ್ಟರ್ ಸುಬ್ರಮಣಿ ಅವರು 50 ರೂಪಾಯಿ ಸರ್ಕಾರಿ ಶುಲ್ಕದ ಬದಲಾಗಿ ಮೂರು ಸಾವಿರ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ.

ಪಿಡಿಓ ರಶ್ಮಿ ಅವರ ಸೂಚನೆ ಹಿನ್ನೆಲೆ ಲಂಚಕ್ಕೆ ಬೇಡಿಕೆ ಇಡಲಾಗಿದೆ. ನಾಗಲೇಪಲ್ಲಿ ಗ್ರಾಮದ ಅನೂಪ್ ಎಂಬುವರಿಂದ ಲಂಚ ಸ್ವೀಕರಿಸಲಾಗಿದೆ. ಪಿಡಿಓ ರಶ್ಮಿ ಹಣ ಪಡೆಯುವಂತೆ ತಿಳಿಸಿದ ಹಿನ್ನೆಲೆ ಹಣ ಪಡೆದಿರುವುದಾಗಿ ಹೇಳಿದ ಆಡಿಯೋ ಕೂಡ ವೈರಲ್ ಆಗಿದೆ. ಅಧಿಕಾರಿಗಳ ಭ್ರಷ್ಟಾಚಾರದ ವಿರುದ್ಧ ಸಾರ್ವಜನಿಕರು ಆಕ್ರೋಶ ಹೊರಹಾಕುತ್ತಿದ್ದಾರೆ.

## ಹತ್ಯೆ

ಅಮಾನುಷವಾಗಿ ಹಲ್ಲೆ ನಡೆಸಿದ್ದಾರೆ. ಸನ್ವಾರಿ ಸೇತುವೆ ಬಳಿಯ ಹೊಲದಲ್ಲಿ ಆತನ ಶವ ಪತ್ತೆಯಾಗಿದೆ.

ಕಣ್ಣುಗಳನ್ನು ಹರಿತವಾದ ಆಯುಧದಿಂದ ಕಿತ್ತು ತೆಗೆಯಲಾಗಿದೆ, ದೇಹದ ಮೇಲ್ಭಾಗದಲ್ಲಿ ಗಾಯದ ಗುರುತುಗಳಿವೆ. ಮೃತದೇಹವನ್ನು ಅರಾ ಸದರ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆತನ ದೇಹ ಹೊಲದಲ್ಲಿ ಪತ್ತೆಯಾಗಿತ್ತು, ಮೃತರ ಹಿರಿಯ ಸಹೋದರ ರಾಧಾ ಸಿಂಗ್ ಅವರು ಸ್ಥಳೀಯ ಪರಿಚಯಸ್ಥ ಅಜಯ್ ಮಹತೋ ಅವರ ಬಳಿಕ ಕೆಲಸದ 500 ರೂಪಾಯಿ ವೇತನ ಕೇಳಿದ್ದ.

ಮಹತೋ ಅವರ ನಿರ್ದೇಶನದ ಮೇರೆಗೆ ಸಿಂಗ್ ಅವರ ಸ್ನೇಹಿತರು ಆತನನ್ನು ಪಾರ್ಟಿಗೆ ಆಹ್ವಾನಿಸಿದ್ದರು, ನಂತರ ಅವರನ್ನು ಕೊಲೆ ಮಾಡಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. ತಡರಾತ್ರಿಯಾದರೂ ಸಹೋದರ ಮನೆಗೆ ಬಾರದ ಹಿನ್ನೆಲೆಯಲ್ಲಿ ಅನುಮಾನ ಬಂದಿತ್ತು, ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಬಂಧನ

ರವಿ ಬಾಂದ್ರಾ, ಪರಾರಿಯಾಗಿದ್ದು, ಆತನ ಪತ್ತೆಗೆ ಪ್ರಯತ್ನ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಜನವರಿ 2 ರಂದು ದಿವ್ಯಾ ಅವರನ್ನು ಐದು ಜನರು ಹೋಟೆಲ್ ಸಿಟಿ ಪಾಯಿಂಟ್ ಗೆ ಕರೆದೊಯ್ದು ಕೊಠಡಿ ಸಂಖ್ಯೆ 111 ರೊಳಗೆ ಗುಂಡಿಕ್ಕಿ ಹತ್ಯೆ ಮಾಡಿದ್ದರು. ಮಾಜಿ ಮಾಡೆಲ್‌ನ ದೇಹ ಇನ್ನೂ ಪತ್ತೆಯಾಗಿಲ್ಲ.

ಬಿಎಂಡಬ್ಲ್ಯು ಕಾರಿನಲ್ಲಿ ಶವವನ್ನು ಕೊಂಡೊಯ್ದಿದ್ದ ಬಾಲರಾಜ್ ಸಿಂಗ್ ಮತ್ತು ರವಿ ಬಂಗಾ ಅದನ್ನು ಘಗ್ಗರ್ ನದಿಯಲ್ಲಿ ಎಸೆದಿರಬಹುದು ಎಂಬ ಅನುಮಾನ ಪೊಲೀಸರಿಗೆ ಇದೆ ಎಂದು ಹಿರಿಯ ತನಿಖಾಧಿಕಾರಿಯೊಬ್ಬರು ತಿಳಿಸಿದ್ದಾರೆ. ಪೊಲೀಸರ ತಂಡವು ಡೈವರ್‌ಗಳ ಸಹಾಯದಿಂದ ಮೃತದೇಹವನ್ನು ನದಿಯಿಂದ ಹೊರತೆಗೆಯಲು ಪ್ರಯತ್ನಿಸುತ್ತಿದೆ ಎಂದು ಅವರು ಹೇಳಿದರು.

ಪ್ರಕರಣದ ಪ್ರಮುಖ ಆರೋಪಿಗಳಾದ ಅಭಿಜಿತ್ ಸಿಂಗ್, ಹೇಮರಾಜ್ ಮತ್ತು ಓಂಪ್ರಕಾಶ್ ಅವರನ್ನು ಪೊಲೀಸರು ಈಗಾಗಲೇ ಬಂಧಿಸಲಾಗಿದೆ.

ಮೂಲಗಳ ಪ್ರಕಾರ ಪಹುಜಾ ತನ್ನ ಫೋನ್‌ನಲ್ಲಿ ಅಭಿಜಿತ್ ಸಿಂಗ್ ಅವರ ಕೆಲವು ಅಶ್ಲೀಲ ವೀಡಿಯೊಗಳನ್ನು ಹೊಂದಿದ್ದರು, ಅದನ್ನು ಅಳಿಸಲು ಅವರು ಕೇಳಿದರು, ಆದರೆ ಆಕೆ ನಿರಾಕರಿಸಿದ್ದಳು.

ಅಭಿಜೀತ್ ಸಿಂಗ್ ಶವದೊಂದಿಗೆ ಕಾರನ್ನು ಹೋಟೆಲ್‌ನಿಂದ ಒಂದು ಕಿಲೋಮೀಟರ್ ದೂರದಲ್ಲಿ ಬಲರಾಜ್ ಗಿಲ್‌ಗೆ ನೀಡಿದ್ದ, ಪಂಜಾಬ್‌ನ ಪಟಿಯಾಲಾದ ಬಸ್ ನಿಲ್ದಾಣದಲ್ಲಿ ಗುರ್ಗಾಂವ್ ಪೊಲೀಸರು ಜನವರಿ 5 ರಂದು ಬಿಎಂಡಬ್ಲ್ಯು ಕಾರನ್ನು ಪತ್ತೆ ಮಾಡಿದ್ದರು.

ಗುರುಗ್ರಾಮದ ಭೂಗತ ಪಾತಕಿ ಸಂದೀಪ್ ಗಡೋಲಿ ನಕಲಿ ಎನ್ ಕೌಂಟರ್ ಪ್ರಕರಣಕ್ಕೆ ಸಂಬಂಧಿಸಿ ದಿವ್ಯಾ ಪಹುಜಾಗೆ 7 ವರ್ಷಗಳ ಕಾರಾಗೃಹ ಶಿಕ್ಷೆ ವಿಧಿಸಲಾಗಿತ್ತು. ಸ್ವಲ್ಪ ದಿನಗಳ ಹಿಂದಷ್ಟೇ ಜಾಮೀನಿನ ಮೂಲಕ ಹೊರಬಂದಿದ್ದಳು. ಈ ಪ್ರಕರಣಕ್ಕೆ ಸಂಬಂಧಿಸಿ ಹೋಟೆಲ್ ಮಾಲೀಕ ಅಭಿಜಿತ್, ಕೆಲಸಗಾರರಾದ ಹೇಮರಾಜ್, ಓಂ ಪ್ರಕಾಶ್ ನನ್ನು ಬಂಧಿಸಲಾಗಿದೆ.

ಗುರುಗ್ರಾಮದ ಭೂಗತ ಪಾತಕಿ ಗಡೋಲಿಯನ್ನು 2016 ಫೆಬ್ರವರಿ 6 ರಂದು ಗುರುಗ್ರಾಮದಲ್ಲಿ ನಡೆದ ಎನ್ ಕೌಂಟರ್ ನಲ್ಲಿ ಹತ್ಯೆಗೈಯಲಾಗಿತ್ತು.

## ಸಂಕಷ್ಟ

ನಾಮಫಲಕದಲ್ಲಿ ಶೇ.60 ರಷ್ಟು ಕನ್ನಡ ಇಲ್ಲದಿದ್ದಕ್ಕೆ ಹೋರಾಟ ನಡೆಸಿದ್ದರು. ಅಂದು ಕನ್ನಡ ನಾಮಫಲಕವಿಲ್ಲದ ಕೆಲವು ಮಾಲ್ ಮತ್ತು ಅಂಗಡಿಗಳ ಮೇಲೆ ಕರವೇ ಕಾರ್ಯಕರ್ತರು ಕಲ್ಲು ತೂರಿದ್ದಾರೆ ಮತ್ತು ಸಾರ್ವಜನಿಕ ಆಸ್ತಿಪಾಸ್ತಿ ನಾಶ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಹೀಗಾಗಿ ಕರವೇ ಅಧ್ಯಕ್ಷ ನಾರಾಯಣಗೌಡ ಸೇರಿದಂತೆ 29 ಜನರನ್ನು ಬಂಧಿಸಲಾಗಿತ್ತು.

ಈ ಪ್ರಕರಣದಲ್ಲಿ ಕರವೇ ನಾರಾಯಣಗೌಡ ಅವರಿಗೆ ಜಾಮೀನು ಸಿಕ್ಕಿದ್ದು, ಬಿಡುಗಡೆಯಾಗಿದ್ದರು. ಆದರೆ 2017ರ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ಕರವೇ ನಾರಾಯಣಗೌಡ ಅವರನ್ನು ಪೊಲೀಸರು ಮತ್ತೆ ಬಂಧಿಸಿದ್ದರು. ಈ ಪ್ರಕರಣದಲ್ಲೂ ಕರವೇ ನಾರಾಯಣಗೌಡ ಅವರಿಗೆ ಜಾಮೀನು ಸಿಕ್ಕಿದೆ. ಆದರೆ ನಾರಾಯಣಗೌಡ ಅವರ ವಿರುದ್ಧದ ಇನ್ನೂ ಅನೇಕ ಪ್ರಕರಣಗಳು ಬಾಕಿ ಇವೆ. ಇದರಿಂದ ಕರವೇ ನಾರಾಯಣಗೌಡ ಅವರು ಜೈಲಿಂದ ಬಿಡುಗಡೆಯಾದ್ರೂ ಸಂಕಷ್ಟ ತಪ್ಪಿಲ್ಲ.

ಕರವೇ ನಾರಾಯಣಗೌಡ ಅವರು ಬಂಧನವಾಗಿದ್ದು ಒಂದು ಪ್ರಕರಣದಲ್ಲಿ, ಆದರೆ ಇನ್ನೂ ಎಂಟು ಕೇಸ್‌ಗಳು ಬಾಕಿ ಇವೆ. ಚಿಕ್ಕಜಾಲ ಪೊಲೀಸ್ ಠಾಣೆಯಲ್ಲಿ 6 ಪ್ರಕರಣ, ಯಲಹಂಕ ಪೊಲೀಸ್ ಠಾಣೆಯಲ್ಲಿ 2 ಪ್ರಕರಣ ಬಾಕಿ ಇವೆ. ಈ ಎಲ್ಲಾ ಪ್ರಕರಣಗಳಲ್ಲೂ ಪೊಲೀಸರು 41(0) ಅಡಿ ನೋಟಿಸ್ ನೀಡಲಿದ್ದಾರೆ. ಕರವೇ ನಾರಾಯಣಗೌಡ ಅವರು ಇಷ್ಟು ದಿನ ಜೈಲಲ್ಲಿದ್ದ ಕಾರಣ ಪೊಲೀಸರು ನೋಟೀಸ್ ನೀಡಿಲ್ಲ, ಇದೀಗ ಬಿಡುಗಡೆಯಾದ ಹಿನ್ನೆಲೆಯಲ್ಲಿ ನೋಟಿಸ್ ನೀಡಿ ವಿಚಾರಣೆ ನಡೆಸಲಿದ್ದಾರೆ.

## ವಿದ್ಯಾರ್ಥಿನಿ ಮೇಲೆ ಅತ್ಯಾಚಾರ: ಬಸ್ ಕ್ಲೀನರ್ ಅರೆಸ್ಟ್

**ನೆಲಮಂಗಲ:** ಶಾಲೆಗೆ ಹೋಗಿ ಬರುತ್ತಿದ್ದ ವಿದ್ಯಾರ್ಥಿನಿ ಮೇಲೆ ಖಾಸಗಿ ಬಸ್ ಕ್ಲೀನರ್ ಅತ್ಯಾಚಾರ ಎಸಗಿದ ಪ್ರಕರಣ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ದಾಬಸ್‌ಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಪ್ರಕರಣ ಸಂಬಂಧ ಆರೋಪಿ ದೊಡ್ಡಬಳ್ಳಾಪುರದ ಆನಂದ್ (24) ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ವಾರದಹಿಂದೆಶಾಲೆಗೆಹೋಗಿದ್ದಬಾಲಕಿನಾಪತ್ತೆಯಾಗಿದ್ದಳು. ಈ ಬಗ್ಗೆ ಪೋಷಕರು ಪೊಲೀಸ್ ಠಾಣೆಯಲ್ಲಿ ನಾಪತ್ತೆ ಪ್ರಕರಣ ದಾಖಲಿಸಿದ್ದರು. ಮೊಬೈಲ್ ಕರೆ ಆಧಾರದ ಮೇಲೆ ಯಲಹಂಕ ಬಳಿ ಬಾಡಿಗೆ ಮನೆಯಲ್ಲಿರಿಸಿದ್ದ 14 ವರ್ಷದ ಬಾಲಕಿಯನ್ನು ಪೊಲೀಸರು ರಕ್ಷಣೆ ಮಾಡಿದ್ದಾರೆ. ಸಂತ್ರಸ್ತ ಬಾಲಕಿ ದಾಬಸ್ ಪೇಟೆಯಿಂದ ತ್ಯಾಮಗೊಂಡ್ಲುನಲ್ಲಿರುವ ಶಾಲೆಗೆ ದಿನನಿತ್ಯ ಖಾಸಗಿ ಬಸ್‌ನಲ್ಲಿ ಬಾಲಕಿ ಹೋಗಿ ಬರುತ್ತಿದ್ದಳು.

ದಿನನಿತ್ಯ ಖಾಸಗಿ ಬಸ್ ದಾಬಸ್ ಪೇಟೆ-ದೊಡ್ಡಬಳ್ಳಾಪುರ ಮಾರ್ಗವಾಗಿ ಬರುತ್ತಿದ್ದ ಬಸ್‌ನಲ್ಲಿ ಆರೋಪಿ ಕ್ಲೀನರ್ ಆಗಿ ಕೆಲಸ ಮಾಡುತ್ತಿದ್ದನು. 2021ರಲ್ಲಿ ಬ್ಯಾಡರಹಳ್ಳಿ ಠಾಣೆಯಲ್ಲಿ ಇದೇ ರೀತಿ ಪೋಕ್ಸೊ ಪ್ರಕರಣದಲ್ಲಿ ಮೂರು ವರ್ಷ ಶಿಕ್ಷೆ ಅನುಭವಿಸಿ ಜೈಲಿನಿಂದ ಬಿಡುಗಡೆಯಾಗಿದ್ದನು.

# ಚಾ.ನಗರ ಜಿಲ್ಲೆಯ ಪ್ರಥಮ ಮುಸ್ಲಿಂ ಯುವತಿ ರುಮಾನ ಫರ್ಹಿನ್‌ಗೆ ಪಿಎಚ್ಡಿ

**ಚಾಮರಾಜನಗರ:** ಗಡಿ ಜಿಲ್ಲೆ ಚಾಮರಾಜನಗರ ಜಿಲ್ಲೆಯ ಮುಸ್ಲಿಂ ಸಮುದಾಯದ ಯುವತಿಯೊಬ್ಬರು ಪಿಎಚ್.ಡಿ ಪದವಿ ಪಡೆದಿದ್ದು, ಜಿಲ್ಲೆಯ ಇತಿಹಾಸದಲ್ಲಿ ಪಿಎಚ್.ಡಿ ಪದವಿ ಪಡೆದ ಪ್ರಥಮ ಮುಸ್ಲಿಂ ಯುವತಿ ಎಂಬ ಶ್ರೇಯಸ್ಸಿಗೆ ಪಾತ್ರರಾಗಿದ್ದಾರೆ.



ಶೈಕ್ಷಣಿಕವಾಗಿ ಮುಸ್ಲಿಂ ಸಮುದಾಯ ಸಾಕಷ್ಟು ಪ್ರಗತಿ ಸಾಧಿಸಿದೆ. ಸಾಧಿಸುತ್ತಲೇ ಇದೆ. ಆದರೆ, ಗಡಿ ಜಿಲ್ಲೆ ಚಾಮರಾಜನಗರದಲ್ಲಿ ಆ ಸಮುದಾಯದ ಹೆಣ್ಣು ಮಕ್ಕಳಾರು ಈವರೆವಿಗೆ ಪಿಎಚ್.ಡಿ ಪದವಿಯನ್ನೇ ಪಡೆದಿರಲಿಲ್ಲ.

ಇದೀಗ ಚಾಮರಾಜನಗರದ ಅಹಮ್ಮದ್ ನಗರ ಮೊಹಲ್ಲಾದ ನಿವಾಸಿ ಎಸ್.ಎಂ.ರುಮಾನ ಫರ್ಹಿನ್ ಅವರು ಮೈಸೂರು ವಿಶ್ವವಿದ್ಯಾಲಯದಿಂದ ಪಿಎಚ್.ಡಿ ಪಡೆದುಕೊಂಡಿದ್ದಾರೆ. ಇವರು ಭೌತಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಡಾ.ಎಸ್.ಕೃಷ್ಣವೇಣಿ ಅವರ ಮಾರ್ಗದರ್ಶನ ದಲ್ಲಿ 'ಎ ಸ್ಟಡಿ ಆನ್ ಎನ್ಹಾನ್ಸಿಂಗ್ ಸರ್ಫೇಸ್ ಚಾರ್ಜ್ ಡೆನ್ಸಿಟಿ ಆಫ್ ಪ್ಲೆಕ್ಸಿಬಲ್ ಟರ್ಬೋ ಎಲೆಕ್ಟಿಕ್ ನ್ಯಾನೊ ಜನರೇಟರ್ಸ್' ವಿಷಯವಾಗಿ ಮಂಡಿಸಿದ ಪ್ರಬಂಧವನ್ನು ಮೈಸೂರು ವಿವಿಯು ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಆ ಮೂಲಕ ರುಮಾನ ಫರ್ಹಿನ್ ಚಾಮರಾಜನಗರ ಜಿಲ್ಲೆಯಲ್ಲಿ ಪಿಎಚ್.ಡಿ ಪಡೆದ ಪ್ರಥಮ ಮುಸ್ಲಿಂ ಹೆಣ್ಣು ಮಗಳಾಗಿ ಹೊರ ಹೊಮ್ಮಿದ್ದಾರೆ. ಹಾಗೇ ನೋಡಿದರೆ

**ಚಾಮರಾಜನಗರ ಜಿಲ್ಲೆಯಲ್ಲಿ ನಮ್ಮ ಸಮುದಾಯದ ಸಾಕಷ್ಟು ಮಂದಿ ಪದವೀಧರರು, ಸ್ನಾತಕೋತ್ತರ ಪದವೀಧರರು, ಎಂಜಿನಿಯರಿಂಗ್ ಪದವೀಧರರು ಎಲ್ಲರೂ ಇದ್ದಾರೆ. ಆದರೆ, ಈವರೆವಿಗೆ ನಮ್ಮ ಸಮುದಾಯದ ಹೆಣ್ಣು ಮಕ್ಕಳು ಪಿಎಚ್ ಡಿ ಪದವಿ ಪಡೆದಿರಲಿಲ್ಲ. ಅದು ರುಮಾನ ಫರ್ಹಿನ್ ಮೂಲಕ ಈಡೇರಿದೆ.**

**| ಮೊಹಮ್ಮದ್ ಸಾಬೀರ್**
**ಮಾಜಿ ಅಧ್ಯಕ್ಷ, ಸಂವಹನ ವಿಭಾಗ,**
**ಮೌಲನ ಅಜಾದ್ ಎಜುಕೇಷನ್ ಟ್ರಸ್ಟ್**
**ಚಾಮರಾಜನಗರ**

ಚಾಮರಾಜನಗರ ಜಿಲ್ಲೆ ಶೈಕ್ಷಣಿಕ ಹಿಂದುಳಿದ ಜಿಲ್ಲೆ. ಇಲ್ಲಿಯ ಸಾಕ್ಷರತೆ ಪ್ರಮಾಣ ಶೇ.62 ರಷ್ಟಿದೆ. ಸಾಕಷ್ಟು ಸಮುದಾಯಗಳಲ್ಲಿ ಪದವಿ ಪಡೆದ ವರೇ ಇಲ್ಲದಂಥ ಪರಿಸ್ಥಿತಿ ಇದೆ.

**ನನಗೆ ಇದು ಖುಷಿ ವಿಚಾರ. ತಂದೆ, ತಾಯಿ ಸೇರಿದಂತೆ ಕುಟುಂಬದ ಎಲ್ಲರೂ ನನ್ನ ವ್ಯಾಸಂಗಕ್ಕೆ ಪ್ರೋತ್ಸಾಹ ನೀಡಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚಿನದನ್ನು ಸಾಧಿಸಬೇಕೆಂಬ ನನ್ನ ಕನಸು ಈಡೇರಿದಂತಾಗಿದೆ. ಸಂಶೋಧಕಿಯಾಗಿ ನನ್ನ ಶಿಕ್ಷಣವನ್ನು ಮುಂದುವರಿಸುತ್ತಿದ್ದೇನೆ.**

**| ರುಮಾನ ಫರ್ಹಿನ್ ಚಾ.ನಗರ**

ರುಮಾನ, ರವರ ಈ ಸಾಧನೆಗೆ ಅವರ ತಂದೆ, ತಾಯಿ ಪ್ರೋತ್ಸಾಹ ಉನ್ನತ ಮಟ್ಟದ್ದು. ತಂದೆ ಮೊಕ್ತಾರ್ ಅಹ್ಮದ್ ಬ್ಯುಸಿನೆಸ್ನಲ್ಲಿ ತೊಡಗಿಸಿಕೊಂಡು ಮಗಳಿಗೆ ಅಗತ್ಯ ಪ್ರೋತ್ಸಾಹ ನೀಡಿದ್ದಾರೆ. ತಾಯಿ ನಹೀಮಾ ಕೌಸರ್ ಇದಕ್ಕೆ ಸಾಥ್ ನೀಡಿದ್ದಾರೆ. ರುಮಾನ ಅವರಿಗೆ ಮೂವರು ಸಹೋದರಿ ಯರಿದ್ದು, ಉನ್ನತ ವ್ಯಾಸಂಗ ಮಾಡಿದ್ದಾರೆ. ರುಮಾನ ಅವರು ಪ್ರಾಥಮಿಕ ವಿದ್ಯಾಭ್ಯಾಸ ಮಾಡಿರುವುದು ಗುಂಡ್ಲುಪೇಟೆ ತಾಲೂಕು ಕಬ್ಬಹಳ್ಳಿಯಲ್ಲಿ, ನಂತರ ಚಾ.ನಗರದಲ್ಲಿ ನಾನಾ ಶಾಲೆಗಳಲ್ಲಿ ಓದಿ, ಪಿಯುಸಿ, ಬಿಎಸ್ಸಿಯನ್ನು ನಗರದ ಜೆಎಸ್ ಎಸ್ ಕಾಲೇಜಿನಲ್ಲಿ ಹಾಗೂ ಎಂಎಸ್ಸಿಯನ್ನು ಮೈಸೂರಿನ ಮಾನಸ ಗಂಗೋತ್ರಿಯಲ್ಲಿ ಪೂರೈಸಿದ್ದರು. ಬಿಎಸ್ಸಿಯಲ್ಲಿ 4 ಚಿನ್ನದ ಪದಕ ಹಾಗೂ ಎಂಎಸ್ಸಿಯನ್ನು 3 ಚಿನ್ನದ ಚಿನ್ನದ ಪದಕದೊಂದಿಗೆ ಪೂರೈಸಿದ್ದರು ಎಂಬುದು ಗಮನಾರ್ಹ. ನಂತರ ವಿಜ್ಞಾನ, ತಂತ್ರಜ್ಞಾನದ ಇನ್ಸ್ಪೈರ್ ಫೆಲೋಶಿಪ್ ಗೆ ಆಯ್ಕೆಯಾಗಿ, ಅದರಡಿಯಲ್ಲೇ ಅವರು ಪಿಎಚ್ಡಿ ಪೂರೈಸಿದ್ದಾರೆ ಎಂಬುದು ವಿಶೇಷ. ಇದೀಗ ಅವರು ಸಹ ಸಂಶೋಧಕರಾಗಿಯೂ ಆಯ್ಕೆಯಾಗಿದ್ದಾರೆ ಎಂಬುದು ಮತ್ತೊಂದು ವಿಶೇಷ.

# ನಾಯಕ ಸಮುದಾಯಕ್ಕೆ ಎಂಪಿ ಟಿಕೇಟ್ ನೀಡಲು ಒತ್ತಾಯ

**ಮೈಸೂರು:** ಲೋಕಸಭಾ ಚುನಾವಣೆಯಲ್ಲಿ ಮೈಸೂರು-ಕೊಡಗು ಕ್ಷೇತ್ರದಿಂದ ಸ್ಪರ್ಧಿಸಲು ನಾಯಕ ಸಮುದಾಯಕ್ಕೆ ಕಾಂಗ್ರೆಸ್ ಪಕ್ಷ ಟಿಕೆಟ್ ನೀಡಬೇಕು ಎಂದು ರಾಜ್ಯ ನಾಯಕರ ಹಿತರಕ್ಷಣಾ ವೇದಿಕೆ ಅಧ್ಯಕ್ಷ ದ್ಯಾವಪ್ಪ ನಾಯಕ ಒತ್ತಾಯಿಸಿದರು. ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಷೇತ್ರದಲ್ಲಿ ಸಮುದಾಯದ 2 ಲಕ್ಷಕ್ಕೂ ಅಧಿಕ ಮತದಾರರಿದ್ದಾರೆ. ಆದರೂ, ಜನಸಂಖ್ಯೆಗೆ ತಕ್ಕ ರಾಜಕೀಯ ಪ್ರಾತಿನಿಧ್ಯ ದೊರೆತಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಮಗೆ ಸಾಮಾಜಿಕ ನ್ಯಾಯ ದೊರಕಿಸಬೇಕು ಎಂದು ಒತ್ತಾಯಿಸಿದರು. ಮೈಸೂರು ವಿಭಾಗದಲ್ಲಿಯೂ 15 ಲಕ್ಷ ಮತದಾರರಿದ್ದೇವೆ. ಇಲ್ಲಿ ಟಿಕೆಟ್ ನೀಡಿದರೆ ಚಾಮರಾಜನಗರ ಮಂಡ್ಯ, ಹಾಸನ ತುಮಕೂರು ಕ್ಷೇತ್ರದಲ್ಲಿ ಪಕ್ಷಕ್ಕೆ ಸಹಕಾರವಾಗಲಿದೆ. ಬಿಜೆಪಿಯವರು ಅವಕಾಶ ನೀಡಿದರೂ ಸಹಕರಿಸುತ್ತೇವೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಮುದಾಯದ ಮುಖಂಡರಾದ ಶಿವನಂಜಯ್ಯ, ರಮ್ಮನಹಳ್ಳಿ, ವಾಲ್ಮೀಕಿ ನಿಂಗರಾಜ್, ಮಯೂರ ಕಲ್ಕುಣಿಕೆ, ಕೃಷ್ಣ ಸೋಮಶಪುರ, ಬನ್ನಿಕುಪ್ಪೆ ರಾಮಚಂದ್ರ, ಹುಣಸೂರು ರಾಜು ಭಾಗವಹಿಸಿದ್ದರು.



# ಚಿನ್ನ ಅಡವಿಟ್ಟು ಮೋಸ ಹೋದ ರೈತರು



**ಚಾಮರಾಜನಗರ:** ತಾಲ್ಲೂಕಿನ ಮಲೆಯೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಚಿನ್ನ ಅಡವಿಟ್ಟು ಮೋಸ ಹೋಗಿರುವ ರೈತರ ಪೈಕಿ 96 ಜನರಿಗೆ ಶೀಘ್ರವಾಗಿ ಚಿನ್ನವನ್ನು ವಾಪಸ್ ಕೊಡಿಸಲಾಗುವುದು ಎಂದು ತಹಶೀಲ್ದಾರ್ ಐ.ಇ.ಬಸವರಾಜು ಹೇಳಿದರು.

ಚಾಮರಾಜನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿನ ಜೆ.ಎಚ್ .ಪಟೇಲ್ ಸಭಾಂಗಣದಲ್ಲಿ ನಡೆದ ಠೇವಣಿದಾರರ ಸಭೆಯಲ್ಲಿ ಮಾತನಾಡಿದ ಅವರು, 'ಪ್ರಕರಣ ಬೆಳಕಿಗೆ ಬಂದಾಗಿನಿಂದ ಜಿಲ್ಲಾಧಿಕಾರಿ, ಪೊಲೀಸ್ ಇಲಾಖೆ, ಸಹಕಾರ ಇಲಾಖೆ ರೈತರಿಗೆ ನ್ಯಾಯ ಕೊಡಿಸಲು ಮುಂದಾಗಿದ್ದಾರೆ. ರೈತರಿಗೂ ಹೊರೆಯಾಗದ ರೀತಿಯಲ್ಲಿ ಫೈನಾನ್ಸ್ ಕಂಪನಿಗಳಲ್ಲಿರುವ ಚಿನ್ನವನ್ನು ಬಿಡಿಸಿಕೊಡಲು ಕ್ರಮವಹಿಸಲಾಗಿದೆ. 384 ರೈತರ ಪೈಕಿ ಈಗಾಗಲೇ 96 ಜನರನ್ನು ಗುರುತಿಸಲಾಗಿದ್ದು, ಮುಂದಿನ ವಾರ ಚಿನ್ನ ಪ್ರದರ್ಶಿಸಲಾಗುವುದು. ಅಲ್ಲಿಗೆ ಬಂದು ತಮ್ಮ ಚಿನ್ನವನ್ನು ಗುರುತಿಸಬೇಕು' ಎಂದರು.

'ರಾಜ್ಯದಲ್ಲಿ ಇಂತಹ ಪ್ರಕರಣಗಳು ಹಲವು ನಡೆದಿವೆ. ಆದರೆ ಅಂತ್ಯ ಕಂಡವು ಕಡಿಮೆ. ಪರಿಹಾರವೂ ಸಿಕ್ಕಿಲ್ಲ. ಇಲ್ಲಿನ ಜಿಲ್ಲಾಡಳಿತ ರೈತರಿಗೆ ನ್ಯಾಯ ಕೊಡಿಸಲು ಕ್ರಮ ಕೈಗೊಳ್ಳುತ್ತಿದೆ. ಪಿಎಸಿಸಿ ಸಿಇಒ ನಾಗೇಂದ್ರ ಅವರು ಚಿನ್ನ ಇಟ್ಟಿದ್ದ ಫೈನಾನ್ಸ್ ಕಂಪನಿಗಳು ಕೋರ್ಟ್‌ಗೆ ಹೋಗದಂತೆ ತಡೆ ಹಿಡಿದಿದ್ದೇವೆ' ಎಂದರು.

'ಮೊದಲಿಗೆ 96 ಜನರಿಗೆ ಚಿನ್ನ ಕೊಡಿಸಲಾಗುವುದು. ಆ ನಂತರ ಹಂತ ಹಂತವಾಗಿ ಉಳಿದ ರೈತರಿಗೆ ಚಿನ್ನ ಕೊಡಿಸಲು ಕ್ರಮವಹಿಸಲಾಗುವುದು. ಮುಂದಿನ ಒಂದೂವರೆ ತಿಂಗಳ ಒಳಗೆ ಸಮಸ್ಯೆ ಬಗೆಹರಿಯಲಿದೆ. ರೈತರು ಸಹಕಾರ ನೀಡಬೇಕು' ಎಂದು ಮನವಿ ಮಾಡಿದರು. ಸೈಬರ್, ಆರ್ಥಿಕ ಮತ್ತು ಮಾದಕ ದ್ರವ್ಯ ಅಪರಾಧ ನಿಗ್ರಹ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಸಾಗರ್ ಮಾತನಾಡಿ, 'ಈಗಾಗಲೇ ಫೈನಾನ್ಸ್‌ಗಳಿಂದ 8.114 ಕೆಜಿ ಚಿನ್ನವನ್ನು ವಶಪಡಿಸಿಕೊಳ್ಳಲಾಗಿದೆ. ಉಳಿದಂತೆ ಕೆಲ ಫೈನಾನ್ಸ್ ಕಂಪನಿಗಳು ತಮ್ಮ ಬಳಿಯೇ ಚಿನ್ನ ಇಟ್ಟುಕೊಂಡಿದ್ದಾರೆ. ಯಾವುದೇ ಕಾರಣಕ್ಕೂ ಹರಾಜು ಹಾಕದಂತೆ ಸೂಚನೆ ನೀಡಲಾಗಿದೆ. ಮುಂದಿನ ವಾರ ಚಿನ್ನವನ್ನು ಪ್ರದರ್ಶಿಸಲಾಗುವುದು. ಅಡವಿಟ್ಟವರು ಹಾಗೂ ಚಿನ್ನ ಧರಿಸುತ್ತಿದ್ದವರು ಕಡ್ಡಾಯವಾಗಿ ಬರಬೇಕು' ಎಂದರು.

'ಬರುವಾಗ ಪಿಎಸಿಸಿ ಬ್ಯಾಂಕ್ ನಲ್ಲಿ ಅಡವಿಟ್ಟಿರುವ ಕುರಿತು ರಶೀದಿ ತರಬೇಕು. ಪ್ರಕರಣ ದಾಖಲಾಗುವ ಮೊದಲೇ 280 ಗ್ರಾಂ ಚಿನ್ನ ಹರಾಜಾಗಿರುವ ಕುರಿತು ಕ್ರಮವಹಿಸಿ ಆ ಚಿನ್ನವನ್ನು ರೈತರಿಗೆ ಕೊಡಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗುವುದು. ಚಿನ್ನ ಗುರುತಿಸಲು ನಾಗೇಂದ್ರನನ್ನು ಕರೆ ತರಲಾಗುವುದು' ಎಂದರು.

ರಾಜ್ಯ ಕಬ್ಬು ಬೆಳೆಗಾರರ ಸಂಘದ ಚಾಮರಾಜನಗರ?ಮೈಸೂರು ಜಿಲ್ಲಾ ಕಾರ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಮಾತನಾಡಿ, 'ಪಿಎಸಿಸಿ ಬ್ಯಾಂಕ್‌ನಲ್ಲಿ ಚಿನ್ನ ಅಡವಿಟ್ಟವರು ಯಾವುದೇ ಕಾರಣಕ್ಕೂ ಬೇರೆಯವರ ಮಾತು ಕೇಳಬೇಡಿ. ಚಿನ್ನ ಅಡವಿಟ್ಟಿರುವ ಬಗ್ಗೆ ರಶೀದಿ ಇರಬೇಕು. ಈಗಾಗಲೇ ಈ ಪ್ರಕರಣ ಸಂಬಂಧ ಜಿಲ್ಲಾಧಿಕಾರಿಗಳು ಹಾಗೂ ಸಹಕಾರ ಇಲಾಖೆಯ ಅಧಿಕಾರಿಗಳು ಪಟ್ಟಿ ಮಾಡಿದ್ದಾರೆ. ಸೂಚನೆಯಂತೆ ಹೆಚ್ಚುವರಿ ಬಡ್ಡಿ ಕಟ್ಟಿ ತಮ್ಮ ಚಿನ್ನವನ್ನು ಪಡೆದುಕೊಳ್ಳಬೇಕು' ಎಂದರು.

ಸಹಕಾರ ಇಲಾಖೆಯ ಜಿಲ್ಲಾ ಉಪ ವ್ಯವಸ್ಥಾಪಕಿ ಜ್ಯೋತಿ ಅರಸ್, ಇಲಾಖೆಯ ದಯಾನಂದ್, ಕಬ್ಬು ಬೆಳೆಗಾರರ ಸಂಘದ ಪದಾಧಿಕಾರಿಗಳು, ರೈತರು ಇದ್ದರು.

## ದೆಹಲಿಯಲ್ಲಿ ಫೆ.13ರಂದು ದೇಶದ
# ರೈತರ ಮಹಾಸಂಗಮ



**ಮೈಸೂರು:** ಒಂದು ವರ್ಷ ಕಾಲ ಹೋರಾಟ ಮಾಡಿದ ರೈತರಿಗೆ ಪ್ರಧಾನಿಯವರು ಭರವಸೆ ನೀಡಿ ಹುಸಿಗೊಳಿಸಿದ್ದಾರೆ. ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಶಾಸನ ಜಾರಿಗಾಗಿ ಕೃಷಿ ಉತ್ಪನ್ನಗಳಿಗೆ ಎಂ ಎಸ್ ಸ್ವಾಮಿನಾಥನ್ ಆಯೋಗದ ವರದಿಯಂತೆ ಬೆಂಬಲ ಬೆಲೆ ನಿಗದಿ ಮಾಡಲು ದೇಶದ ರೈತರ ಸಂಪೂರ್ಣ ಕೃಷಿ ಸಾಲ ಮನ್ನಾಕಾಗಿ ಒತ್ತಾಯಿಸಲು ದೆಹಲಿಯಲ್ಲಿ ಫೆಬ್ರವರಿ 13ರಂದು ದೇಶದ ಎಲ್ಲಾ ರೈತ ಸಂಘಟನೆಗಳ ಮಹಾಸಂಗಮ ರ್‍ಯಾಲಿ ನಡೆಯಲಿದೆ.

ದಕ್ಷಿಣ ಭಾರತ ಸಂಯುಕ್ತ ಕಿಸಾನ್ ಮೋರ್ಚ ಸಂಚಾಲಕ ,ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ಈ ಕುರಿತು ಮಾತನಾಡಿ, ಈಗಾಗಲೇ ಸಂಯುಕ್ತ ಕಿಸಾನ್ ಮೋರ್ಚಾ ವತಿಯಿಂದ ದೇಶದ ವಿವಿಧ ರಾಜ್ಯಗಳಲ್ಲಿ 14 ಕಿಸಾನ್ ಮಹಾ ಪಂಚಾಯತ್ ಸಮಾವೇಶಗಳ ನಡೆಸಿ ರೈತರ ಜಾಗೃತಿ ಪಡಿಸಲಾಗಿದೆ ಎಂದು ತಿಳಿಸಿದರು.

ದೇಶದ ರೈತರನ್ನು ರಕ್ಷಣೆ ಮಾಡಲು ಕೇಂದ್ರ ಸರ್ಕಾರ ವಿಶ್ವ ವ್ಯಾಪಾರ ಒಪ್ಪಂದದಿಂದ ಹೊರಗೆ ಬರಬೇಕು. ಕಬ್ಬಿನ ಎಫ್ ಆರ್ ಪಿ ದರವನ್ನು ಕನಿಷ್ಠ 4000 ರೂಗಳಿಗೆ ಏರಿಕೆ ಮಾಡಬೇಕು . 60 ವರ್ಷ ತುಂಬಿದ ರೈತರಿಗೆ ಕನಿಷ್ಠ 10,000 ಪಿಂಚಣಿ ನೀಡುವ ಯೋಜನೆ ಜಾರಿಗೆ ತರಬೇಕು. ಬೆಳೆ ವಿಮೆ ಪದ್ಧತಿ ಬದಲಾಯಿಸಬೇಕು ಎಲ್ಲಾ ಬೆಳೆಗಳಿಗೂ ಬೆಳೆವಿಮೆ ಜಾರಿ ಆಗಬೇಕು ಎಂಬ ಒತ್ತಾಯಗಳನ್ನು ಮಾಡಲಾಗುವುದು ಎಂದರು. ಬಣ್ಣಾರಿ ಸಕ್ಕರೆ ಕಾರ್ಖಾನೆಯನ್ನು ರಾಜ್ಯ ಸರ್ಕಾರ ವಶಕ್ಕೆ ಪಡೆಯಬೇಕು. ಮುಖ್ಯಮಂತ್ರಿಯವರ ಕ್ಷೇತ್ರದಲ್ಲಿರುವ ಬಣ್ಣಾರಿ ಸಕ್ಕರೆ ಕಾರ್ಖಾನೆ ರಹದಾ ರಿ ನಿಯಮಗಳನ್ನು ಉಲ್ಲಂಘಿಸಿ ಸರ್ಕಾರಕ್ಕೆ ಹಾಗೂ ರೈತರಿಗೆ ಹಲವಾರು ವಿಧದಲ್ಲಿ ಸುಳ್ಳು ಮಾಹಿತಿ ವರದಿ ಸಲ್ಲಿಸಿ ವಂಚನೆ ಮಾಡುತ್ತಿದೆ. ರಾಜ್ಯ ಸರ್ಕಾರ ಕೂಡಲೇ ಈ ಬಗ್ಗೆ ಕೂಡಲೇ ದಕ್ಷ ಅಧಿಕಾರಿಗಳ ತಂಡ ರಚಿಸಿ ತನಿಖೆ ನಡೆಸಿ ಸಕ್ಕರೆ ಕಾರ್ಖಾನೆಯನ್ನು ಸರ್ಕಾರದ ವಶಕ್ಕೆ ಪಡೆದು ರೈತರಿಗೆ ನ್ಯಾಯ ಕೊಡಿಸಬೇಕು ಎಂದು ಒತ್ತಾಯಿಸಿದರು.

ಸಹಕಾರಿ ವ್ಯವಸ್ಥೆಯಲ್ಲಿರುವ ಎಪಿಎಂಸಿ, ಸಹಕಾರಿ ಬ್ಯಾಂಕುಗಳು, ಹಾಲು ಉತ್ಪಾದಕರ ಸಂಸ್ಥೆಗಳ ಕಾರ್ಯನಿರ್ವಾಹಣೆಯಲ್ಲಿ ಸರ್ಕಾರದ ನಾಮನಿರ್ದೇಶನ ಪ್ರತಿನಿಧಿ ಗಳನ್ನು ನೇಮಕ ಮಾಡುವುದನ್ನು ಕೈ ಬಿಡಬೇಕು ಸಂಸ್ಥೆಗಳು ದುರ್ಬಲವಾಗಲು ರಾಜಕೀಯ ಪ್ರವೇಶ ಕಾರಣವಾಗಿದೆ ಎಂಬುದನ್ನು ಸರ್ಕಾರ ಅರಿತುಕೊಳ್ಳಬೇಕು ಎಂದರು. ಕರ್ನಾಟಕ ಜಲ ಸಂರಕ್ಷಣಾ ಸಮಿತಿ ವತಿಯಿಂದ, ಇಂದಿನ ಮಾಧ್ಯಮ ಹಾಗೂ ಪ್ರಜಾತಂತ್ರ ವ್ಯವಸ್ಥೆ, ಕುರಿತು ವಿಚಾರ ವಿಮರ್ಶ ಗೋಷ್ಠಿ ಇದೇ ತಿಂಗಳ 24 ರಂದು ಬೆಂಗಳೂರಿನ ಶಾಸಕರ ಭವನದ ಸಭಾಂಗಣದಲ್ಲಿ ನಡೆಯಲಿದೆ ನಿವೃತ್ತ ನ್ಯಾಯಾಧೀಶರು, ಸಮಾಜ ಚಿಂತಕರು, ಮಾಧ್ಯಮ ಕ್ಷೇತ್ರದ ಚಿಂತಕರು ಗೋಷ್ಠಿಯಲ್ಲಿ ಭಾಗವಹಿಸಿ ಅಭಿಪ್ರಾಯಗಳನ್ನು ಮಂಡಿಸಲಿದ್ದಾರೆ. ಹತ್ತಳ್ಳಿ ದೇವರಾಜ್, ಪಿ ಸೋಮಶೇಖರ್, ಬರಡನಪುರ ನಾಗರಾಜ್, ಕಿರಗಸೂರ ಶಂಕರ,ರಂಗರಾಜು, ಮಾರ್ಬಳ್ಳಿ ನೀಲಕಂಠಪ್ಪ, ಬಸವರಾಜು, ಗೌರಿಶಂಕರ್, ವೆಂಕಟೇಶ ನಾಗೇಶ ,ಪಟೇಲ್ ಶಿವಮೂರ್ತಿ,ರೇವಣ್ಣ,ಶಿವಣ್ಣ ಇದ್ದರು.

# 'ಅಗಸ್ತ್ಯ ಸಿದ್ಧವೈದ್ಯ ಪದ್ಧತಿ' ಗ್ರಂಥ ಲೋಕಾರ್ಪಣೆ

**ಮೈಸೂರು:** ನಗರದ ಅಗಸ್ತ್ಯ ಸಿದ್ಧ ಸಾಹಿತ್ಯ ಸಂಶೋಧನಾ ಕೇಂದ್ರ, ಮೈಸೂರು ಇವರ ವತಿಯಿಂದ ಸಿದ್ಧ ವೈದ್ಯರಾದ ನರಸಿಂಹಸ್ವಾಮಿ ಪಿ.ಎಸ್. ರವರ 'ಅಗಸ್ತ್ಯ ಸಿದ್ಧ ವೈದ್ಯ ಪದ್ಧತಿ' ಗ್ರಂಥದ ಲೋಕಾರ್ಪಣಾ ಕಾರ್ಯಕ್ರಮವನ್ನು ಲಕ್ಷ್ಮೀಪುರಂನಲ್ಲಿರುವ ಗೋಪಾಲಸ್ವಾಮಿ ಶಿಶು ವಿಹಾರದಲ್ಲಿ ಜ.14ರಂದು ಭಾನುವಾರ ಬೆಳಿಗ್ಗೆ 10ಕ್ಕೆ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ ಕೆ.ಆರ್. ಕ್ಷೇತ್ರದ ಶಾಸಕರಾದ ಟಿ.ಎಸ್.ಶ್ರೀವತ್ಸರವರು, ಹಿರಿಯ ನ್ಯಾಯವಾದಿಗಳಾದ ಓ.ಶ್ಯಾಂಭಟ್, ಮಣಿಪಾಲ್‌ನ ಅಕಾಡೆಮಿ ಆಫ್ ಹೈಯರ್ ಸೈನ್ಸ್‌ನ ಸಿದ್ಧ ವೈದ್ಯರಾದ ಡಾ.ಅರುಳ್ ಅಮುದನ್, ಚೆನ್ನೈನ ಸಿದ್ಧ ವೈದ್ಯರಾದ ಡಾ.ಸೆಲ್ವ ಷಣ್ಮುಗಂ, ಮೈಸೂರಿನ ಹಿರಿಯ ಆಯುರ್ವೇದ ತಜ್ಞರಾದ ಡಾ.ಎನ್.ಎಸ್. ರಾಮಚಂದ್ರ, ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಕೆ.ಎಸ್.ರಾಧಾಕೃಷ್ಣರಾವ್, ಹಿರಿಯ ಆಯುರ್ವೇದ ತಜ್ಞರಾದ ಡಾ.ಚಂದ್ರಶೇಖರ್ ಎ.ಎಸ್. ರವರು ಭಾಗವಹಿಸಲಿದ್ದಾರೆ. ಭಾರತೀಯ ವೈದ್ಯ ಪದ್ಧತಿಯಲ್ಲಿ ಅತ್ಯಂತ ಪ್ರಾಚೀನವಾದ ವೈದ್ಯ ಪದ್ಧತಿ ಅಗಸ್ತ್ಯ ಸಿದ್ಧ ವೈದ್ಯ ಪದ್ಧತಿ. ಅಗಸ್ತ್ಯರು ಇದರ ಪ್ರವರ್ತಕರು. ಮೂಲತಃ ಸಿದ್ಧ ವೈದ್ಯ ಪದ್ಧತಿಯು ತಮಿಳು ಮತ್ತು ಕೇರಳ ಭಾಷೆಯಲ್ಲಿದೆ. ಆದ್ದರಿಂದ ಕರ್ನಾಟಕ ರಾಜ್ಯದ ಜನರಿಗೆ ಅನುಕೂಲವಾಗಲೆಂದು ಸಿದ್ಧ ವೈದ್ಯ ಪದ್ಧತಿಯನ್ನು ಪರಿಚಯಿಸಲಿಕ್ಕಾಗಿ ಹಳೆಯ ಗ್ರಂಥ, ತಾಳೇಗರಿ, ಪ್ರಾಚೀನ ತಮಿಳು ಲಿಪಿಯಲ್ಲಿದ್ದ ಅಪರೂಪದ ಸಿದ್ಧ ವೈದ್ಯ ಸಾಹಿತ್ಯವನ್ನು ಕನ್ನಡಿಗರಿಗೆ ಪುಸ್ತಕದ ರೂಪದಲ್ಲಿ ಅಪರೂಪವಾಗಿ ಲೋಕಾರ್ಪಣೆಯಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ 9845167119 ಸಂಪರ್ಕಿಸಬಹುದು.

# 16ಕ್ಕೆ ರಾಜ್ಯ ಮಟ್ಟ ಸ್ಪರ್ಧಾಕೂಟ

**ಮೈಸೂರು:** ಕ್ರೀಡಾ ಭಾರತಿ ಸಂಸ್ಥೆಯಿಂದ ಜ.12ರಂದು ಬೆಳಗ್ಗೆ 9 ಗಂಟೆಗೆ ಯಾದವಗಿರಿಯ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ರಾಜ್ಯಮಟ್ಟದ ಸ್ಕೂಲ್ ಬ್ಯಾಂಡ್ ಸ್ಪರ್ಧಾಕೂಟ ಆಯೋಜಿಸಲಾಗಿದೆ ಎಂದು ಸಂಸ್ಥೆಯ ದಕ್ಷಿಣ ಭಾರತ ವಿಭಾಗದ ಕಾರ್ಯದರ್ಶಿ ಮಹೇಂದ್ರ ಪ್ರಸಾದ್ ತಿಳಿಸಿದರು. ಬುಧವಾರ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ವಿವಿಧ ಭಾಗಗಳಿಂದ ಜಿಲ್ಲಾ ಮಟ್ಟದಲ್ಲಿ ವಿಜೇತರಾದ 15 ತಂಡಗಳು ಸ್ಪರ್ಧೆಗೆ ಆಗಮಿಸಲಿವೆ. ವಿದ್ಯಾಶಾಲೆಯ ಕರೆಸ್ಪಾಂಡೆಂಟ್ ಯುಕ್ತೇಶಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಸಂಸ್ಥೆಯ ಕ್ಷೇತ್ರೀಯ ಸಂಯೋಜಕ ಎ.ಎನ್.ಅಶೋಕ್ ಉದ್ಘಾಟಿಸುವವರು ಎಂದು ತಿಳಿಸಿದರು. ಉತ್ತಮ ಹತ್ತು ತಂಡಗಳಿಗೆ ಒಟ್ಟು 55 ಸಾವಿರ ನಗದು ಬಹುಮಾನ ಲಭ್ಯವಿದ್ದು, ಪ್ರಥಮ ಸ್ಥಾನಕ್ಕೆ 10 ಸಾವಿರ ನೀಡಲಾಗುವುದು. ಟ್ರೋಫಿಗಳನ್ನು ನೀಡಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಜಿಲ್ಲಾಧ್ಯಕ್ಷ ಅಮೃತ ಪುರೋಹಿತ್, ಕಾರ್ಯದರ್ಶಿ ಪ್ರಶಾಂತ್, ಮಹಿಳಾ ಘಟಕದ ಕಾರ್ಯದರ್ಶಿ ಕಾವ್ಯ, ಸದಸ್ಯ ಆನಂದ್ ಉಪಸ್ಥಿತರಿದ್ದರು.



# ವಿದ್ಯಾರ್ಥಿ ವೇತನಕ್ಕೆ ದಾಖಲಾತಿಗಳನ್ನು ಸಲ್ಲಿಸಿ

**ರಾಮನಗರ:** ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರು 2022-23 ನೇ ಸಾಲಿನಲ್ಲಿ ಪ್ರೀ ಮೆಟ್ರಿಕ್ ಮತ್ತು ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ವೇಳೆ ಕೆಲವು ವಿದ್ಯಾರ್ಥಿಗಳು ಎಸ್‌ಎಟಿ/ ಸ್ಟೂಡೆಂಟ್ ಐಡಿ (SAT / Student ID) ಗಳನ್ನು ತಪ್ಪಾಗಿ ನಮೂದಿಸಿರುವುದರಿಂದ ಶೈಕ್ಷಣಿಕ ಸಹಾಯಧನ ಬಿಡುಗಡೆಯಾಗಿರುವುದಿಲ್ಲ. ಅಂತಹ ವಿದ್ಯಾರ್ಥಿಗಳು/ಅರ್ಜಿದಾರರು ವಿದ್ಯಾರ್ಥಿಯ ಸ್ಟೂಡೆಂಟ್ ಐಡಿ, ಫಲಾನುಭವಿಯ ಕಾರ್ಮಿಕರ ಗುರುತಿನ ಚೀಟಿ ಹಾಗೂ ಎಸ್‌ಎಸ್‌ಪಿ ತಂತ್ರಾಂಶದಲ್ಲಿ ವಿದ್ಯಾರ್ಥಿವೇತನಕ್ಕೆ ಅರ್ಜಿಸಲ್ಲಿಸಿದ ಸ್ವೀಕೃತಿ ಪತ್ರಗಳೊಂದಿಗೆ ತಮ್ಮ ಕಾರ್ಯವ್ಯಾಪ್ತಿಯ ಕಾರ್ಮಿಕ ನೀರಿಕ್ಷಕರ ಕಚೇರಿಗಳಿಗೆ ಭೇಟಿ ನೀಡಿ ಜ. 16ರೊಳಗೆ ಅಪ್‌ಡೇಟ್ ಮಾಡಿಸಿಕೊಂಡು ಮಂಡಳಿಯ ಸೌಲಭ್ಯದ ಸದುಪಯೋಗ ಪಡೆಯುವಂತೆ ರಾಮನಗರ ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 14 ರಂದು ಲೋಕ ಸಿರಿ-91 ಕಾರ್ಯಕ್ರಮ

**ರಾಮನಗರ:** ಕರ್ನಾಟಕ ಜಾನಪದ ಪರಿಷತ್ತು ಹಾಗೂ ಜಾನಪದ ಲೋಕದ ವತಿಯಿಂದ ರಾಮನಗರ ಜಾನಪದ ಲೋಕದಲ್ಲಿ ನಾಡೋಜ ಎಚ್.ಎಲ್. ನಾಗೇಗೌಡರ ನೆನಪಿನ 'ಲೋಕಸಿರಿ-91' ಕಾರ್ಯಕ್ರಮವನ್ನು ಜ. 14 ರಂದು ಮಧ್ಯಾಹ್ನ 2.30ಕ್ಕೆ ಹಮ್ಮಿಕೊಳ್ಳಲಾಗಿದೆ. ಈ ಬಾರಿ ಜಾನಪದ ಹಾಡುಗಾರ್ತಿ ಕಲಾವಿದರಾದ ವಡ್ಡಗೆರೆ ಕದರಮ್ಮ ಅವರು ತಿಂಗಳ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಪ್ರೊ. ಹಿ.ಶಿ. ರಾಮಚಂದ್ರೇಗೌಡ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಬೆಂಗಳೂರಿನ ಸಾಮಾಜಿಕ ಕಾರ್ಯಕರ್ತರು, ಕವಿ, ಸಂಶೋಧಕರಾದ ಡಾ. ವಡ್ಡಗೆರೆ ನಾಗರಾಜಯ್ಯ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

# ನಗರಸಭೆ ಸಾಮಾನ್ಯ ಸಭೆ

**ರಾಮನಗರ:** ರಾಮನಗರ ನಗರಸಭೆಯ ಪ್ರಶಸ್ತಿ ಭವನದಲ್ಲಿ ಜ. 13ರ ಶನಿವಾರ ಬೆಳಿಗ್ಗೆ 11 ಗಂಟೆಗೆ ನಗರಸಭೆ ಅಧ್ಯಕ್ಷರಾದ ವಿಜಯಕುಮಾರಿ ಅವರ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆ ಆಯೋಜಿಸಲಾಗಿದೆ ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಳ್ಳಮಾವಾಸ್ಯೆ ಪ್ರಯುಕ್ತ ವಿಶೇಷ ಪೂಜೆ

**ಚಾಮರಾಜನಗರ:** ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದ ಮಾದಪ್ಪನ ಸನ್ನಿಧಿಯಲ್ಲಿ ಗುರು ವಾರ ಎಳ್ಳಮಾವಾಸ್ಯೆ ಪ್ರಯುಕ್ತ ವಿಶೇಷ ಪೂಜೆ ನಡೆಯಿತು.

ಅಮಾವಾಸ್ಯೆ ಪ್ರತಯುಕ್ತ ಮಾದಪ್ಪನಿಗೆ ಬುಧವಾರ ಎಣ್ಣೆ ಮಜ್ಜನ, ತೈಲಾಭಿಷೇಕ, ಲಕ್ಷ ಬಿಲ್ವಾರ್ಚನೆ ವಿಶೇಷ ಪೂಜೆ ವಿಧಾನವಾಗಿ ಜರುಗಿತು. ಹರಕೆ ಹೊತ್ತ ಭಕ್ತರು ಹುಲಿವಾಹನ, ಬಸವ ವಾಹನ, ರುದ್ರಾಕ್ಷಿ ಮಂಟಪ ಉತ್ಸವಗಳಲ್ಲಿ ಪಾಲ್ಗೊಳ್ಳುವ ಮೂಲಕ ಇಷ್ಟಾರ್ಥ ಮಹದೇಶ್ವರನಿಗೆ ಹರಕೆ ಕಾಣಿಕೆ ಸಲ್ಲಿಸಿದರು. ಭಕ್ತರು ಉಘೇ ಉಘೇ ಮಾದಪ್ಪ ಎಂಬ ಜೈಕಾರ ಹಾಕಿ ಭಕ್ತಿ ಮೆರೆದರು.

ಸಾಲಿನಲ್ಲಿ ದೇವರ ದರ್ಶನ ಪಡೆಯಲು ವ್ಯವಸ್ಥೆ ಮಾಡಲಾಗಿದ್ದು, ಕಾಲ್ನಡಿಗೆಯಲ್ಲಿ ಹಾಗೂ ರಾಜ್ಯದ ನಾನಾ ಕಡೆಗಳಿಂದ ಬಂದಿದ್ದ ಭಕ್ತರು ಸರತಿ ಸಾಲಿನಲ್ಲಿ ನಿಂತು ಮಾದಪ್ಪನ ದರ್ಶನ ಪಡೆದು ಪುನೀತರಾದರು.

ಪ್ರಾಧಿಕಾರದ ವತಿಯಿಂದ ಭಕ್ತರಿಗೆ ಕುಡಿಯುವ ನೀರಿನ ವ್ಯವಸ್ಥೆ, ಪ್ರಸಾದ ವಿತರಣೆ, ನೆರಳಿನ ವ್ಯವಸ್ಥೆ ಹಾಗೂ ಶೌಚಾಲಯದ ವ್ಯವಸ್ಥೆಯನ್ನು ಸಮರ್ಪಕವಾಗಿ ಒದಗಿಸಲಾಗಿತ್ತು.



**ಬಸ್ ವ್ಯವಸ್ಥೆ**

ಭಕ್ತರಿಗೆ ಅನುಕೂಲ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಕೆಎಸ್‌ಆರ್‌ಟಿಸಿ ವಿಭಾಗದ ವತಿಯಿಂದ ಸಾರಿಗೆ ಬಸ್‌ಗಳ ವ್ಯವಸ್ಥೆ ಕಲ್ಪಿಸಲಗಿತ್ತು. ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್ ಮಾಡಲಾಗಿತ್ತು.

**ದಾಸೋಹ ವ್ಯವಸ್ಥೆ**

ಎಳ್ಳಮಾವಾಸ್ಯೆ ಪ್ರಯುಕ್ತ ರಾಜ್ಯದ ನಾನಾ ಭಾಗಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರ ಅನುಕೂಲಕ್ಕಾಗಿ ಪ್ರಾಧಿಕಾರದ ವತಿಯಿಂದ ಬೆಳಗಿನ ಉಪಹಾರ, ಮಧ್ಯಾಹ್ನ, ರಾತ್ರಿ ದಾಸೋಹ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ದೇವಸ್ಥಾನವನ್ನು ತಳಿರು ತೋರಣಗಳಿಂದ ಸಿಂಗಾರಗೊಳಿಸಲಾಗಿತ್ತು.

# ಪೊಲೀಸ್ ಇಲಾಖೆಯಲ್ಲಿ ತಾಂತ್ರಿಕ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಬೆಂಗಳೂರು ನಗರ ಪೊಲೀಸ್ ಆಯುಕ್ತರ ಘಟಕದಲ್ಲಿನ ಸೈಬರ್ ಸೆಕ್ಯುರಿಟಿ ಅನಾಲಿಸ್ಟ್ ? 08 ಹುದ್ದೆಗಳು ಹಾಗೂ ಡಿಜಿಟಲ್ ಫಾರೆನ್ಸಿಕ್ ಅನಾಲಿಸ್ಟ್ 08 ಹುದ್ದೆಗಳು ಹೀಗೆ 16 ತಾಂತ್ರಿಕ ಹುದ್ದೆಗಳನ್ನು ಒಪ್ಪಂದದ ಆಧಾರದ ಮೇಲೆ (Contract Basis) ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಜನವರಿ 10 ರಿಂದ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜನವರಿ 24 ಸಂಜೆ 6 ಗಂಟೆ. ಈ ಹುದ್ದೆಗಳ ನೇಮಕಾತಿಯ ಅಧಿಸೂಚನೆಯನ್ನು ಪೊಲೀಸ್ ಇಲಾಖೆಯ ಅಂತರ್ಜಾಲ https://ksp.karnataka.gov.in ಮತ್ತು ಪೊಲೀಸ್ ಆಯುಕ್ತರ ಅಂತರ್ಜಾಲ www.bcp.gov.in ರಲ್ಲಿ ಪ್ರಕಟಿಸಲಾಗಿರುತ್ತದೆ. ಈ ವೆಬ್‌ಸೈಟ್‌ಗಳ ಮುಖಾಂತರ ವಿವರಗಳನ್ನು ಪಡೆದು ಅರ್ಜಿಗಳನ್ನು ಕಛೇರಿಯ ವಿಳಾಸ ನಂ.01, ಇನ್‌ಫೆಂಟ್ರಿ ರಸ್ತೆ, ಪೊಲೀಸ್ ಆಯುಕ್ತರ ಕಚೇರಿ, ಬೆಂಗಳೂರು- 560001 ಅಥವಾ ಇಲಾಖೆಯ ಇ-ಮೇಲ್‌ಗೆ dcpadminbcp@ksp.gov.in ಸಲ್ಲಿಸುವುದು ಎಂದು ಬೆಂಗಳೂರು ನಗರ ಅಪರಾಧ ವಿಭಾಗದ ಅಪರ ಪೊಲೀಸ್ ಆಯುಕ್ತರಾದ ಡಾ. ಚಂದ್ರಗುಪ್ತ ಐಪಿಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಸಾಧಕರಿಗೆ ಬಸವ ಸೇವಾ ಪ್ರಶಸ್ತಿ ಪ್ರದಾನ

**ಮೈಸೂರು:** ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದ ವತಿಯಿಂದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿ, ಸಾಧಕರಿಗೆ ವಿವಿಧ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ವೇಳೆ ಸಾರ್ಥಕ ಶರಣ ದಂಪತಿ ಪ್ರಶಸ್ತಿಯನ್ನು ಡಾ.ಕೆ.ಲೀಲಾ ಪ್ರಕಾಶ್, ಕೇಶವ ಪ್ರಸಾದ್ ದಂಪತಿ ಸ್ವೀಕರಿಸಿದರು. ಸಮಾಜ ಸೇವೆಗಾಗಿ ಎಂ.ಪ್ರದೀಪ್‌ಕುಮಾರ್, ಎಂ.ಪೂರ್ಣಿಮಾ, ಪ್ರಜ್ವಲ್ ರಾಮಣ್ಣ, ಉದ್ಯಮ ಕ್ಷೇತ್ರಕ್ಕಾಗಿ ಎಸ್.ಎಂ.ಶಿವಪ್ರಕಾಶ್, ಸಾರ್ವಜನಿಕ ಸೇವೆಗಾಗಿ ಜಿ. ಗೋಪಾಲ್ ಹಾಗೂ ಉದ್ಯಮ ಮತ್ತು ಸಮಾಜ ಸೇವೆಗಾಗಿ ಷಡಕ್ಷರಿ ಅವರಿಗೆ ಬಸವ ಸೇವಾ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಈ ವೇಳೆ ಸಾಹಿತಿ ಬನ್ನೂರು ಕೆ.ರಾಜು ಮಾತನಾಡಿ, ಬಸವಾದಿ ಶರಣರು ಕನ್ನಡವನ್ನು ದೇವ ಭಾಷೆಯನ್ನಾಗಿಸಿದರು. ಅವರ ವಚನಗಳು ಎಲ್ಲರಿಗೂ ಅರ್ಥವಾಗುವಂತಿವೆ. ಹೀಗಾಗಿ ಅವರ ಹೆಸರಿನಲ್ಲಿ ಪ್ರಶಸ್ತಿ ಪ್ರದಾನ ಮಾಡುವುದು ಶ್ಲಾಘನೀಯವೆಂದರು.

ವಿಷ್ಣು ಸಾಲಿಗ್ರಾಮ ಗುರೂಜಿ, ಸಂಸ್ಥಾಪಕ ಅಧ್ಯಕ್ಷ ಬಸವರಾಜೇಂದ್ರ, ಸ್ವಾಮಿ, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್, ನಟ ಸುಪ್ರೀತ್, ಸಮಾಜ ಸೇವಕ ರಘುರಾಂ ವಾಜಪೇಯಿ, ಮುಖಂಡರಾದ ನಜರ್‌ಬಾದ್ ನಟರಾಜು, ಟಿ.ಸುರೇಶ್, ಎಂ.ಸುನೀಲ್ ಹಾಜರಿದ್ದರು.



# ಕರ್ನಾಟಕ ಸೇನಾಪಡೆ ಕಾರ್ಯಕರ್ತರ ಪ್ರತಿಭಟನೆ



**ಚಾಮರಾಜನಗರ:** ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ವತಿಯಿಂದ ಚಾಮರಾಜ ನಗರದಲ್ಲಿ ಕಳೆದ 128 ದಿನಗಳಿಂದ ನಿರಂತರವಾಗಿ ಪ್ರತಿಭಟನೆ ನಡೆಸುತ್ತಿದ್ದು ಇಂದು ಕೂಡ ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರತಿಭಟನೆ ನಡೆಸಲಾಯಿತು.

ಚಾಮರಾಜನಗರದ ಶ್ರೀಚಾಮರಾಜೇಶ್ವರ ಉದ್ಯಾನವನದ ಮುಂಭಾಗದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ .ಚಾ.ರಂ.ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ, ರಾಷ್ಟ್ರೀಯ ಹೆದ್ದಾರಿಯಲ್ಲಿ ಸರ್ಕಾರಗಳು, ಕಾವೇರಿ ನೀರು ನಿರ್ವಹಣಾ ಮಂಡಳಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಶ್ರೀನಿವಾಸಗೌಡ ಮಾತನಾಡಿ, ಕರ್ನಾಟಕದ ಗಡಿಯಲ್ಲಿ ಮಹಾರಾಷ್ಟ್ರ ದ ಪುಂಡರು ನಮ್ಮ ರಾಜ್ಯದ ಸುಗ್ರಿವಾಜ್ಞೆ ಬಗ್ಗೆ ಹಗುರವಾಗಿ ಮಾತನಾಡಿದ್ದಾರೆ ಆದ್ದರಿಂದ ಅವರನ್ನು ಗಡಿಪಾರು ಮಾಡಬೇಕು ಎಂದು ಒತ್ತಾಯಿಸಿದರು. ತಮಿಳು ನಾಡಿನವರು ಪದೇಪದೇ ಕನ್ನಡಿಗರ ಮೇಲೆ ಖ್ಯಾತೆ ತೆಗೆದು ತನ್ನ ರಾಜಕೀಯ ತೀಟೆ ತೀರಿಸಿಕೊಳ್ಳುತ್ತಿದ್ದಾರೆ. ಇದನ್ನು ನಿಲ್ಲಿಸದಿದ್ದರೆ ಮುಂದಿನ ದಿನಗಳಲ್ಲಿ ತಮಿಳುನಾಡಿನ ಉತ್ಪನ್ನಗಳನ್ನು ಬಹಿಷ್ಕಾರ ಮಾಡುವುದಾಗಿ ಎಚ್ಚರಿಸಿದರು.

ತಮಿಳುನಾಡಿನಲ್ಲಿ ನೀರು ತುಂಬಿದ್ದರೂ ಕೂಡ ಕಾವೇರಿ ನೀರಿನ ವಿಚಾರದಲ್ಲಿ ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡಿಲ್ಲ. ಕರ್ನಾಟಕ ರಾಜ್ಯದ ಮೇಲೆ ಮಲತಾಯಿಧೋರಣೆ ಎಂದು ದೂರಿದರು.

ರೈತರ ಜೀವನಾಡಿಯಾದ ಕಾವೇರಿ ನೀರನ್ನು ಸಂರಕ್ಷಣೆ ಮಾಡಬೇಕು ಮಳೆ ಅಭಾವದಿಂದ ರಾಜ್ಯದಲ್ಲಿ ಜಲಾಶಯಗಳು ಬರಿದಾಗುತ್ತಿದ್ದು, ಎಲ್ಲತರದ ಬೆಳೆಗಳು ಸಂಪೂರ್ಣ ಒಣಗುತ್ತಿವೆ. ರಾಜ್ಯದಲ್ಲಿ ನೀರಿನ ಅಭಾವ ಇದ್ದು, ಮುಂದಿನ ದಿನಗಳಲ್ಲಿ ತೀವ್ರ ಬರಗಾಲ ಬರಲಿದೆ.ಹೀಗಾಗಿ ಕರ್ನಾಟಕ ಸರ್ಕಾರ ಎಚ್ಚೆತ್ತುಗೊಂಡು ತಮಿಳುನಾಡಿಗೆ ಬಿಟ್ಟಿರುವ ನೀರನ್ನು ನಿಲ್ಲಿಸಬೇಕು. ಕೇಂದ್ರ ಮಧ್ಯಪ್ರವೇಶಿಸಿ ಕರ್ನಾಟಕಕ್ಕೆ ನ್ಯಾಯ ಒದಗಿಸಿ ರಾಜ್ಯದ ಜನತೆಗೆ ನೀರು ಉಳಿಸಬೇಕು .ಇಲ್ಲದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು ಎಂದರು. ಪ್ರತಿಭಟನೆಯಲ್ಲಿ ಪಣ್ಯದಹುಂಡಿ ರಾಜು, ಚಾ.ವೆಂ.ರಾಜ್ ಗೋಪಾಲ್, ಮಹೇಶ್ ಗೌಡ, ಗು.ಪುರುಷೋತ್ತಮ್ ,ಚಾ.ಹ.ರಾಮು,ರವಿಚಂದ್ರ,ಪ್ರಸಾದ್ ಕಹಳೆ,ವೀರಭದ್ರ, ತಾಂಡವಮೂರ್ತಿ ಇತರರು ಹಾಜರಿದ್ದರು.


**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
ಕಾರ್ಯಪಾಲಕ ಅಭಿಯಂತರರ ಕಛೇರಿ,
ಜಯನಗರ ವಿಭಾಗ, ಬಿಬಿಎಂಪಿ, 39ನೇ ಅಡ್ಡರಸ್ತೆ, 18ನೇ ಮುಖ್ಯರಸ್ತೆ,
ಜಯನಗರ 4ನೇ 'ಟಿ' ಬ್ಲಾಕ್, ಬೆಂಗಳೂರು – 560041.

ಸಂಖ್ಯೆ: ಕಾ.ಅ.(ಜೆಎನ್)/ಡಿಎಂ/ಇ-ಪ್ರೊಕ್/11/2023-24 ದಿನಾಂಕ: 10-01-2024

**ಅಲ್ಪಾವಧಿ ಟೆಂಡರ್‌ಗಾಗಿ ಆಹ್ವಾನ**
(ಜಿಓಕೆ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಮಾತ್ರ)

ಕಾರ್ಯಪಾಲಕ ಅಭಿಯಂತರರು, ಜಯನಗರ ವಿಭಾಗ, ಬಿಬಿಎಂಪಿ, ಬೆಂಗಳೂರು ಇವರು ಈ ಕೆಳಕಂಡ ನಿರ್ಮಾಣ ಕಾಮಗಾರಿಗಳಿಗೆ ಬಿಬಿಎಂಪಿ ಮತ್ತು ಸಿಪಿಡಬ್ಲ್ಯೂಡಿ / ಕೆಪಿಡಬ್ಲ್ಯೂಡಿ ಅಥವಾ ಯಾವುದೇ ರಾಜ್ಯ ಸರ್ಕಾರದ ಸಂಸ್ಥೆಗಳಲ್ಲಿ ತತ್ಸಮಾನ ದರ್ಜೆಯಲ್ಲಿ ನೋಂದಾಯಿತ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ಗಳನ್ನು ಆಹ್ವಾನಿಸಿದ್ದಾರೆ.

| ಕ್ರ. ಸಂ. | ಕಾಮಗಾರಿಯ ಹೆಸರು / ಪ್ರವರ್ಗ | ಕಾಮಗಾರಿ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇ.ಎಂ.ಡಿ ಮೊತ್ತ (ರೂ. ಗಳಲ್ಲಿ) |
|---|---|---|---|
| 1 | ದಕ್ಷಿಣ ವಲಯದ ಪದ್ಮನಾಭನಗರ, ವಿಜಯನಗರ, ಬಸವನಗುಡಿ, ಚಿಕ್ಕಪೇಟೆ, ಜಯನಗರ ಮತ್ತು ಬಿಟಿಎಂ ಲೇಔಟ್ ಇಲ್ಲಿಗೆ ಟ್ರ್ಯಾಕ್ಟರ್ ಮೌಂಟೆಡ್ ಶ್ರೆಡ್ಡರ್ ಮೆಷಿನ್ ಒದಗಿಸುವುದು, ಸರಬರಾಜು, ಕಾರ್ಯಾಚರಣೆ ಮತ್ತು ನಿರ್ವಹಣೆ ಮಾಡುವುದು. (ದ್ವಿ-ಲಕೋಟೆ) – (ಇತರೆ) | 33.66 | 67,320/- |

<u>ಟೆಂಡರ್ ವೇಳಾಪಟ್ಟಿ:</u> 1) ಟೆಂಡರ್ ಡಾಕ್ಯೂಮೆಂಟ್‌ಗಳನ್ನು ಜಿಓಕೆ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ವೆಬ್‌ಸೈಟ್: **https://kppp.karnataka.gov.in** ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದು. 2) ಟೆಂಡರ್‌ಗಳನ್ನು ಕೆಪಿಪಿ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಸಲ್ಲಿಸುವ ದಿನಾಂಕ: **29-01-2024 ರಂದು 16.00 ಗಂಟೆಗೆ ಅಥವಾ ಮುಂಚಿತವಾಗಿ. 3)** ಬಿಡ್‌ಗಳನ್ನು ದಿನಾಂಕ: **30-01-2024 ರಂದು 16.05 ಗಂಟೆಗೆ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ, ಜಯನಗರ ವಿಭಾಗದಲ್ಲಿ ವೆಬ್‌ಸೈಟ್: https://kppp.karnataka.gov.in** ನಲ್ಲಿ ತೆರೆಯಲಾಗುವುದು. ಹೆಚ್ಚಿನ ವಿವರಗಳನ್ನು ಮೇಲ್ಕಂಡ ಕಛೇರಿಯಿಂದ ಪಡೆಯಬಹುದು.

ಸಹಿ/-
ಕಾರ್ಯಪಾಲಕ ಅಭಿಯಂತರರು, ಜಯನಗರ ವಿಭಾಗ, ಬಿಬಿಎಂಪಿ.

# 13ನೇ ಭಾರತೀಯ ಛಾತ್ರ ಸಂಸದ್ ಸಮ್ಮೇಳನ; ಬಸವರಾಜ ಹೊರಟ್ಟಿ

**ಬೆಂಗಳೂರು:** ದೇಶದ ಒಟ್ಟು ಜನ ಸಂಖ್ಯೆಯ ಶೇಕಡಾ 40 ಕ್ಕೂ ಹೆಚ್ಚು ಇರುವ ಯುವ ಜನತೆ ಮೇಲೆ ಭಾರತದ ಉಜ್ವಲ ಭವಿಷ್ಯ ಅವಲಂಬಿತವಾಗಿದ್ದು, ಅವರ ಕತೃತ್ವ ಶಕ್ತಿ ಹಾಗೂ ದೃಢ ಸಂಕಲ್ಪದಿಂದಲೇ ಭಾರತ ಜಗತ್ತಿನ ಮುಂಚೂಣಿ ರಾಷ್ಟ್ರವಾಗಿ ಹೊರಹೊಮ್ಮಲು ಸಾಧ್ಯ, ಈ ನಿಟ್ಟಿನಲ್ಲಿ ದೇಶದ ಯುವ ಜನತೆ ಕಾರ್ಯ ಪ್ರವೃತ್ತರಾಗುವಂತೆ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಕರೆ ನೀಡಿದ್ದಾರೆ.

ಮಹಾರಾಷ್ಟ್ರದ ಪುಣೆಯ ಎಂ.ಐ.ಟಿ ವರ್ಲ್ಡ್ ಪೀಸ್ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯುತ್ತಿರುವ 13ನೇ ಭಾರತೀಯ ವಿದ್ಯಾರ್ಥಿ ಸಂಸದ್‌ನ ಮೂರು ದಿನಗಳ ಸಮಾವೇಶದಲ್ಲಿಂದು ''ಪರಿವರ್ತನೆಯ ಪಥದಲ್ಲಿ ಯುವಜನತೆ ಕುರಿತ ವಿಚಾರ ಸಂಕಿರಣದಲ್ಲಿ ತಮ್ಮ ನಿರಂತರ ನಾಲ್ಕು ದಶಕಗಳ ಸಾಮಾಜಿಕ ಜೀವನದ ಅನುಭವಗಳನ್ನು ಹಂಚಿಕೊಂಡ ಅವರು ಭವಿಷ್ಯದ ಭಾರತದ ರೂವಾರಿಗಳಾಗಿರುವ ಯುವ ಜನತೆ ಇಂದು ಸಂಕ್ರಮಣ ಕಾಲದಲ್ಲಿದ್ದು ಉದಾತ್ತ ಗುರಿ, ಆದರ್ಶ ಹಾಗೂ ಸ್ಪಷ್ಟ ವಿವೇಚನೆಯೊಂದಿಗೆ ಮುನ್ನುಗ್ಗಬೇಕು, ಪರಿವರ್ತನೆಯ ಈ ಕಾಲದಲ್ಲಿ ಯುವ ಜನತೆ ಬರುವ ಎಲ್ಲಾ ಸವಾಲುಗಳನ್ನು ಸ್ವೀಕರಿಸಿ ಅವುಗಳನ್ನು ಅವಕಾಶಗಳನ್ನಾಗಿಸುವ



ಕೌಶಲ್ಯ ಹೊಂದಬೇಕು. ಆಧುನಿಕ ಜಗತ್ತಿನ ಸಂಕೀರ್ಣತೆಗಳನ್ನು ಮೆಟ್ಟಿನಿಲ್ಲುವ ಎದೆಗಾರಿಕೆ ಬೆಳೆಸಿಕೊಂಡು ಪರಿವರ್ತನೆಯ ಹರಿಕಾರರಾಗಿ ತಮ್ಮ ಭವಿಷ್ಯದ ಉಜ್ವಲತೆಯ ಜೊತೆಗೆ ಸಶಕ್ತ, ಸದೃಢ ದೇಶ ನಿರ್ಮಿಸುವಲ್ಲಿ ಕ್ರಿಯಾಶೀಲರಾಗಬೇಕು ಎಂದು ಮನವಿ ಮಾಡಿದರು.

ಪ್ರತಿಯೊಬ್ಬ ವ್ಯಕ್ತಿಯ ವ್ಯಕ್ತಿತ್ವ ನಿರ್ಮಿಸುವಲ್ಲಿ ಶಿಕ್ಷಣದ ಪಾತ್ರ ಮಹತ್ವದಾಗಿದ್ದು, ನಮ್ಮ ಎಲ್ಲ ಶಿಕ್ಷಣ ಸಂಸ್ಥೆಗಳು ಉನ್ನತ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ವಿದ್ಯಾರ್ಥಿಗಳಿಗೆ ಮಾನವೀಯ ಮೌಲ್ಯ, ಸಹನೆ, ಸಂಸ್ಕಾರ ಹಾಗೂ ಕೌಶಲ್ಯ ನೀಡುವಂತಹ ಚಟುವಟಿಕೆಗಳನ್ನು ನಿರಂತರವಾಗಿ ನಡೆಸಬೇಕು. ತನ್ಮೂಲಕ ವಿದ್ಯಾರ್ಥಿಗಳನ್ನು ಪರಿಪೂರ್ಣ ವ್ಯಕ್ತಿಗಳನ್ನಾಗಿ ರೂಪಿಸುವುದು ಅತ್ಯವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಎಲ್ಲಾ ಶಿಕ್ಷಣ ಸಂಸ್ಥೆಗಳು ಹಾಗೂ ಶಿಕ್ಷಣ ತಜ್ಞರು ಕ್ರಿಯಾಶೀಲರಾಗುವಂತೆ ತಿಳಿಸಿದರು. ಕಳೆದ 43 ವರ್ಷಗಳಿಂದ ಶಾಸಕರಾಗಿ, ಶಿಕ್ಷಣ, ಕಾನೂನು ಹಾಗೂ ಗ್ರಾಮೀಣಾಭಿವೃದ್ಧಿ ಸೇರಿದಂತೆ ಹಲವು ಖಾತೆಗಳ ಸಚಿವರಾಗಿ ಹಾಗೂ ಮೂರು ಬಾರಿ ವಿಧಾನ ಪರಿಷತ್ತಿನ ಸಭಾಪತಿಯಾಗಿ ಕೈಗೊಂಡ ಹತ್ತು ಹಲವು ವಿಧಾಯಕ ಕಾರ್ಯಕ್ರಮಗಳನ್ನು ಉಲ್ಲೇಖಿಸಿದ ಬಸವರಾಜ ಹೊರಟ್ಟಿ ಶಿಕ್ಷಣ ಸಚಿವರಾಗಿದ್ದಾಗ 43 ಸಾವಿರಕ್ಕೂ ಹೆಚ್ಚು ಶಿಕ್ಷಕರ ನೇಮಕಾತಿ, ಶಿಕ್ಷಕರ ವರ್ಗಾವಣೆ ನೂತನ ನಿಯಮ ಜಾರಿ ಸೇರಿದಂತೆ ಆ ಸಂದರ್ಭದಲ್ಲಿ ಕೈಗೊಂಡ ಹಲವು ಮಹತ್ವದ ನಿರ್ಣಯಗಳು ಶಿಕ್ಷಣ ಇಲಾಖೆಯಲ್ಲಿ ಬಹು ದೊಡ್ಡ ಕ್ರಾಂತಿಯನ್ನೇ ಸೃಷ್ಟಿಸಿದ್ದು, ಹೆಮ್ಮೆಯ ವಿಷಯ ಎಂದರು.

ದೇಶದ ರಾಜಕೀಯ ಪಂಡಿತರು, ಹಿರಿಯ ರಾಜಕಾರಣಿಗಳು ಹಾಗೂ ರಾಜತಾಂತ್ರಿಕ ನಿಪುಣರು ಇಂದಿನ ಯುವ ಜನತೆಗೆ ಸೂಕ್ತ ಮಾರ್ಗದರ್ಶನ ಹಾಗೂ ತರಬೇತಿ ನೀಡುವ ಅಗತ್ಯತೆಯನ್ನು ಪ್ರತಿಪಾದಿಸಿದ ಬಸವರಾಜ ಹೊರಟ್ಟಿ ಹಿರಿಯರು ಹಾಗೂ ಯುವ ಜನತೆ ಮಧ್ಯೆ ಇರುವ ಸಮನ್ವಯತೆಯ ಕೊರತೆಯನ್ನು ನೀಗಿಸಿ ಅನುಭವದ ಅಮೃತವನ್ನು ಉಣಬಡಿಸುವ ವಿದ್ಯಾರ್ಥಿ ಸಂಸತ್ ನಂತಹ ಕಾರ್ಯಕ್ರಮಗಳು ಹಾಗೂ ವಿಚಾರ ಸಂಕಿರಣಗಳು ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ದೇಶಾದ್ಯಾಂತ ನಡೆಯಬೇಕು ಎಂದು ಆಶಯ ವ್ಯಕ್ತಪಡಿಸಿದರು. ಎಂ.ಐ.ಟಿ ವಿಶ್ವವಿದ್ಯಾಲಯದ ಮುಖ್ಯಸ್ಥರಾದ ವಿಶ್ವನಾಥ ಕರಾಡ್, ರಾಹುಲ್ ಕರಾಡ್, ವರ್ಮಾಂಟ್ ವಿಶ್ವವಿದ್ಯಾಲಯದ ಸಂಸ್ಥಾಪಕ ನಿರ್ದೇಶಕ ಡಾ. ಸುರೇಶ್ ಗಾರಿಮೆಲ್ಲಾ, ಆಧ್ಯಾತ್ಮಿಕ ಗುರು ಹಾಗೂ ಖ್ಯಾತ ಲೇಖಕ ಸ್ವಾಮಿ ಮುಕುಂದಾನಂದ, ಖ್ಯಾತ ಇತಿಹಾಸಕಾರ ಹಾಗೂ ಅಂಕಣಕಾರ ಡಾ.ವಿಕ್ರಮ್ ಸಂಪತ್ ಮುಂತಾದವರು ಉಪಸ್ಥಿತರಿದ್ದರು. ಇದೇ ವೇಳೆ ಯುವ ಶಾಸಕ ಪುರಸ್ಕಾರಕ್ಕೆ ಭಾಜನರಾದ ಯುವ ಶಾಸಕರಾದ ಬಿಹಾರನ ಚೇತನ್ ಆನಂದ್, ಅಸ್ಸಾಂನ ಡಾ. ಆಸಿಫ್ ಮೊಹಮದ್ ನಜರ್, ಪಶ್ಚಿಮ ಬಂಗಾಳದ ಅಶೋಕ್ ದಿಂಡಾ ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು.

## ಶಿಕ್ಷಣಕ್ಕೆ ಆದ್ಯತೆ ಕೊಡುವ ಎಲ್ಲ ದೇಶಗಳು ಅಭಿವೃದ್ಧಿಯತ್ತ ಸಾಗುತ್ತವೆ

**ವಿಜಯಪುರ:** ಶಿಕ್ಷಣಕ್ಕೆ ಆದ್ಯತೆ ಕೊಡುವ ಎಲ್ಲಾ ದೇಶಗಳು ಅಭಿವೃದ್ಧಿಯತ್ತ ಸಾಗುತ್ತವೆ. ಈ ನಿಟ್ಟಿನಲ್ಲಿ ಇಂಡಿಯನ್ ಆಯಿಲ್ ಸ್ಕೈಟ್ಯಾಂಕಿಂಗ್ ಕಂಪನಿಯು ಸರ್ಕಾರಿ ಶಾಲೆಗಳ ಉನ್ನತೀಕರಣಕ್ಕೆ ಹೆಚ್ಚು ಆಧ್ಯತೆ ನೀಡುತ್ತಿದೆ ಎಂದು ಅಮೆರಿಕಾ ದೇಶದ ಟೆಕ್ಸಾಸ್ ನಿಂದ ಬಂದಿದ್ದ ಉದ್ಯಮಿ ಕ್ಲಿಂಟನ್ ರೋಡರ್ ಹೇಳಿದರು.

ಪಟ್ಟಣದಲ್ಲಿ ನೂತನವಾಗಿ ನಿರ್ಮಿಸಿದ್ದ ಜಿ.ಕೆ.ಬಿ.ಎಂ.ಎಸ್. ಸರ್ಕಾರಿ ಶಾಲಾ ಕಟ್ಟಡವನ್ನು ಗುರುವಾರ ವೀಕ್ಷಣೆ ಮಾಡಿದ ನಂತರ ಅವರು ಮಾತನಾಡಿದರು.

ನಮ್ಮ ಕಂಪನಿಯ ವತಿಯಿಂದ ಹಲವಾರು ಶಾಲೆಗಳಿಗೆ ನೂತನ ಕಟ್ಟಡಗಳನ್ನು ಕಟ್ಟಿದ್ದೇವೆ. ಹಲವು ಕಡೆಗೆ ನಿರ್ಮಾಣದ ಹಂತದಲ್ಲಿವೆ. ಶಿಕ್ಷಣ ಕ್ಷೇತ್ರಕ್ಕೆ ನೀಡಿರುವ ಅನುದಾನಗಳ ಕುರಿತು ಸಂತೃಪ್ತಿಯಿದೆ. ಮಕ್ಕಳು ಉತ್ತಮವಾಗಿ ಸದುಪಯೋಗ ಮಾಡಿಕೊಳ್ಳುತ್ತಿದ್ದಾರೆ. ಸರ್ಕಾರವೂ ಉತ್ತಮ ಸೌಲಭ್ಯಗಳನ್ನು ಕೊಟ್ಟು ಮಕ್ಕಳನ್ನು ಶೈಕ್ಷಣಿಕವಾಗಿ ಪ್ರೋತ್ಸಾಹಪಡಿಸುತ್ತಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಮತ್ತಷ್ಟು ಕೊಡುಗೆ ನೀಡಲು ನಾವು ಉತ್ಸುಕರಾಗಿದ್ದೇವೆ ಎಂದರು.

ಉಧ್ಯಮಿ ಮೈಲಿಸ್ ರೋಡರ್ ಮಾತನಾಡಿ, ಹೊಸ ಕಟ್ಟಡಗಳಲ್ಲಿ ಕಲಿಯುತ್ತಿರುವ ಮಕ್ಕಳನ್ನು ನೋಡಿ ತುಂಬಾ ಸಂತಸವಾಗಿದೆ. ಇದನ್ನು ನೋಡಿದಾಗ ನಾವು ಮತ್ತಷ್ಟು ಮಾಡಬೇಕು ಎನ್ನುವ ಪ್ರೇರೇಪಣೆಯಾಗುತ್ತಿದೆ. ಭಾರತ ದೇಶದಲ್ಲಿನ ಶಿಕ್ಷಣ ವ್ಯವಸ್ಥೆಯೂ ಉತ್ತಮವಾಗಿದೆ. ಸರ್ಕಾರದೊಂದಿಗೆ ಕೈ ಜೋಡಿಸಿ, ಕೆಲಸ ಮಾಡಲು ನಾವು ಕಾಳಜಿ ಉಳ್ಳವರಾಗಿದ್ದೇವೆ. ಆರೋಗ್ಯ ಕ್ಷೇತ್ರದ ಕಡೆಗೂ ನಾವು ಗಮನಹರಿಸಿದ್ದೇವೆ ಎಂದರು. ಇಂಡಿಯನ್ ಆಯಿಲ್ ಸ್ಕೈಟ್ಯಾಂಕಿಂಗ್ ಕಂಪನಿಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಟಿ.ಎಸ್ .ದುಪಾರೆ, ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಚ್.ವಿ.ಕೃಷ್ಣಮೂರ್ತಿ, ಕ್ಷೇತ್ರ ಶಿಕ್ಷಣಾಧಿಕಾರಿ ಸುಮಾಚಂದ್ರಶೇಖರ್, ಶಿಕ್ಷಣ ಸಂಯೋಜಕ ಮಂಜುನಾಥ್, ಶಿವಕುಮಾರ್, ಕ್ಷೇತ್ರ ಸಂಪನ್ಮೂಲ ವ್ಯಕ್ತಿ ದಿನೇಶ್ ಕುಮಾರ್, ಮುಖ್ಯಶಿಕ್ಷಕ ಸುಭಾಷ್ ಬಿ ದಾಸರ್, ಶಾಲಾಭಿವೃದ್ಧಿ ಸಮಿತಿ ಸದಸ್ಯರು ಶಿಕ್ಷಕರು ಹಾಜರಿದ್ದರು.



ವಿಜಯಪುರ ಪಟ್ಟಣದ ಜಿ.ಕೆ.ಬಿ.ಎಂ.ಎಸ್. ಶಾಲೆಗೆ ಭೇಟಿ ನೀಡಿದ್ದ ಇಂಡಿಯನ್ ಆಯಿಲ್ ಸ್ಕೈಟ್ಯಾಂಕಿಂಗ್ ಕಂಪನಿಯ ಮುಖ್ಯಸ್ಥರನ್ನು ಶಾಲಾಭಿವೃದ್ಧಿ ಸಮಿತಿಯ ವತಿಯಿಂದ ಅಭಿನಂದಿಸಿದರು.

# ಸ್ಮಶಾನ, ಪಾರ್ಕ್, ಶೌಚಗೃಹ ನಿರ್ಮಿಸಿ

## ಪಟ್ಟಣ ಪಂಚಾಯ್ತಿಗೆ ಸಂಘಸಂಸ್ಥೆ ಮುಖಂಡರುಗಳ ಜನಪರ ಸಲಹೆ

**ಹುಳಿಯಾರು:** ಸಾರ್ವಜನಿಕರು ಬರದೆ ಎರಡು ಬಾರಿ ಮುಂದೂಡಲ್ಪಟ್ಟಿದ್ದ ಹುಳಿಯಾರು ಪಟ್ಟಣ ಪಂಚಾಯ್ತಿ ಬಜೆಟ್ ಪೂರ್ವಭಾವಿ ಸಭೆಯು ಗುರುವಾರ ನಡೆಯಿತು. ಆದರೆ ಸಭೆಗೆ ಸಾರ್ವಜನಿಕರಿಂದ ಅಭೂತಪೂರ್ವ ಬೆಂಬಲ ವ್ಯಕ್ತವಾಗದಿದ್ದರೂ ಬಂದಿದ್ದ ಕೆಲವೇ ಕೆಲವು ಮಂದಿ ಇಟ್ಟುಕೊಂಡು ಸಭೆಯ ಶಾಸ್ತ್ರ ಮುಗಿಸಿಕೊಂಡು ಅಧಿಕಾರಿಗಳು ನೆಮ್ಮದಿಯ ನಿಟ್ಟುಸಿರು ಬಿಟ್ಟರು.

ಕರವೇ, ದಲಿತ ಸಹಾಯವಾಣಿ, ಕನ್ನಡಸೇನೆ, ಡಿಎಸ್‌ಎಸ್‌ಗಳ ಮುಖಂಡರು ಮಾತ್ರ ಸಭೆಗೆ ಬಂದಿದ್ದರಾದರೂ ಸಭೆಗೆ ಅತ್ಯಮೂಲ್ಯವಾದ ಸಲಹೆಯನ್ನು ನೀಡಿ ಗಮನ ಸೆಳೆದರು. ಕಾಟಾಚಾರಕ್ಕೆ ಸಭೆ ಮಾಡುವುದನ್ನು ಬಿಟ್ಟು ಊರಿನ ಅಭಿವೃದ್ಧಿಯ ದೃಷ್ಟಿಯಿಂದ ಎಲ್ಲಾ ಪ್ರಮುಖರನ್ನೂ ಕರೆದುಯ ಸಭೆ ಮಾಡಿ. ಸಭೆಯಲ್ಲಿ ನೀಡಿದ ಸಲಹೆಯನ್ನು ಈ ಕಿವಿಯಲ್ಲಿ ಕೇಳಿ ಆ ಕಿವಿಯಲ್ಲಿ ಬಿಡದೆ ಕಾರ್ಯರೂಪಕ್ಕೆ ತನ್ನಿ ಎನ್ನುವ ಕಿವಿ ಮಾತನ್ನೂ ಸಹ ಹೇಳಿದರು.

ಹುಳಿಯಾರು ಪಟ್ಟಣ ಪಂಚಾಯ್ತಿ ವ್ಯಾಪ್ತಿಯಲ್ಲಿ ಇಪ್ಪತ್ತೈದು ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಇದ್ದರೂ ಸಹ ಇಲ್ಲಿನ ನಿವಾಸಿಗಳು ಸತ್ತಾಗ ಹೂಳಲು 6 ಅಡಿ 3 ಅಡಿ ಜಾಗವಿಲ್ಲ. ಹಿಂದು ರುದ್ರ ಭೂಮಿಗೆ ಜಾಗ ಮೀಸಲಿಡಿ ಎಂದು ಅನೇಕ ಬಾರಿ ಮನವಿ ಸಲ್ಲಿಸಿದ್ದರೂ ಸಹ ಸ್ಪಂಧಿಸಿಲ್ಲ. ಸತ್ತ ಮೇಲಾದರೂ ಸಹ ನೆಮ್ಮದಿಯಿಂದ ಅಂತ್ಯ ಸಂಸ್ಕಾರ ಮಾಡಲು ಜಾಗ ಮೀಸಲಿಡಿ ಎಂದು ಒತ್ತಾಯಿಸಿದರು. ಮುಖ್ಯಾಧಿಕಾರಿ ನಾಗಭೂಷಣ್ ಅವರು ತಹಸೀಲ್ದಾರ್ ಅವರಿಗೆ ಜಾಗ ಗುರುತಿಸಿಕೊಡಲು ಮನವಿ ಸಲ್ಲಿಸಲಾಗಿದ್ದು ಅವರಿಂದ ಪ್ರತಿಕ್ರಿಯ ಬಂದಿಲ್ಲ. ಮತ್ತೊಮ್ಮೆ ಹೊಸ ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸುವುದಾಗಿ ತಿಳಿಸಿದರು.

ಹುಳಿಯಾರು ಬಸ್ ನಿಲ್ದಾಣಕ್ಕೆ ಶಾಲಾಮಕ್ಕಳು, ವೃದ್ಧರು, ವಿಕಲಚೇತನರು ಸೇರಿದಂತೆ ನಿತ್ಯ ಸಹಸ್ರಾರು ಮಂದಿ ಬಂದೋಗುತ್ತಾರೆ. ಆದರೆ ಇಲ್ಲಿ ಕುಡಿಯಲು ನೀಡಿಲ್ಲ, ಉತ್ತಮ ಶೌಚಾಲಯವಿಲ್ಲ, ಕನಿಷ್ಠ ಪಕ್ಷ ಬಸ್‌ಗಳೂ ಸಹ ಸರಿಯಾಗಿ ನಿಲ್ಲಲ್ಲು ಜಾಗವಿಲ್ಲದೆ ಫುಟ್‌ಪಾತ್ ವ್ಯಾಪಾರಿಗಳು ಆಕ್ರಮಿಸಿಕೊಂಡಿದ್ದಾರೆ ಎಂದರು. ಇದಕ್ಕೆ ಅಧ್ಯಕ್ಷ ಕೆಎಂಎಲ್ ಕಿರಣ್ ಅವರು ಬಸ್ ನಿಲ್ದಾಣ, ರಾಜಕುಮಾರ್ ರಸ್ತೆ, ರಾಮಗೋಪಾಲ್ ಸರ್ಕಲ್‌ಗಳಲ್ಲಿ ಹೈಟೆಕ್ ಶೌಚಾಲಯ ನಿರ್ಮಿಸಲು ಟೆಂಡರ್ ಕರೆಯಲಾಗಿದೆ.



### ಪಂಚಾಯ್ತಿಗೆ ಮುಕ್ತಿಧಾಮ ಹಸ್ತಾಂತರಿಸಿಕೊಳ್ಳಿ

ಸರ್ಕಾರಿ ಜಾಗದಲ್ಲಿರುವ ಮುಕ್ತಿಧಾಮವನ್ನು ಕೆಲವೇ ಕೆಲವು ಮಂದಿ ಕಮಿಟಿ ಮಾಡಿಕೊಂಡು ನಿರ್ವಹಣೆ ಮಾಡುತ್ತಿದ್ದಾರೆ. ಇವರು ಇತರೆ ಜಾತಿಜನರ ಅಂತ್ಯಕ್ರಿಯೆಗೆ ಬೀಗ ಕೊಡದೆ ಸತಾಯಿಸುತ್ತಿದ್ದಾರೆ. ಹುಳಿಯಾರು ಪಟ್ಟಣದಲ್ಲಿ ಸ್ಮಶಾನ ಇಲ್ಲದಿರುವುದರಿಂದ ಎಲ್ಲರೂ ಇಲ್ಲಿಯೇ ಅಂತ್ಯಕ್ರಿಯೆ ಮಾಡಬೇಕಿರುವುದರಿಂದ ಖಾಸಗಿ ಸಂಸ್ಥೆಯಿಂದ ಮುಕ್ತಿಧಾಮವನ್ನು ಪಂಚಾಯ್ತಿಗೆ ಹಸ್ತಾಂತರ ಮಾಡಿಕೊಳ್ಳಿ. ಪಂಚಾಯ್ತಿಯೆ ಎಲ್ಲರಿಗೂ ಅಂತ್ಯಕ್ರಿಯೆಗೆ ಅವಕಾಶ ಕೊಟ್ಟು ನಿರ್ವಹಣೆ ಮಾಡೋಣ ಎಂದು ಪಪಂ ಅಧ್ಯಕ್ಷ ಕೆಎಂಎಲ್ ಕಿರಣ್ ಮುಖ್ಯಾಧಿಕಾರಿಗಳಿಗೆ ತಿಳಿಸಿದ್ದಾರೆ.

### ಬೆಸ್ಕಾಂ ಕಾಂಪೌಂಡ್ ಮುಂದೆ ಫುಡ್ ಸ್ಟ್ರೀಟ್

ಹುಳಿಯಾರು ಬಸ್ ನಿಲ್ದಾಣದಲ್ಲಿ ತಳ್ಳುವ ಗಾಡಿಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡುತ್ತಿರುವುದರಿಂದ ಪ್ರಯಾಣಿಕರಿಗೆ ಹಾಗೂ ವಾಹನಗಳ ಸುಗಮ ಸಂಚಾರಕ್ಕೆ ತೊಡಕಾಗಿದೆ. ಹಾಗಾಗಿ ಬೆಸ್ಕಾಂ ಕಾಂಪೌಂಡ ಮುಂಭಾಗದಲ್ಲಿ ಫುಡ್‌ಸ್ಟ್ರೀಟ್ ಮಾಡುವ ಹಾಗೂ ಎಪಿಎಂಸಿ ಆವರಣದಲ್ಲಿ ಕೋಳಿ, ಮಾಂಸ ಹಾಗೂ ಮೀನು ಮಾರಾಟಕ್ಕೆ ಅವಕಾಶ ಮಾಡಿಕೊಡುವ, ತೆಂಗಿನ ನಾರಿನ ಕಾರ್ಖಾನೆ ಜಾಗದಲ್ಲಿ ಬಸ್ ನಿಲ್ದಾಣ ಮಾಡುವ ರಾಷ್ಟ್ರೀಯ ಹೆದ್ದಾರಿಯ ಐದಾರು ಕಡೆ ತಂಗುದಾಣ ನಿರ್ಮಿಸುವ, ಮನೆಮನೆಗೆ ನಲ್ಲಿ ಹಾಕಿ ಶುದ್ಧ ಹಾಗೂ ಸಮರ್ಪಕ ನೀರು ಪೂರೈಸುವ ಚಿಂತನೆ ಇದೆ ಎಂದು ಅಧ್ಯಕ್ಷ ಕೆಎಂಎಲ್ ಕಿರಣ್ ತಿಳಿಸಿದರು.

1 ರೂ. ಕಾಯಿನ್ ಹಾಕಿ 1 ಲೀಟರ್ ಶುದ್ಧ ನೀರು ಪಡೆಯುವ ಘಟಕವನ್ನು ಹಾಕುತ್ತೇವೆ ಎಂದರಲ್ಲದೆ ಬಸ್ ನಿಲ್ದಾಣದ ಫುಟ್‌ಪಾತ್ ವ್ಯಾಪಾರಿಗಳನ್ನು ಖಾಲಿ ಮಾಡಿಸಿ ಬಸ್ ನಿಲ್ಲಲ್ಲು ಸ್ಥಳವಕಾಶ ಕಲ್ಪಿಸುವಂತೆ ಮುಖ್ಯಾಧಿಕಾರಿಗಳಿಗೆ ತಿಳಿಸಿದರು.

ಉಳಿದಂತೆ ಬೀದಿನಾಯಿಗಳ ಕಾಟ ತಪ್ಪಿಸುವಂತೆಯೂ, ಪ್ರಮುಖ ಸ್ಥಳಗಳಲ್ಲಿ ಮೂತ್ರ ವಿಸರ್ಜನಾ ಬೂತ್ ನಿರ್ಮಿಸುವಂತೆಯೂ, 12 ನೇ ವಾರ್ಡ್‌ನ ಶುದ್ಧ ಕುಡಿಯುವ ನೀರಿನ ಘಟಕವನ್ನು ಖಾಸಗಿ ಸಂಸ್ಥೆಯಿಂದ ಪಂಚಾಯ್ತಿಹಸ್ತಾಂತರ ಮಾಡಿಕೊಳ್ಳುವಂತೆಯೂ, ಮಕ್ಕಳಿಗೆ ಆಟವಾಡಲು, ವೃದ್ಧರು ವಾಯುವಿಹಾರ ಮಾಡಲು ಪಾರ್ಕ್ ನಿರ್ಮಿಸುವಂತೆಯೂ, ಕರವೇ ಸರ್ಕಲ್‌ನಲ್ಲಿ ವ್ಯಾಪಾರಿಗಳ ಕಿರಿಕಿರಿ ತಪ್ಪಿಸುವಂತೆಯೂ, ರಾಮಗೋಪಾಲ್ ಸರ್ಕಲ್‌ನಲ್ಲಿ ಚರಂಡಿ ಕಾಮಗಾರಿ ಪೂರ್ಣಗೊಳಿಸುವಂತೆಯೂ, ತೂಬು ಕಾಲುವೆ ಅಗಲೀಕರಣ ಮಾಡುವಂತೆಯೂ, ಖಾಲಿ ನಿವೇಶನದಲ್ಲಿ ಬೆಳೆದಿರುವ ಗಿಡಗಂಟೆಗಳನ್ನು ತೆರವು ಮಾಡಲು ಮಾಲೀಕರಿಗೆ ನೋಟಿಸ್ ನೀಡುವಂತೆಯೂ, ವಿದ್ಯುತ್ ಚಿತಾಗಾರ ಹಾಗೂ ಮುಕ್ತಿವಾಹನ ಖರೀಧಿಸುವಂತೆಯೂ ಸಾರ್ವಜನಿಕರು ಕೇಳಿಕೊಂಡರು.

## ಶಾಸ್ತ್ರೀ ಜೀವನ ಆದರ್ಶಗಳು ನಮಗೆ ಸ್ಫೂರ್ತಿ : ರಾಮಾಂಜನೇಯ

**ಕೋಲಾರ :** ಲಾಲ್ ಬಹದ್ದೂರ್ ಶಾಸ್ತ್ರಿ ರವರ ಜೀವನ ಆದರ್ಶಗಳು ಇಂದಿನ ಸಮಾಜಕ್ಕೆ ಸ್ಫೂರ್ತಿಯಾಗಿದ್ದು, ಇವರ ಆದರ್ಶಗಳನ್ನು ಪಾಲಿಸುವ ಮೂಲಕ ಆದರ್ಶ ಸಮಾಜ ನಿರ್ಮಿಸಲು ನೆರವಾಗಬೇಕು ಎಂದು ಕರ್ನಾಟಕ ರಾಜ್ಯ ಎಸ್‌ಸಿ ಎಸ್‌ಟಿ ಸರ್ಕಾರಿ ನೌಕರರ ಸಮನ್ವಯ ಸಮಿತಿ ಅಧ್ಯಕ್ಷರಾದ ರಾಮಾಂಜನೇಯ ತಿಳಿಸಿದರು. ನಗರದಲ್ಲಿ ಸಂಘದ ವತಿಯಿಂದ ಏರ್ಪಡಿಸಿದ್ದ ಅವರ ಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಈ ಸಂದರ್ಭದಲ್ಲಿ ಸಮಿತಿಯ ಗೌರವಾಧ್ಯಕ್ಷ ಜಿ. ಶ್ರೀನಿವಾಸ್. ಕಾರ್ಯದರ್ಶಿ ಡಿ.ಎನ್.ಮುಕುಂದ, ಮುಖಂಡರುಗಳಾದ ರಾಮಕೃಷ್ಣಪ್ಪ, ಹಳ್ಳಿ ನಾರಾಯಣಸ್ವಾಮಿ, ಪದ್ಮಾವತಿ ಸುನಿತಾ ಕೃಷ್ಣಮೂರ್ತಿ ಇತರರು ಉಪಸ್ಥಿತರಿದ್ದರು.



# ಶಬರಿಮಲೆ ಯಾತ್ರೆ, ಹೊರಟ ಮಾಲಾಧಾರಿಗಳು

**ಹುಳಿಯಾರು:** ಹುಳಿಯಾರಿನ ಶ್ರೀ ಅಯ್ಯಪ್ಪ ಸ್ವಾಮಿ ಸೇವಾ ಸಮಿತಿಯಿಂದ ಪ್ರಸಕ್ತ ವರ್ಷದ ಶಬರಿಮಲೈ ಯಾತ್ರೆ ಕೈಗೊಳ್ಳುವ ಅಂಗವಾಗಿ ಒಟ್ಟು ನಾನೂರಕ್ಕೂ ಹೆಚ್ಚು ಮಂದಿ 48 ದಿನಗಳು, 21 ದಿನಗಳು, 9 ದಿನಗಳ ವೃತದ ಮಾಲೆ ಧರಿಸಿದ್ದರು. ಇದರಲ್ಲಿ ಕಳೆದ ಕೆಲ ದಿನಗಳಿಂದ ನೂರಕ್ಕೂ ಹೆಚ್ಚು ಮಂದಿ ಮಂಡಲಪೂಜೆಗೆ ಹೋಗಿಬಂದಿದ್ದು ಬುಧವಾರ ಸಂಜೆ 300 ಮಂದಿ ಮಾಲಾಧಾರಿಗಳು ಜ್ಯೋತಿ ಪೂಜೆಗೆ ಶಬರಿಮಲೆಗೆ ತೆರಳಿದರು.

ಬುಧವಾರ ಬೆಳಗಿನ ಜಾವ 4 ಗಂಟೆಯಿಂದ ಶ್ರೀ ಸ್ವಾಮಿಯವರಿಗೆ ವಿಶೇಷ ಪೂಜೆ, ಅಭಿಷೇಕ ಸೇರಿದಂತೆ ವಿವಿಧ ಪೂಜಾ ಕೈಂಕರ್ಯಗಳನ್ನು ನಡೆಸಿ ಜ್ಯೋತಿ ಪೂಜೆಗೆ ತೆರಳಲಿರುವ ಮಾಲಾಧಾರಿಗಳಿಗೆ ಗುರುಸ್ವಾಮಿಗಳಿಂದ ಇರುಮುಡಿ ಕಟ್ಟುವ ಸೇವೆ ನಡೆಸಲಾಯಿತು. ಈ ಸಂದರ್ಭದಲ್ಲಿ ಕುಟುಂಬವರ್ಗದವರು, ಸ್ನೇಹಿತರು, ಸಾರ್ವಜನಿಕರ ಉಪಸ್ಥಿತರಿದ್ದು ಶಬಿರಿಮಲೆ ಯಾತ್ರೆಗೆ ಶುಭಹಾರೈಸಿದರು.

ನಂತರ ಮಂಗಳ ವಾದ್ಯಗಳೊಂದಿಗೆ ಇರುಮುಡಿ ಹೊತ್ತ ಮಾಲಾಧಾರಿಗಳು ಊರಿನ ಪ್ರಮುಖ ಬೀದಿಗಳಲ್ಲಿ ಪಾದಯಾತ್ರೆ ಬಂದು ಶ್ರೀ ರಂಗನಾಥಸ್ವಾಮಿ, ಶ್ರೀ ದುರ್ಗಮ್ಮ, ಶ್ರೀ



ಹುಳಿಯಾರಮ್ಮ ಹಾಗೂ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಶಬಿರಿಮಲೆಗೆ ಪ್ರಯಾಣ ಬೆಳಸಿದರು.

ಮಾಲಾಧಾರಿಗಳ ಪಾದಯಾತ್ರೆಯುದ್ದಕ್ಕೂ ಭಕ್ತಾಧಿಗಳು ತಮ್ಮ ತಮ್ಮ ಮನೆಯ ಮುಂದೆ ನೀರು ಹಾಕಿ, ಬಣ್ಣ ಬಣ್ಣದ ರಂಗೋಲಿ ಬಿಟ್ಟು ಹೂವುಗಳಿಂದ ಸಿಂಗರಿಸಿ, ಕರ್ಪೂರ ಹಚ್ಚಿ ಸ್ವಾಗತ ಕೋರಲಾಗಿತ್ತಲ್ಲದೆ ಮಾಲಾಧಾರಿಗಳಿಗೆ ಭಕ್ತಿಭಾವದಿಂದ ಪೂಜೆ ಸಲ್ಲಿಸಿ ಪಾದಗಳಿಗೆ ಎರಗಿ ನಮಸ್ಕರಿಸುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು.

## ರೈತ ಸಂಗಮ ಕಾರ್ಯಕ್ರಮ

**ಮಂಡ್ಯ:** ಕರ್ನಾಟಕ ರಾಜ್ಯ ಕೃಷಿ ಇಲಾಖೆ, ಜಲಾನಯನ ಅಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾಡಳಿತ. ಮಂಡ್ಯ ಮತ್ತು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಸಹಭಾಗಿತ್ವದಲ್ಲಿ ಜ.12 ಮತ್ತು 13ರಂದು ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿ ಬಿ.ಜಿ.ಎಸ್. ಸಭಾಭವನದಲ್ಲಿ ಡಾ.ನಿರ್ಮಲಾನಂದನಾಥ ಮಹಾಸ್ವಾಮೀಜಿರವರ ದಿವ್ಯ ಸಾನಿಧ್ಯದಲ್ಲಿ ಹಾಗೂ ಶ್ರೀ ಎನ್.ಚಲುವರಾಯಸ್ವಾಮಿ, ಸನ್ಮಾನ್ಯ ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ರೈತ ಸಂಗಮ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಜಿಲ್ಲೆಯ ಪ್ರಮುಖ ಕೃಷಿ ಬೆಳೆಗಳಾದ ಭತ್ತ, ರಾಗಿ ಮತ್ತು ಕಬ್ಬು ಬೆಳೆಗಳಲ್ಲಿ ಉತ್ತಮ ಇಳುವರಿ ಪಡೆಯಲು ರೈತರು ಎದುರಿಸುತ್ತಿರುವ ಸಮಸ್ಯೆಗಳ ನಿವಾರಣೆ ಕುರಿತು ಹಾಗೂ ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಸಂಪರ್ಕ ಕುರಿತು ನುರಿತ ತಜ್ಞರಿಂದ ತಾಂತ್ರಿಕ ಅಧಿವೇಶನ ಆಯೋಜಿಸಲಾಗಿರುವುದರ ಜೊತೆಗೆ 100ಕ್ಕೂ ಹೆಚ್ಚು ಸಂಸ್ಥೆಗಳು/ರೈತ ಉತ್ಪಾದಕ ಕಂಪನಿಗಳ ಭಾಗವಹಿಸುವಿಕೆಯಲ್ಲಿ ಕೃಷಿ ಮೇಳ ಮತ್ತು ವಸ್ತು ಪ್ರದರ್ಶನವನ್ನು ಏರ್ಪಡಿಸಲಾಗಿರುತ್ತದೆ. ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಮಂಡ್ಯ ಜಂಟಿ ಕೃಷಿ ನಿರ್ದೇಶಕ ಅಶೋಕ.ವಿ.ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುಂದು ಕೊರತೆ ಅಹವಾಲು

**ಮಂಡ್ಯ:** ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಜಿಲ್ಲಾ ಮಟ್ಟದ ಕುಂದು ಕೊರತೆಯ ಬಗ್ಗೆ ಚರ್ಚಿಸಿ ಇತ್ಯರ್ಥಪಡಿಸಲು ಜನವರಿ 31 ರಂದು ಬೆಳಿಗ್ಗೆ 10.00 ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಪಂಚಾಯತ್, ಕಾವೇರಿ ಸಭಾಂಗಣದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಕುಂದು ಕೊರತೆ ಸಭೆಯನ್ನು ಏರ್ಪಡಿಸಲು ಉದ್ದೇಶಿಸಲಾಗಿದೆ. ಜಿಲ್ಲಾ ವ್ಯಾಪ್ತಿಯ ನೊಂದಾಯಿತ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗದ ಸಂಘ/ಸಂಸ್ಥೆಯವರು ತಮ್ಮ ಅಹವಾಲುಗಳನ್ನು ಜಿಲ್ಲಾ ತಾಲೂಕು ಸಮಾಜ ಕಲ್ಯಾಣ ಇಲಾಖೆಗೆ ಲಿಖಿತವಾಗಿ ಜನವರಿ 20ರೊಳಗೆ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಕಾರ್ಡ್‌ದಾರರಿಗೆ ಅನುಮತಿ ನೀಡಿ ಸಚಿವ ವೆಂಕಟೇಶ್ ಆಗ್ರಹ

**ಪಿರಿಯಾಪಟ್ಟಣ:** ತಾಲೂಕಿನಲ್ಲಿ ಹೊಗೆಸೊಪ್ಪು ಪ್ರಮುಖ ಬೆಳೆಯಾಗಿದ್ದು, ಸಮಾಧಾನಕರ ಬೆಲೆ ಕೂಡ ಈ ವರ್ಷ ಸಿಗುತ್ತಿದೆ, ಇಳುವರಿ ಕಡಿಮೆ ಇದ್ದರೂ ತಕ್ಕಮಟ್ಟಿನ ಬೆಲೆ ಸಿಗುತ್ತಿರುವುದರಿಂದ ತಾಲೂಕಿನ ರೈತರ ಮುಖದಲ್ಲಿ ಸಂತೋಷ ಕಾಣುತ್ತಿದೆ ಎಂದು ಎಂದು ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ. ವೆಂಕಟೇಶ್ ತಿಳಿಸಿದರು. ಈ ಬಗ್ಗೆ ಬೆಟ್ಟದಪುರ ಎಪಿಎಂಸಿ ಆವರಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು , 100 ಮಿಲಿಯನ್ ಬೇಡಿಕೆ ಇದ್ದು, 80 ಮಿಲಿಯನ್ ಮಾತ್ರ ಆಗಬಹುದು, ಈಗಾಗಲೆ 60 ಮಿಲಿಯನ್ ಮಾರಾಟ ಆಗಿದೆ ಎಂದು ತಿಳಿಸಿದರು. ಅನಧಿಕೃತ ಪರವಾನಗಿ ಹೊಂದಿರುವ ತಂಬಾಕು ಮಾರಾಟ ಮಾಡಲು ಪ್ರತೀ



ವರ್ಷ ಡಿಸೆಂಬರ್ ತಿಂಗಳಿನಲ್ಲಿ ಅನುಮತಿ ನೀಡಲಾಗುತ್ತಿತ್ತು, ಆದರೆ ಈ ವರ್ಷ ಜನವರಿ ಅರ್ದ ಮುಗಿದರು ಮಾರಾಟಕ್ಕೆ ಅನುಮತಿ ನೀಡಿಲ್ಲ, ಅಲ್ಲದೆ ತಾಲೂಕಿನ ಹಲವು ರೈತರು ನನಗೆ ಅನಧಿಕೃತ ಪರವಾನಗಿ ಕೊಡಿಸಲು ರೈತರು ಮನವಿ ಮಾಡಿದ್ದಾರೆ. ಆದ್ದರಿಂದ ತಕ್ಷಣ ಕಾರ್ಡುದಾರರಿಗೆ ಅನುಮತಿ ನೀಡಬೇಕು ಎಂದು ತಂಬಾಕು ಮಂಡಳಿ ಮತ್ತು ಕೇಂದ್ರ ಸರ್ಕಾರಕ್ಕೆ ಪತ್ರಿಕೆ ಮೂಲಕ ಒತ್ತಾಯ ಮಾಡಿದ್ದಾರೆ. ಈ ಬಾಗದ ಸಂಸದರಿಗೆ ರೈತರ ಬಗ್ಗೆ ಕಾಳಜಿ ಇರಬೇಕು, ರೈತರ ಸಹಾಯಕ್ಕೆ ನೆರವಾಗಬೇಕು ಎಂದರು. ರಾಗಿ ಖರೀದಿ ಕೇಂದ್ರದಲ್ಲಿ ಸರ್ಕಾರದ ನಿಯಮದ ಪ್ರಕಾರ ಖರೀದಿ ಮಾಡಬೇಕು, ರೈತರು ಗುಣಮಟ್ಟದ ರಾಗಿ ತರಬೇಕು, ಸಣ್ಣ ಮತ್ತು ದೊಡ್ಡ ರೈತರಿಗೂ ಅನುಮತಿ ನೀಡಲಾಗಿದೆ, ನಾವೂ ಕೂಡ ಖರೀದಿ ಕೇಂದ್ರಕ್ಕೆ ಭೇಟಿ ನೀಡಿ ವೀಕ್ಷಣೆ ಮಾಡುತ್ತೇವೆ ಎಂದರು. ರೈತರು ರಾಗಿ ಖರೀದಿ ಕೇಂದ್ರಕ್ಕೆ ಮಣ್ಣು ಮಿಶ್ರಿತ ಕಲಬೆರಕೆ ರಾಗಿ ತಂದು ಸರ್ಕಾರಕ್ಕೆ ಮೋಸ ಮಾಡಬೇಡಿ ಎಂದು ತಿಳಿಸಿದರು. ಸಹಕಾರ ಸಂಘಗಳಲ್ಲಿ ಸುಸ್ತಿಯಾಗಿರುವ ಸಾಲದ ಬಡ್ಡಿಯನ್ನು ರೈತರು ಕಟ್ಟುವಹಾಗಿಲ್ಲ, ಸರ್ಕಾರ ಬಡ್ಡಿ ಮನ್ನಾ ಮಾಡಲು ಇನ್ನೊಂದು ವಾರದಲ್ಲಿ ಆದೇಶ ಬರುತ್ತೆ ಎಂದು ಹೇಳಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ರಹಮತ್ ಜಾನ್ ಬಾಬು, ಡಿ.ಟಿ.ಸ್ವಾಮಿ, ವಕೀಲ ಬಿ.ವಿ.ಜವರೇಗೌಡ, ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಪರಮೇಶ್ ಉಪಸ್ಥಿತರಿದ್ದರು.

## ಮತದಾರರ ದಿನಾಚರಣೆ

**ಕೋಲಾರ:** ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಜ.25 ರಂದು ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ಅಚ್ಚುಕಟ್ಟಾಗಿ ಆಯೋಜಿಸಲು ಸಿದ್ದತೆಗೆ ಕ್ರಮವಹಿಸಲು ಜಿಲ್ಲಾಧಿಕಾರಿ ಅಕ್ರಂ ಪಾಷ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿಂದು ರಾಷ್ಟ್ರೀಯ ಮತದಾರರ ದಿನಾಚರಣೆ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಚುನಾವಣಾ ಆಯೋಗದ ನಿರ್ದೇಶನದಂತೆ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ಪ್ರೌಢಶಾಲೆ, ಪದವಿ ಪೂರ್ವ ಕಾಲೇಜು ಹಾಗೂ ಪದವಿ ಕಾಲೇಜು ವಿದ್ಯಾರ್ಥಿಗಳಿಗೆ ಏರ್ಪಡಿಸುವಂತೆ ತಿಳಿಸಿದರಲ್ಲದೆ, ಯುವ ಮತದಾರರನ್ನು ನೋಂದಣಿ ಮಾಡಿಸಲು ಹೆಚ್ಚಿನ ಆಸಕ್ತಿವಹಿಸುವಂತೆ ನಿರ್ದೇಶನ ನೀಡಿದರು. ಜಿಲ್ಲೆಯ ಶತಾಯುಷಿ ಮತದಾರರನ್ನು ಗುರುತಿಸಿ ಸದರಿ ಕಾರ್ಯಕ್ರಮದಲ್ಲಿ ಸನ್ಮಾನಿಸಲು ಕ್ರಮವಹಿಸುವಂತೆ ಸೂಚಿಸಿದರು. ಎಲ್ಲಾ ತಾಲ್ಲೂಕು ಮಟ್ಟದಲ್ಲಿಯೂ ಕಾರ್ಯಕ್ರಮ ಆಯೋಜಿಸುವಂತೆ ಸೂಚಿಸಿದರಲ್ಲದೆ, ಅಂದು ಮತದಾನ ಕುರಿತು ಜಾಗೃತಿ ಏರ್ಪಡಿಸುವಂತೆ ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಪದ್ಮ ಬಸವಂತಪ್ಪ, ಅಪರ ಜಿಲ್ಲಾಧಿಕಾರಿ ಡಾ. ಶಂಕರ ವಾಣಿಕ್ಯಾಳ್ , ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಗದೀಶ್ ಹಾಜರಿದ್ದರು.

ಲೋಕಸಭಾ ಚುನಾವಣೆ–2024

# ಅಂತರರಾಜ್ಯ ಗಡಿ ಭಾಗಗಳಲ್ಲಿ ಭದ್ರತೆಗೆ ಸೂಚನೆ

ಕೋಲಾರ: ಕೋಲಾರ ಜಿಲ್ಲೆಯು ಎರಡು ರಾಜ್ಯಗಳ ಎಲ್ಲೆಯನ್ನು ಹಂಚಿಕೊಂಡಿದ್ದು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಸಂಭಾವ್ಯ ಅಕ್ರಮಗಳನ್ನು ತಡೆಯಲು ಅಂತರರಾಜ್ಯ ಪೊಲೀಸ್ ಹಾಗೂ ಅಬಕಾರಿ ಅಧಿಕಾರಿಗಳ ಸಹಕಾರ ಅಗತ್ಯ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷ ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ, ಅಂತರರಾಜ್ಯ ಗಡಿ ಭಾಗಗಳಲ್ಲಿ ಭದ್ರತೆ ಕುರಿತಾದ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 29 ಚೆಕ್‌ಪೋಸ್ಟ್‌ಗಳನ್ನು ರಾಜ್ಯದ ಗಡಿಗಳಲ್ಲಿ ನಿರ್ಮಿಸಲಾಗಿದೆ. ಈಗಾಗಲೇ ಕೋಲಾರ ಜಿಲ್ಲೆಗೆ ಸಂಬಂಧಿಸಿದಂತೆ ಎಸ್.ಎಸ್.ಟಿ ಮತ್ತು ಎಫ್.ಎಸ್.ಟಿ ತಂಡಗಳನ್ನು ರಚಿಸಿ ಅವರುಗಳಿಗೆ ಜವಬ್ದಾರಿ ವಹಿಸಲಾಗಿದೆ ಎಂದರು.

ಕರ್ನಾಟಕದಲ್ಲಿ ತಮಿಳುನಾಡು ಹಾಗೂ ಆಂಧ್ರಪ್ರದೇಶ ರಾಜ್ಯಗಳಿಗಿಂತ ಮದ್ಯದ ದರ ಕಡಿಮೆ ಇರುವುದರಿಂದ ಚುನಾವಣೆ ವೇಳೆಯಲ್ಲಿ ಅತಿ ಹೆಚ್ಚು ಮದ್ಯ ಸಾಗಾಣಿಕೆ ಆಗುವ ಸಂಭವ ಇರುತ್ತದೆ. ಈ ಬಗ್ಗೆ ತೀವ್ರನಿಗಾವಹಿಸಬೇಕು. ಜಿಲ್ಲೆಯಲ್ಲಿ ಮದ್ಯ ತಯಾರಿಕ ಘಟಕಗಳ ಮೇಲೂ ಸಹ ನಿಗವಹಿಸಬೇಕು. ಅಬಕಾರಿ ಇಲಾಖೆಯವರು ಯಾವುದೇ ಅನುಮಾನಾಸ್ಪದ ಬೆಳವಣಿಗೆಗಳು ಕಂಡು ಬಂದಲ್ಲಿ ತಕ್ಷಣವೇ ಕಾರ್ಯಪ್ರವೃತ್ತರಾಗಬೇಕು. ಯಾವುದೇ ಅಕ್ರಮ ಮದ್ಯ ತಯಾರಿಕೆ ಹಾಗೂ ಹಂಚುವಿಕೆ ಕಂಡುಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮಕ್ಕೈಗೊಳ್ಳಬೇಕು. ಅವುಗಳ ಕುರಿತು ಮಾಹಿತಿ




ಕಲೆ ಹಾಕಬೇಕು ಎಂದರು.

ಗಡಿ ಭದ್ರತೆ ಚೆಕ್‌ಪೋಸ್ಟ್‌ಗಳಲ್ಲಿ ಉಚಿತವಾಗಿ ವಿತರಿಸಲಾಗುವ ವಸ್ತುಗಳ ಕುರಿತು ತೀವ್ರವಾಗಿ ಶೋಧಿಸಬೇಕು. ಎಸ್.ಎಸ್.ಟಿ ಮತ್ತು ಎಫ್.ಎಸ್.ಟಿ ತಂಡಗಳು ಈಗಿನಿಂದಲೇ ಕಾರ್ಯೋನ್ಮುಕರಾಗಿರಬೇಕು ಹಾಗೂ ಸದಾ ಎಚ್ಚರದಿಂದ ಇರಬೇಕು. ಕೆಲವೊಮ್ಮೆ ಜಂಟಿ ಕಾರ್ಯಚರಣೆ ನಡೆಸುವಾಗ ಅಕ್ಕ-ಪಕ್ಕದ ಜಿಲ್ಲೆಗಳ ಸಹಕಾರವನ್ನು ಕೋರಬಹುದಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಅಪರಾದಗಳಲ್ಲಿ ಭಾಗಿಯಾಗಿರುವ ಹಾಗೂ ಪದೆ ಪದೆ ಅಪರಾದ ಎಸಗುವ ಅಪರಾದಿಗಳ ಬಗ್ಗೆ ತೀವ್ರನಿಗಾವಹಿಸಬೇಕು. ಅಕ್ರಮ ಚಟುವಟಿಕೆಗಳಲ್ಲಿ ತೊಡಗಿರುವವರನ್ನು ಹಾಗೂ ಈ ಹಿಂದೆ ಚುನಾವಣಾ ಅಪರಾದ ಎಸಗಿರುವವರ ವಿವರಗಳನ್ನು ಅಕ್ಕ-ಪಕ್ಕದ ಜಿಲ್ಲೆಯ ಪೊಲೀಸ್ ಮುಖ್ಯಸ್ಥರುಗಳೊಂದಿಗೆ ಹಂಚಿಕೊಳ್ಳಬೇಕು. ಇದರಿಂದ ಇವರುಗಳ ಮೇಲೆ ನಿಗಾ ಇಟ್ಟು ಮುಂದಿನ ಚುನಾವಣೆಯಲ್ಲಿ ಅಕ್ರಮಗಳು ನಡೆಯುವುದನ್ನು ತಪ್ಪಿಸಬಹುದಾಗಿದೆ. ಮುಖ್ಯವಾಗಿ ಬೇರೆ ರಾಜ್ಯಗಳ ಪೊಲೀಸ್ ಅಧಿಕಾರಿಗಳು ಅಕ್ರಮ ಮದ್ಯ ಸಾಗಾಣಿಕೆ ಹಾಗೂ ಅಕ್ರಮ ಹಣ ಅಥವಾ ಉಚಿತವಾಗಿ ವಿತರಿಸಲಾಗುವ ಸಾಮಗ್ರಿಗಳ ಸುಳಿವು ಸಿಕ್ಕಲ್ಲಿ ನಮ್ಮ ಜಿಲ್ಲೆಯ ಅಬಕಾರಿ ಅಥವಾ ಪೊಲೀಸ್ ಅಧಿಕಾರಿಗಳೊಂದಿಗೆ ತ್ವರಿತವಾಗಿ ಹಂಚಿಕೊಂಡು ಅಗತ್ಯವಿದ್ದಲ್ಲಿ, ಜಂಟಿ ಕಾರ್ಯಾಚರಣೆ ನಡೆಸಬೇಕೆಂದು ಆಂಧ್ರಪ್ರದೇಶ ಮತ್ತು ತಮಿಳುನಾಡು ರಾಜ್ಯಗಳ ಕೋಲಾರ ಜಿಲ್ಲೆ ಗಡಿ ಹಂಚಿಕೊಂಡಿರುವ ಜಿಲ್ಲೆಗಳ ಪೊಲೀಸ್ ಅಧಿಕಾರಿಗಳಿಗೆ ಮನವಿ ಮಾಡಿದರು. ಒಟ್ಟಾರೆ ನಿರ್ಭೀತ ಹಾಗೂ ನ್ಯಾಯಸಮ್ಮತ ಚುನಾವಣೆಗಳನ್ನು ನಡೆಸಲು ಅಧಿಕಾರಿಗಳಲ್ಲಿ ಮನವಿ ಮಾಡಿದರು.

ಸಭೆಯಲ್ಲಿ ಕೆ.ಜಿ.ಎಫ್ ಪೊಲೀಸ್ ವರಷ್ಠಾಧಿಕಾರಿ ಶಾಂತಕುಮಾರ್, ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮ ಬಸವಂತಪ್ಪ, ಅಪರ ಜಿಲ್ಲಾಧಿಕಾರಿ ಡಾ. ಶಂಕರ್ ವಣಿಕ್ಯಾಳ್, ಹೆಚ್ಚುವರಿ ಪೊಲೀಸ್ ವರಷ್ಠಾಧಿಕಾರಿ ಜಗದೀಶ್, ಅನ್ನಮಯ್ಯ, ಚಿತ್ತೂರು ಹಾಗೂ ಕೃಷ್ಣಗಿರಿ ಜಿಲ್ಲೆಯ ಪೊಲೀಸ್ ಅಧಿಕಾರಿಗಳು, ಅಬಕಾರಿ ಇಲಾಖೆಯ ವಿಭಾಗೀಯ ನಿಯಾಂತ್ರಣಾಧಿಕಾರಿಗಳು, ವಿಜಿಲೆನ್ಸ್ ಅಧಿಕಾರಿಗಳು ಸೇರಿದಂತೆ ಮತ್ತಿತ್ತರರು ಹಾಜರಿದ್ದರು.

## 75ನೇ ಗಣರಾಜ್ಯೋತ್ಸವ ಅರ್ಥಪೂರ್ಣ ಆಚರಣೆಗೆ ಸಿದ್ಧತೆಗೆ ಅಗತ್ಯ ಕ್ರಮವಹಿಸಲು ಜಿಲ್ಲಾಧಿಕಾರಿಗಳ ಸೂಚನೆ

**ಕೋಲಾರ:** ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದ ಮೈದಾನದಲ್ಲಿ ಜನವರಿ 26 ರಂದು ಗಣರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ದತೆಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಅಕ್ರಂ ಪಾಷ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿಂದು 75ನೇ ಗಣರಾಜ್ಯೋತ್ಸವ ಆಚರಣೆಯ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಕಾರ್ಯಕ್ರಮಕ್ಕೂ ಮುನ್ನ ಒಂದು ವಾರ ಮುಂಚಿತವಾಗಿ ನಗರದ ಸ್ವಚ್ಚತೆಗೆ ಕ್ರಮವಹಿಸಲು ನಗರ ಸಭೆ ಆಯುಕ್ತರಿಗೆ ಸೂಚಿಸಿದರು.

ಶಿ?ಚಾರದಂತೆ ಆಹ್ವಾನ ಪತ್ರಿಕೆ ಮುದ್ರಣ ಮಾಡಿಸಿ ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲು ಕ್ರಮವಹಿಸಿ ಎಂದು ಜಿಲ್ಲಾಧಿಕಾರಿಯವರು ಅಧಿಕಾರಿಗಳಿಗೆ ಸೂಚಿಸಿದರು. ಕಾರ್ಯಕ್ರಮದಲ್ಲಿ ರಾ?ಗೀತೆ ರೈತಗೀತೆ ಮತ್ತು ನಾಡಗೀತೆಯನ್ನು ಹಾಡಲು ಆಯೋಜಿಸಲು ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರಲ್ಲದೆ, ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜನೆಗೆ ನಿರ್ದೇಶನ ನೀಡಿದರು. ವೇದಿಕೆ ಸಿದ್ಧತೆ, ರಾಷ್ಟ್ರಧ್ವಜಾರೋಹಣ ವ್ಯವಸ್ಥೆ, ಆಕರ್ಷಕ ಪಥಸಂಚಲನ, ಸನ್ಮಾನ, ಉಪಹಾರ ವ್ಯವಸ್ಥೆಗೆ ಈಗಾಗಲೇ ರಚಿಸಿರುವ ಉಪ ಸಮಿತಿಗಳು ನಿಗಾವಹಿಸಿ ಕ್ರಮಕ್ಕೈಗೊಳ್ಳಲು ಸೂಚಿಸಿದರು. ಶಾಲಾ ಕಾಲೇಜು ಮಕ್ಕಳಿಗೆ ಚರ್ಚಾ ಸ್ಪರ್ಧೆ ಮತ್ತು ರಸ ಪ್ರಶ್ನೆ ಸ್ಪರ್ಧೆ ಏರ್ಪಡಿಸುವಂತೆ ತಿಳಿಸಿದರು.

ಗಣರಾಜ್ಯೋತ್ಸವದ ಸಂದೇಶ ಸಿದ್ದತೆಗೆ ಎಲ್ಲಾ ಇಲಾಖೆ ಅಧಿಕಾರಿಗಳು ತಮ್ಮ ಇಲಾಖೆಯ ಅಭಿವೃದ್ಧಿ ಕಾರ್ಯಕ್ರಮಗಳ ಮಾಹಿತಿಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ನೀಡುವಂತೆ ಸೂಚಿಸಿದರು.

ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ತಿಳಿಸಿದ ಜಿಲ್ಲಾಧಿಕಾರಿಯವರು ಇದು ರಾಷ್ಟ್ರೀಯ ಹಬ್ಬ ಎಲ್ಲರ ಪಾಲ್ಗೊಳುವಿಕೆ ಬಹು ಮುಖ್ಯ ಈ ನಿಟ್ಟಿನಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ತಿಳಿಸಿದ್ದಾರೆ.

ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿರುವವರಿಗೆ ಜಿಲ್ಲಾಡಳಿತ ವತಿಯಿಂದ ಸನ್ಮಾನಿಸಲಾಗುವುದು. ಎಲ್ಲಾ ಸರ್ಕಾರಿ ಕಚೇರಿ ಕಟ್ಟಡಗಳಿಗೆ ದೀಪಾಲಂಕಾರಕ್ಕೆ ಅಧಿಕಾರಿಗಳು ಕ್ರಮವಹಿಸಿ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಪದ್ಮ ಬಸವಂತಪ್ಪ,ಅಪರ ಜಿಲ್ಲಾಧಿಕಾರಿ ಡಾ ಶಂಕರ ವಾಣಿಕ್ಯಾಳ್ , ಹೆಚ್ಚುವರಿ ಪೊಲೀಸ್ ವರಿ?ಧಿಕಾರಿ ಜಗದೀಶ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಸಂಜೆ ಟಿಪ್ಸ್



## ಉಪನಾಲ್ ಸಿಎನ್ ಸಿಯೊಂದಿಗೆ ಪಾಲುದಾರಿಕೆ ಘೋಷಿಸಿದ ಫಿಲಿಪ್ಸ್ ಮೆಷಿನ್ ಟೂಲ್ಸ್

ಪ್ರಮುಖ ಉತ್ಪಾದನಾ ಪರಿಹಾರ ಪೂರೈಕೆದಾರ, ಫಿಲಿಪ್ಸ್ ಮೆಷಿನ್ ಟೂಲ್ಸ್ ದಕ್ಷಿಣ ಭಾರತದ ಉತ್ಪಾದನಾ ವಲಯದ ಪ್ರಮುಖ ಹೆಸರಾದ ಉಪನಾಲ್ ಸಿಎನ್ ಸಿ ಸೊಲ್ಯೂಷನ್ಸ್ನೊಂದಿಗೆ ತನ್ನ ಪಾಲುದಾರಿಕೆಯನ್ನು ಹೆಮ್ಮೆಯಿಂದ ಘೋಷಿಸಿದೆ. ಫಿಲಿಪ್ಸ್ ನ ಹೆಸರಾಂತ ಯಂತ್ರ ಮತ್ತು ಸಂಯೋಜಕ ಪರಿಣತಿಯನ್ನು ದಕ್ಷಿಣ ಪ್ರದೇಶದಲ್ಲಿ ಉಪನಾಲ್ ಸಿಎನ್ ಸಿಯ ವ್ಯಾಪ್ತಿಯೊಂದಿಗೆ ಸಂಯೋಜಿಸುವ ಮೂಲಕ ದಕ್ಷಿಣ ಭಾರತದ ಮಾರುಕಟ್ಟೆಯಾದ್ಯಂತ ಕವರೇಜ್ ಮತ್ತು ಪ್ರವೇಶವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.ಉಪನಾಲ್ ಸಿಎನ್ ಸಿಯ ಗ್ರಾಹಕರು ಈಗ ವಿಸ್ತರಿತ ಮೆಟಲ್ ಕಟಿಂಗ್ ಪೋರ್ಟ್ಫೋಲಿಯೊದಿಂದ ಪ್ರಯೋಜನ ಪಡೆಯುತ್ತಾರೆ, ಫಿಲಿಪ್ಸ್ ಉತ್ಪನ್ನಗಳ ವ್ಯಾಪಕ ಶ್ರೇಣಿಯ ಪ್ರವೇಶದಿಂದ ಸಕ್ರಿಯಗೊಳಿಸಲಾಗಿದೆ. ಈ ಪ್ರಭಾವಶಾಲಿ ಶ್ರೇಣಿಯು ಫಿಲಿಪ್ಸ್ ನ ಎಲೆಕ್ಟ್ರಿಕಲ್ ಡಿಸ್ಚಾರ್ಜ್ ಯಂತ್ರಗಳು (ಇಆಂಒಗಳು), ಸರ್ಫೇಸ್ ಗ್ರೈಂಡರ್ಗಳು, ಡಬಲ್ ಕಾಲಮ್ ಯಂತ್ರ ಕೇಂದ್ರಗಳು ಮತ್ತು ಪರ್ಫಾರ್ಮೆನ್ಸ್ ಲೈನ್ ಕಗಿಒ ಮೆಷಿನಿಂಗ್ ಸೆಂಟರ್ ಗಳನ್ನು ಒಳಗೊಂಡಿದೆ ಆದರೆ ಸೀಮಿತವಾಗಿಲ್ಲ, ಇದು ಫಿಲಿಪ್ಸ್ನ ಅತ್ಯಾಧುನಿಕ ಕಇಖಇಅಊ ಪೋರ್ಟ್ಫೋಲಿಯೊದ ಭಾಗವಾಗಿದೆ. ಏರೋಸ್ಪೇಸ್, ಆಟೋಮೊಬೈಲ್, ಡೈ ಮತ್ತು ಅಚ್ಚು, ಮತ್ತು ಸೆಮಿಕಂಡಕ್ಟರ್ಗಳಂತಹ ಉದ್ಯಮಗಳಾದ್ಯಂತ ತಯಾರಕರು ವಿಶೇಷವಾಗಿ ಈ ಕಾರ್ಯತಂತ್ರದ ಪಾಲುದಾರಿಕೆಯಿಂದ ಹೆಚ್ಚಿನ ಲಾಭವನ್ನು ಪಡೆಯಲು ಸಿದ್ಧರಾಗಿದ್ದಾರೆ.

# ಪನೀರ್ ಪಕೋಡ

## ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಪನೀರ್ ಕ್ಯೂಬ್ಸ್ - 500 ಗ್ರಾಂ, ಕಡ್ಲೆ ಹಿಟ್ಟು - 1 ಕಪ್, ಅಚ್ಚಖಾರದ ಪುಡಿ - 1 ಚಮಚ, ಅರಶಿಣ - 1 ಚಮಚ, ಉಪ್ಪು - ರುಚಿಗೆ ತಕ್ಕಷ್ಟು, ಜೀರಿಗೆ ಪುಡಿ - ಅರ್ಧ ಚಮಚ, ಅಡುಗೆ ಸೋಡಾ - 1 ಚಮಚ, ಎಣ್ಣೆ - ಅಗತ್ಯಕ್ಕೆ ತಕ್ಕಷ್ಟು, ಚಾಟ್ ಮಸಾಲ - ಸ್ವಲ್ಪ

### ಮಾಡುವ ವಿಧಾನ

ಮೊದಲಿಗೆ ಒಂದು ಪಾತ್ರೆಯಲ್ಲಿ ಕಡ್ಲೆಹಿಟ್ಟನ್ನು ಹಾಕಿಕೊಂಡು ಅದಕ್ಕೆ ನೀರು, ಅಚ್ಚಖಾರದ ಪುಡಿ, ಜೀರಿಗೆ ಪುಡಿ, ಉಪ್ಪು, ಅರಶಿಣ ಮತ್ತು ಸೋಡಾ ಹಾಕಿಕೊಂಡು ಚನ್ನಾಗಿ ಮಿಕ್ಸ್ ಮಾಡಿಕೊಂಡು ದಪ್ಪ ಮಿಶ್ರಣವನ್ನು ಮಾಡಿಕೊಳ್ಳಿ. ಈಗ ಪನೀರ್ ಕ್ಯೂಬ್ಸ್ ಅನ್ನು ಈ ಮಿಶ್ರಣದಲ್ಲಿ ಚನ್ನಾಗಿ ಅದ್ದಿ, ಒಂದು ಬಾಣಾಲೆಯಲ್ಲಿ ಸ್ವಲ್ಪ ಎಣ್ಣೆ ಕಾದ ಬಳಿಕ ಅದಕ್ಕೆ ಮಿಶ್ರಣದಲ್ಲಿ ಅದ್ದಿದ ಪನೀರ್ ಕ್ಯೂಬ್ಸ್ ಅನ್ನು ಹಾಕಿಕೊಂಡು ಚನ್ನಾಗಿ ಫ್ರೈ ಮಾಡಿಕೊಳ್ಳಿ. ನಂತರ ಅದನ್ನು ಎಣ್ಣೆಯಿಂದ ತೆಗೆದು ಅದರ ಮೇಲೆ ಸ್ವಲ್ಪ ಚಾಟ್ ಮಸಾಲ ಪುಡಿಯನ್ನು ಹಾಕಿಕೊಂಡು ಕೆಚಪ್ ಅಥವಾ ಗ್ರೀನ್ ಚಟ್ನಿಯೊಂದಿಗೆ ಬಿಸಿಬಿಸಿ ತಿನ್ನಲು ಕೊಡಿ.

# ಮಲಬದ್ಧತೆ ಸಮಸ್ಯೆಯೇ



## ಹೆಲ್ತ್ ಟಿಪ್ಸ್

ಮಲಬದ್ಧತೆ ಗಂಭೀರ ಸಮಸ್ಯೆಯಲ್ಲಿ ಒಂದು. ಹಾಗಂತ ಅದಕ್ಕೆ ಹೆಚ್ಚು ಭಯಪಡುವ ಅಗತ್ಯವಿಲ್ಲ. ಕೆಲವೊಂದು ಮನೆ ಮದ್ದುಗಳು ನಿಮ್ಮ ಮಲಬದ್ಧತೆ ಸಮಸ್ಯೆಯನ್ನು ನಿವಾರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಅದ್ರಲ್ಲಿ ಒಣ ದ್ರಾಕ್ಷಿ ಕೂಡ ಒಂದು. ಈ ಒಣ ದ್ರಾಕ್ಷಿ ಜೀರ್ಣಕ್ರಿಯೆಗೆ ಸಹಾಯ ಮಾಡುವಲ್ಲಿ ಮತ್ತು ಮಲಬದ್ಧತೆಯನ್ನು ನಿವಾರಿಸುವಲ್ಲಿ ಅದ್ಭುತ ಕೆಲಸ ಮಾಡುತ್ತದೆ. ಮಲಬದ್ಧತೆ ಸಮಸ್ಯೆಯಿಂದ ನೀವು ಬಳಲುತ್ತಿದ್ದರೆ 8-10 ಕಪ್ಪು ಒಣದ್ರಾಕ್ಷಿಗಳನ್ನು ತೆಗೆದುಕೊಳ್ಳಿ. ಅದನ್ನು ರಾತ್ರಿ ನೀರಿನಲ್ಲಿ ನೆನೆಹಾಕಿ. ಬೆಳಿಗ್ಗೆ ನೆನೆಸಿದ ನೀರಿನಲ್ಲಿಯೇ ಒಣ ದ್ರಾಕ್ಷಿಯನ್ನು ಹಿಸುಕಿ ನೀರಿನ ಸಮೇತ ಅದರ ಸೇವನೆ ಮಾಡಿ. ಈ ಸುಲಭವಾದ ಪರಿಹಾರವು ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ.

ಒಣದ್ರಾಕ್ಷಿಯಲ್ಲಿ ಮಲಬದ್ಧತೆಗೆ ಪರಿಹಾರ ನೀಡುವ ನೈಸರ್ಗಿಕ ಗುಣವಿದೆ. ಮಕ್ಕಳಿಗೆ ಕೂಡ ನೀವು ಈ ಒಣ ದ್ರಾಕ್ಷಿಯನ್ನು ಯಾವುದೇ ಭಯವಿಲ್ಲದೆ ನೀಡಬಹುದು. ಚಳಿಗಾಲದಲ್ಲಿ ಮಕ್ಕಳು ಕೂಡ ಮಲಬದ್ಧತೆ ಸಮಸ್ಯೆ ಎದುರಿಸುತ್ತಾರೆ. ಕಪ್ಪು ಒಣದ್ರಾಕ್ಷಿಯನ್ನು ನೀರಿನಲ್ಲಿ ನೆನೆಸಿ ಸೇವನೆ ಮಾಡಿದಾಗ ನಮಗೆ ಫೈಬರ್ ಸಿಗುತ್ತದೆ. ಈ ಫೈಬರ್, ಮಲಬದ್ಧತೆ ಕಡಿಮೆ ಮಾಡುವ ಶಕ್ತಿ ಹೊಂದಿದೆ. ನೀವು ಹಾಗೆಯೇ ಒಣದ್ರಾಕ್ಷಿ ಸೇವನೆ ಮಾಡುವುದಕ್ಕಿಂತ ನೆನೆಸಿದ ಒಣದ್ರಾಕ್ಷಿ ಸೇವನೆ ಮಾಡೋದು ಹೆಚ್ಚು ಪರಿಣಾಮಕಾರಿ. ಒಣದ್ರಾಕ್ಷಿ ಔಷಧಿ ಗುಣವನ್ನು ಹೊಂದಿದೆ.

ನಿಮ್ಮ ದೇಹಕ್ಕೆ ಶಕ್ತಿ ನೀಡುವ ಕೆಲಸ ಮಾಡುತ್ತದೆ. ನೀವು ವ್ಯಾಯಾಮಕ್ಕಿಂತ ಮೊದಲು ಇದರ ಸೇವನೆ ಮಾಡೋದು ಉತ್ತಮ. ಕ್ಯಾಲ್ಸಿಯಂ ಮತ್ತು ಬೋರಾನ್ನಂತಹ ಅಗತ್ಯ ಪೋಷಕಾಂಶಗಳನ್ನು ನಮ್ಮ ದೇಹಕ್ಕೆ ಒದಗಿಸುವ ಕೆಲಸವನ್ನು ಇದು ಮಾಡುತ್ತದೆ. ರಕ್ತದೊತ್ತಡ ಸಮಸ್ಯೆ, ಹಾಗೂ ಹೃದಯ ರೋಗದಿಂದ ನಮ್ಮನ್ನು ದೂರವಿಡಲು ಒಣದ್ರಾಕ್ಷಿ ಪರಿಣಾಮಕಾರಿ.

# ತುಟಿಗಳ ಸೌಂದರ್ಯಕ್ಕೆ ಸಲಹೆ

## ಬ್ಯೂಟಿ ಟಿಪ್ಸ್



ತುಟಿಗಳು ಉಬ್ಬಿಕೊಂಡಿದ್ದರೆ ಅದು ಅಂದವಾಗಿ ಕಾಣುತ್ತದೆ ಮತ್ತು ನಿಮ್ಮ ಚೆಂದ ಕೂಡ ಹೆಚ್ಚಾಗುತ್ತದೆ. ಹಾಗೇ ಉಬ್ಬಿದ ತುಟಿಗಳಿಗೆ ತುಂಬಾ ಸುಲಭವಾಗಿ , ನೀಟಾಗಿ ಲಿಪ್ ಸ್ಟಿಕ್ ಹಚ್ಚಬಹುದು. ಆದರೆ ಕೆಲವರ ತುಟಿಗಳು ಚಿಕ್ಕದಾಗಿ, ಚಪ್ಪಟೆಯಾಗಿರುತ್ತದೆ. ಅಂತವರು ನಿಮ್ಮ ತುಟಿಗಳು ಉಬ್ಬಿಕೊಳ್ಳಲು ಹೀಗೆ ಮಾಡಿ. ನೀವು ಸ್ನಾನ ಮಾಡುವ ಮೊದಲು ತುಟಿಗಳಿಗೆ ಪೆಟ್ರೋಲಿಯಂ ಜೆಲ್ಲಿ ಹಚ್ಚಿ ಸ್ನಾನ ಮಾಡಿ. ಆದರೆ ತುಟಿಗಳಿಗೆ ಹಚ್ಚಿದ ಪೆಟ್ರೋಲಿಯಂ ಜೆಲ್ಲಿಯನ್ನು ಅಳಿಸಬೇಡಿ. ಇದರಿಂದ ಬಿಸಿ ನೀರಿನ ಶಾಖಕ್ಕೆ ಜೆಲ್ಲಿ ತುಟಿಯೊಳಗೆ ಹೋಗಿ ನಯವಾದ ಉಬ್ಬಿದ ತುಟಿಗಳನ್ನು ಪಡೆಯಬಹುದು. ಪುದೀನಾ ಎಣ್ಣೆಗಳನ್ನು ತುಟಿಗಳಿಗೆ ಉಜ್ಜಿ. ಇದರಿಂದ ತುಟಿಗಳು ಸ್ವಲ್ಪ ಮಟ್ಟಿಗೆ ಊದಿಕೊಳ್ಳುತ್ತದೆ. ಮತ್ತು ತಾತ್ಕಾಲಿಕ ಬಣ್ಣವನ್ನು ನೀಡುತ್ತದೆ. ಕಂದು ಸಕ್ಕರೆ ಮತ್ತು ತೆಂಗಿನೆಣ್ಣೆ ಮಿಕ್ಸ್ ಮಾಡಿ ತುಟಿಗಳಿಗೆ ಮಸಾಜ್ ಮಾಡಿ. ಇದು ರಕ್ತದ ಹರಿವನ್ನು ಹೆಚ್ಚಿಸಿ ನಿಮ್ಮ ತುಟಿಗಳು ದಪ್ಪವಾಗುವಂತೆ ಮಾಡುತ್ತದೆ.







# ನಟಿ ನಯನತಾರಾಗೆ ಸಂಕಷ್ಟ

ನಟಿ ನಯನತಾರಾ ನಟಿಸಿರುವ 'ಅನ್ನಪೂರ್ಣಿ' ಹೆಸರಿನ ಸಿನಿಮಾದಲ್ಲಿ ಶ್ರೀರಾಮನಿಗೆ ಅಪಮಾನ ಮಾಡಲಾಗಿದ್ದು ಹಿಂದೂ ಭಾವನೆಗಳಿಗೆ ಧಕ್ಕೆಯಾಗಿದೆ ಎಂಬ ಆರೋಪ ಕೇಳಿ ಬಂದಿದ್ದು ನಯನತಾರಾ ಹಾಗೂ ಸಿನಿಮಾಕ್ಕೆ ಸಂಬಂಧಿಸಿದ ಏಳು ಜನರ ವಿರುದ್ಧ ದೂರು ದಾಖಲಾಗಿದೆ. ಶಿವಸೇನೆ ಮಾಜಿ ನಾಯಕ ರಮೇಶ್ ಸೋಲಂಕಿ ಎಂಬುವರು ಕೆಲ ದಿನದ ಹಿಂದೆ ಸಿನಿಮಾದ ವಿರುದ್ಧ ಮುಂಬೈನ ಪೊಲೀಸ್ ಠಾಣೆಯೊಂದರಲ್ಲಿ ದೂರು ದಾಖಲಿಸಿದ್ದರು. ಇದೀಗ ಮಧ್ಯ ಪ್ರದೇಶದ ಜಬಲ್ಪುರ ಪೊಲೀಸ್ ಠಾಣೆಯಲ್ಲಿ ಸಿನಿಮಾದ ನಟಿ ನಯನತಾರಾ, ನಿರ್ದೇಶಕ ನೀಲೇಶ್ ಕೃಷ್ಣನ್, ನೆಟ್ಫ್ಲಿಕ್ಸ್ ಇಂಡಿಯಾದ ಕಂಟೆಂಟ್ ಹೆಡ್ ಮೋನಿಯಾ, ಸಿನಿಮಾದ ನಿರ್ಮಾಪಕ ಹೀಗೆ ಒಟ್ಟು ಏಳು ಜನರ ವಿರುದ್ಧ ಹಿಂದೂ ಸೇವಾ ಪರಿಷತ್ ದೂರು ದಾಖಲಿಸಲಾಗಿದೆ. ನಯನತಾರಾ ನಟಿಸಿರುವ 'ಅನ್ನಪೂರ್ಣಿ' ಹೆಸರಿನ ಸಿನಿಮಾ ಡಿಸೆಂಬರ್ 1ರಂದು ಚಿತ್ರಮಂದಿರಗಳಲ್ಲಿ ಬಿಡುಗಡೆ ಆಗಿತ್ತು. ಬಳಿಕ ಸಿನಿಮಾ ಒಟಿಟಿಯಲ್ಲಿ ಬಿಡುಗಡೆ ಆಗಿ ಮಿಶ್ರ ಪ್ರತಿಕ್ರಿಯೆ ಪಡೆದುಕೊಂಡಿತು. ಆದರೆ ಸಿನಿಮಾಕ್ಕೆ ವಿರೋಧವೂ ವ್ಯಕ್ತವಾಯಿತು. 'ವನವಾಸದ ಸಮಯದಲ್ಲಿ ರಾಮ, ಸೀತೆ ಹಾಗೂ ಲಕ್ಷ್ಮಣ ಹಸಿವಾದಾಗ ಪ್ರಾಣಿಗಳ ಬೇಟೆ ಆಡಿ ಸೇವಿಸಿದ್ದರು. ರಾಮಾಯಣದಲ್ಲಿ ಈ ಬಗ್ಗೆ ಉಲ್ಲೇಖವಿದೆ' ಎಂಬ ಸಂಭಾಷಣೆ ಸಿನಿಮಾದಲ್ಲಿದೆ. ಈ ಸಂಭಾಷಣೆ ಬಗ್ಗೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಅಲ್ಲದೆ ಸಿನಿಮಾದಲ್ಲಿರುವ ಇತರೆ ಕೆಲವು ದೃಶ್ಯಗಳ ಬಗ್ಗೆಯೂ ಆಕ್ಷೇಪ ಎತ್ತಲಾಗಿದೆ. ಬ್ರಾಹ್ಮಣ ಯುವತಿ ಮಾಂಸಾಹಾರದ ಖಾದ್ಯಗಳನ್ನು ಮಾಡುವುದು, ನಮಾಜು ಮಾಡುವ ದೃಶ್ಯಗಳೂ ಇವೆ. ಇದರ ಬಗ್ಗೆಯೂ ಆಕ್ಷೇಪ ಎತ್ತಲಾಗಿದ್ದು, ಈ ಸಿನಿಮಾ 'ಲವ್ ಜಿಹಾದ್'ಗೆ ಪ್ರೇರೇಪಣೆ ನೀಡುತ್ತಿದೆ ಎಂಬ ಆರೋಪವನ್ನೂ ಕೆಲವರು ಮಾಡಿದ್ದಾರೆ.

ಅನ್ನಪೂರ್ಣಿ' ಚಿತ್ರದ ಬಗ್ಗೆ ಆಕ್ರೋಶದ ಮಧ್ಯೆ, ನಟಿ ನಯನತಾರಾ, ಚಿತ್ರದ ನಿರ್ದೇಶಕ ಮತ್ತು ನಿರ್ಮಾಪಕರು ಮತ್ತು ನೆಟ್ಫ್ಲಿಕ್ಸ್ ಇಂಡಿಯಾದ ವಿಷಯ ಮುಖ್ಯಸ್ಥೆ ಮೋನಿಕಾ ಶೆರ್ಗಿಲ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಮಧ್ಯಪ್ರದೇಶದ ಜಬಲ್ಪುರದಲ್ಲಿ ಬಲಪಂಥೀಯ ಸಂಘಟನೆಯೊಂದು ಸಲ್ಲಿಸಿದ ಎಫ್ಐಆರ್ನಲ್ಲಿ, ಆರೋಪಿಗಳು ಹಿಂದೂಗಳ ಧಾರ್ಮಿಕ ಭಾವನೆಗಳನ್ನು ನೋಯಿಸಿದ್ದಾರೆ. ನಯನತಾರಾ, ನಿರ್ದೇಶಕ ನಿಲೇಶ್ ಕೃಷ್ಣ, ನಿರ್ಮಾಪಕರಾದ ಜತಿನ್ ಸೇಥಿ ಮತ್ತು ಆರ್ ರವೀಂದ್ರನ್ ಸೇರಿದಂತೆ ಏಳು ಆರೋಪಿಗಳ ವಿರುದ್ಧ ಹಿಂದೂ ಸೇವಾ ಪರಿಷತ್ ಓಂಟಿ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸಿದೆ.




# ಅಯೋಧ್ಯೆ ರೈಲು ನಿಲ್ದಾಣ ಅಲಂಕರಿಸಲು ಬೆಂಗಳೂರಿನ ಶಿಲ್ಪಿ ಕಲ್ಯಾಣ್ ಎಸ್ ರಾಥೋಡ್ ಅಳಿಲು ಶಿಲ್ಪ

ಶಿಲ್ಪಿ, ಕಲ್ಯಾಣ್ ಎಸ್ ರಾಥೋರ್ ಅವರು ತಮ್ಮ ಅಳಿಲು ಶಿಲ್ಪವನ್ನು ಅಯೋಧ್ಯೆ ರೈಲು ನಿಲ್ದಾಣವನ್ನು ಅಲಂಕರಿಸಲು ಆಯ್ಕೆ ಮಾಡುವುದರ ಮೂಲಕ ಸ್ವತಃ ಮತ್ತು ಕರ್ನಾಟಕಕ್ಕೆ ಹೆಮ್ಮೆ ತಂದಿದ್ದಾರೆ. ಈ ತಿಂಗಳಾಂತ್ಯದಲ್ಲಿ ಅಯೋಧ್ಯೆಯಲ್ಲಿ ರಾಮಮಂದಿರದ ಶಂಕುಸ್ಥಾಪನೆಗೆ ಸಂಬಂಧಿಸಿದಂತೆ ಮುಂಬರುವ ಆಚರಣೆಗಳ ಸಂದರ್ಭದಲ್ಲಿ ಜನರು ನಿಲ್ದಾಣವನ್ನು ಜಮಾಯಿಸಿದಾಗ ಅದು ಎಲ್ಲರ ಕಣ್ಣುಗಳ ದೂರದೃಷ್ಟಿ ಆಗಿರುವುದು ಖಚಿತ.

ಕಲ್ಯಾಣ್ ಹೇಳುತ್ತಾರೆ, ''ಹೊಸ ಅಯೋಧ್ಯೆ ರೈಲು ನಿಲ್ದಾಣದ ಹೃತ್ಕರ್ಣದಲ್ಲಿ ಶಿಲ್ಪಕಲೆಗಾಗಿ ಪಿಚ್ ಮಾಡುವ ಈ ಅವಕಾಶ ನನಗೆ ಬಂದಾಗ, ನಾನು ಉತ್ಸುಕನಾಗಿದ್ದೆ. ಇದು ಹೆಚ್ಚಿನವರು ನಿರೀಕ್ಷಿಸುವುದಕ್ಕಿಂತ ಉದ್ದೇಶಪೂರ್ವಕವಾಗಿ ವಿಭಿನ್ನವಾಗಿರಬೇಕು ಎಂದು ನನ್ನ ಮನಸ್ಸಿನಲ್ಲಿ ಖಚಿತವಾಗಿತ್ತು. ಆದರೂ ಇದು ಈ ಪವಿತ್ರ ಪ್ರದೇಶದ ವಿಷಯಕ್ಕೆ ಗಟ್ಟಿಯಾದ ಸಂಪರ್ಕವನ್ನು ಹೊಂದಿರಬೇಕು. ನನ್ನ ತವರು ಬೆಂಗಳೂರಿನಲ್ಲಿ ನಾನು ಬೆಳೆದ ದಿನದಲ್ಲಿ, ನಗರವು ಎಲ್ಲಾ ರೀತಿಯ ಪಕ್ಷಿಗಳು ಮತ್ತು ಜೀವಿಗಳಿಂದ ತುಂಬಿತ್ತು, ಮತ್ತು ಅಳಿಲುಗಳು ಮೇಲೆ ಮತ್ತು ಕೆಳಗೆ ಓಡುವುದನ್ನು ನೋಡುವುದು ಸಾಮಾನ್ಯ ತಾಣವಾಗಿತ್ತು. ಸಮಕಾಲೀನ ಶೈಲಿಯಲ್ಲಿ ದೇವತೆಗಳನ್ನು ಪ್ರದರ್ಶಿಸುವ ಮೊದಲ ಆಕರ್ಷಣಗಳನ್ನು ಚೆನ್ನಾಗಿ ನಿವಾರಿಸಿದ್ದದರ ನಂತರ, ಶ್ರೀಲಂಕಾ ದ್ವೀಪವನ್ನು ಸೇತುವೆ ನಿರ್ಮಿಸಲು ಬಲಶಾಲಿ ಮತ್ತು ಪ್ರಬಲ ವ್ಯಕ್ತಿಗಳು ಪರ್ವತಗಳನ್ನು ಕೊಚ್ಚುವಾಗ, ಅದರ ಹಿಂದೆ ಅಳಿಲು ಅದನ್ನು ನೇರವಾಗಿ ನೆರವೇರಿಸಲು ಹೊರಟಿತೆಂದು ಕೇಳಿದ ಕಥೆಯನ್ನು ಕೇಳಿ, ಈ ಮೂರ್ತಿಯ ಕಲ್ಪನೆಗೆ ನಾನು ಬಂದಿದ್ದೇನೆ. ನಾನು ಈ ಅನುವಾದನೆಯನ್ನು ಹೊಂದುತ್ತಿದ್ದೇನೆ ಎಂದರೆ, ಸಮಾಜಕ್ಕೆ ಯೋಜನೆಯಿಲ್ಲದೆ ಯಾವುದೇ ವೃದ್ಧಿಗೆ ಸಹಕರಿಸುವ ಸಾರವನ್ನು ಮುಂದಿನ ಹೊಡೆತದಲ್ಲಿ ತರಬೇಕೆಂದು ನಾನು ನಿರ್ಧರಿಸಿದ್ದೇನೆ, ಅದರ ಅರ್ಥವನ್ನು ನಾನು ಹೊಂದುತ್ತಿದ್ದೇನೆ, ವ್ಯಕ್ತಿಗಳಾಗಿ ನಾವು ತಾತ್ಕಾಲಿಕರಾಗಿರಬಹುದು ಎಂದು ನಾವು ಅರಿತಿದ್ದೇವೆ, ನಾವು ನಮ್ಮ ಆಲೋಚನೆಗಳನ್ನು ಮತ್ತು ಕ್ರಿಯೆಗಳನ್ನು ದೊಡ ಉದ್ದೇಶಕ್ಕೆ ಮೀರಿ ಸರಿಸಿದರೆ, ಯಾವುದೇ ಸಮಾಜ ಕಾರ್ಯಕ್ಕೆ ಹಿನ್ನೆಲೆಯಾಗಬಹುದೆಂದು ನನ್ನ ಆಶಯ. ಈ ಶಿಲ್ಪವು 15 ಅಡಿ ಎತ್ತರವಾಗಿದೆ ಮತ್ತು ಸುಮಾರು 2.5 ಟನ್ಗಳಷ್ಟು ತೂಗುತ್ತದೆ (ವಿಧಾನ ಮತ್ತು ವಿನ್ಯಾಸದ ಕಾರಣದಿಂದಾಗಿ ತುಲನಾತ್ಮಕವಾಗಿ ಕಡಿಮೆ ತೂಕ), ಮತ್ತು ಮೇಲ್ಮೈಯಲ್ಲಿ 39;ತುಕ್ಕು39;ದಂತಹ ವರ್ಣವನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಿರುವ ಉಕ್ಕಿನ ಮಿಶ್ರಲೋಹವಾದ ಕಾರ್ಟೆನ್ನಿಂದ ಮಾಡಲ್ಪಟ್ಟಿದೆ. , ಇದು ವಸ್ತುವಿನೊಳಗೆ ತುಕ್ಕು ಹಿಡಿಯಾದಂತದ್ದು, ನಿರ್ವಹಣೆ ಮುಕ್ತ ಅನುಸ್ಥಾಪನೆಗೆ ಇದು ಸೂಕ್ತವಾದ ಆಯ್ಕೆಯಾಗಿದೆ. ಕಿತ್ತಳೆ ವರ್ಣವು ವಸ್ತುವಿನಲ್ಲಿನ ಕಬ್ಬಿಣದ ಆಕ್ಸಿಡೀಕರಣದಿಂದ ಉಂಟಾಗುತ್ತದೆ. ಈ ರೀತಿಯ ಶಿಲ್ಪವನ್ನು ರಚಿಸಲು ಸಾಮಾನ್ಯವಾಗಿ ಸುಮಾರು 40 ದಿನಗಳನ್ನು ತೆಗೆದುಕೊಳ್ಳುತ್ತಿದ್ದರೂ, ಕಲ್ಯಾಣ್ ಅವರು ಈ ಮಹತ್ವದ ಸಂದರ್ಭಕ್ಕೆ ಏರಿದರು ಮತ್ತು ಕೇವಲ 15 ದಿನಗಳಲ್ಲಿ ಇದನ್ನು ರಚಿಸಿದ್ದಾರೆ.





ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಆರ್ಥಿಕ ಬೆಳವಣಿಗೆ, ಮಕ್ಕಳಿಂದ ಸಹಕಾರ, ಅನಾರೋಗ್ಯ ಸಮಸ್ಯೆ, ಮಾತಿನಿಂದ ಸಮಸ್ಯೆ.

**ವೃಷಭ:** ಆರ್ಥಿಕ ಪ್ರಗತಿ, ಕೌಟುಂಬಿಕ ಸಹಕಾರ, ಮಾತಿನಿಂದ ಕಾರ್ಯಜಯ, ಪತ್ರ ವ್ಯವಹಾರಗಳಲ್ಲಿ ಸಮಸ್ಯೆ.

**ಮಿಥುನ:** ವ್ಯವಹಾರದಲ್ಲಿ ಹಿನ್ನಡೆ, ಮಕ್ಕಳಿಂದ ಅನಾನುಕೂಲ, ಆರೋಗ್ಯ ಸುಧಾರಣೆ, ಸರ್ಕಾರಿ ಅಧಿಕಾರಿಗಳಿಂದ ಅನುಕೂಲ.

**ಕಟಕ:** ಲಾಭದ ಪ್ರಮಾಣದಲ್ಲಿ ಕುಂಠಿತ, ವಿದ್ಯಾಭ್ಯಾಸದಲ್ಲಿ ಅನುಕೂಲ, ಕೌಟುಂಬಿಕ ಸಹಕಾರ, ಸಂಗಾತಿಯಿಂದ ಲಾಭ.

**ಸಿಂಹ:** ವ್ಯವಹಾರದಲ್ಲಿ ಯಶಸ್ಸು, ಸ್ಥಳ ಬದಲಾವಣೆಯಿಂದ ಅನುಕೂಲ, ಯತ್ನ ಕಾರ್ಯಗಳಲ್ಲಿ ಜಯ, ತಂದೆಯಿಂದ ಅನುಕೂಲ.

**ಕನ್ಯಾ:** ಆರ್ಥಿಕ ಬೆಳವಣಿಗೆ, ಆಕಸ್ಮಿಕ ಉದ್ಯೋಗ ಲಾಭ, ವಿದ್ಯಾಭ್ಯಾಸದಲ್ಲಿ ಬೆಳವಣಿಗೆ, ಮಾತಿನಿಂದ ಕಾರ್ಯ ಜಯ.

**ತುಲಾ:** ವ್ಯಾಪಾರದಲ್ಲಿ ಅವಕಾಶ, ಉನ್ನತ ವಿದ್ಯಾಭ್ಯಾಸದಲ್ಲಿ ಪ್ರಗತಿ, ಪ್ರಯಾಣದಲ್ಲಿ ಅನುಕೂಲ, ತಂದೆಯಿಂದ ಲಾಭ.

**ವೃಶ್ಚಿಕ:** ಉದ್ಯೋಗ ಬದಲಾವಣೆಯಿಂದ ಅನುಕೂಲ, ಆರೋಗ್ಯ ಸುಧಾರಣೆ, ಪಾಲುದಾರಿಕೆಯಲ್ಲಿ ತೊಂದರೆ, ದಾಂಪತ್ಯದಲ್ಲಿ ಮನಸ್ತಾಪ.

**ಧನಸ್ಸು:** ಆರ್ಥಿಕ ಬೆಳವಣಿಗೆ, ಶುಭ ಕಾರ್ಯದಲ್ಲಿ ಅನುಕೂಲ, ಪ್ರೀತಿ ಪ್ರೇಮ ವಿಷಯಗಳಲ್ಲಿ ಜಯ, ವಿದ್ಯಾಭ್ಯಾಸದಲ್ಲಿ ಅನುಕೂಲ.

**ಮಕರ:** ಯತ್ನ ಕಾರ್ಯಗಳಲ್ಲಿ ಅನಾನುಕೂಲ, ಕರ್ಮಫಲಗಳ ಕಾಟ, ವಾಹನ ಚಾಲನೆಯಲ್ಲಿ ಎಚ್ಚರಿಕೆ, ಅನಾರೋಗ್ಯ ಸಮಸ್ಯೆ.

**ಕುಂಭ:** ಸ್ಥಿರಾಸ್ತಿಯಿಂದ ಲಾಭ, ಪ್ರೀತಿ ಪ್ರೇಮ ಭಾವನೆಗಳಿಗೆ ಸ್ಪಂದನೆ, ರೋಗಭಾದೆಯಿಂದ ಮುಕ್ತಿ, ಶುಭ ಕಾರ್ಯ ಪ್ರಯತ್ನದಲ್ಲಿ ಯಶಸ್ಸು.

**ಮೀನ:** ಪತ್ರ ವ್ಯವಹಾರಗಳಲ್ಲಿ ಅನುಕೂಲ, ಕೆಲಸಗಾರರೊಂದಿಗೆ ಕಿರಿಕಿರಿ, ನೆರೆಹೊರೆಯವರೊಂದಿಗೆ ಮನಸ್ತಾಪ, ಆರೋಗ್ಯದಲ್ಲಿ ವ್ಯತ್ಯಾಸ.



# ರಾಷ್ಟ್ರೀಯ ಯುವ ದಿನ

ಪ್ರತಿ ವರ್ಷ ಜನವರಿ 12 ರಂದು ರಾಷ್ಟ್ರೀಯ ಯುವ ದಿನವನ್ನು ಆಚರಿಸಲಾಗುತ್ತದೆ. ಈ ದಿನ ಭಾರತದ ಯುವಕರನ್ನು ಮಾನಸಿಕ, ಬೌದ್ಧಿಕ ಮತ್ತು ದೈಹಿಕವಾಗಿ ಸದೃಢವಾಗಿರಲು ಪ್ರೇರೇಪಿಸಿದ ಸ್ವಾಮಿ ವಿವೇಕಾನಂದರಿಗೆ ಸಮರ್ಪಿತವಾಗಿದೆ. ಕಾರಣ ಜಗತ್ತಿಗೆ ಮೊದಲ ಬಾರಿಗೆ ತತ್ವಶಾಸ್ತ್ರ ಮತ್ತು ಆಧ್ಯಾತ್ಮಿಕತೆಯನ್ನು ಪರಿಚಯಿಸಿದ ವೀರ ಸನ್ಯಾಸಿಯ ಹುಟ್ಟಿದ ದಿನ ಕೂಡ ಜನವರಿ 12. ಇದೇ ದಿನವನ್ನು(ಜ.12) ವಿಶ್ವಸಂಸ್ಥೆ 1984 ರಲ್ಲಿ ಅಂತಾರಾಷ್ಟ್ರೀಯ ಯುವ ದಿನವನ್ನಾಗಿ ಘೋಷಣೆ ಮಾಡಿತ್ತು. ಇದರಿಂದ ಪ್ರೇರಿತವಾದ ಭಾರತ ಸರ್ಕಾರ 1984ರಲ್ಲಿ ಯುವ ದಿನವನ್ನು ಆಚರಿಸಲು ನಿರ್ಧರಿಸಿತು. ಆ ದಿನವನ್ನು ಯಾವ ಮಹಾನ್ ಸಾಧಕನ ಹೆಸರಲ್ಲಿ ಆಚರಿಸಬೇಕು ಎಂದು ಚಿಂತನೆಯಲ್ಲಿ ಹೊಳೆದದ್ದು, ಇಡೀ ಜಗತ್ತಿಗೆ ಭಾರತದ ಸಂಸ್ಕೃತಿ ಪರಿಚಯಿಸಿದ, ಯುವಕರ ಆದರ್ಶ ಪುರುಷ, ಸಿಡಿಲ ಸಂತ ವಿವೇಕಾನಂದರ ಜನ್ಮದಿನ. ಜನವರಿ 12 ಸ್ವಾಮೀ ವಿವೇಕಾನಂದರು ಜನ್ಮ ತಾಳಿದ ದಿನವಾಗಿರುವುದರಿಂದ 1984ರಿಂದ ಇದನ್ನು ನಿರಂತರವಾಗಿ 'ರಾಷ್ಟ್ರೀಯ ಯುವ ದಿನ' ಎಂದು ಪ್ರತಿವರ್ಷ ಆಚರಿಸಲಾಗುತ್ತದೆ. ಸ್ವಾಮೀ ವಿವೇಕಾನಂದರು ಹಿಂದೂ ಧರ್ಮವನ್ನು ಪಾಶ್ಚಿಮಾತ್ಯರಿಗೆ ಪರಿಚಯಿಸಲು ಮಹತ್ತರವಾದ ಕೊಡುಗೆಯನ್ನು ನೀಡಿದರು. ಅದರಲ್ಲೂ ವೇದಾಂತ ಮತ್ತು ಯೋಗ ಪರಂಪರೆಯನ್ನು ಪ್ರಸಿದ್ಧಗೊಳಿಸಿದ ಅವರು ಹಿಂದೂ ಧರ್ಮವನ್ನು ಆಧುನಿಕರಣಗೊಳಿಸಲು ಶ್ರಮಿಸಿದರು. ಬ್ರಿಟಿಷರ ವಸಾಹತುಶಾಹಿ ಭಾರತದಲ್ಲಿ ರಾಷ್ಟ್ರೀಯತೆಯ ತತ್ವವನ್ನು ಪ್ರಸರಿಸುವುದರ ಮೂಲಕ ವಿಕೇಂದ್ರೀಕೃತವಾಗಿದ್ದ ಹಿಂದೂ ಧರ್ಮಕ್ಕೆ ಐಕ್ಯತೆಯನ್ನು ತಂದರು. ವಿವೇಕಾನಂದರು ರಾಮಕೃಷ್ಣ ಮಠವನ್ನು ಸ್ಥಾಪಿಸುವುದರ ಮೂಲಕ ಸಾಮಾಜಿಕ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡರು. 1893 ರಲ್ಲಿ ಚಿಕ್ಯಾಗೋ ದಲ್ಲಿ ನಡೆದ ಜಾಗತಿಕ ಧಾರ್ಮಿಕ ಸಂಸತ್ತಿನಲ್ಲಿ 'ಅಮೆರಿಕಾದ ಸಹೋದರ ಸಹೋದರಿಯರೇ' ಎಂದು ನೀಡಿದ ಭಾಷಣ ಇಂದಿಗೂ ಕೂಡ ಪ್ರಸಿದ್ದಿಯಾಗಿದೆ. ಸ್ವಾಮೀ ವಿವೇಕಾನಂದರ ಚಿಂತನೆಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವ ನಿಟ್ಟಿನಲ್ಲಿ ಭಾರತ ಸರ್ಕಾರ ವಿವೇಕಾನಂದರ ಜನ್ಮ ದಿನವನ್ನು 'ರಾಷ್ಟ್ರೀಯ ಯುವ ದಿನ' ಎಂದು ಆಚರಿಸುವ ಮೂಲಕ ಅವರ ಚಿಂತನೆಗಳನ್ನು ಪ್ರಸ್ತುತವಾಗಿರಿಸಲಾಗಿದೆ. 2013 ಜನವರಿ 13 ರಂದು ಮಾಜಿ ಪ್ರಧಾನ ಮಂತ್ರಿ ಮನಮೋಹನ್ ಸಿಂಗ್ ರವರು ವಿವೇಕಾನಂದರ 150 ಜನ್ಮದಿನ ವಾರ್ಷಿಕೋತ್ಸವ ಸಂದರ್ಭದಲ್ಲಿ ಮಾತನಾಡುತ್ತಾ ವಿವೇಕಾನಂದರ ಚಿಂತನೆಗಳನ್ನು ಶ್ಲಾಘಿಸಿ ಅವುಗಳನ್ನು ಮುಂದಿನ ಯುವ ಪೀಳಿಗೆಗೆ ತಲುಪಿಸಬೇಕಾಗಿದೆ ಎಂದರು.

## ಮಹುವಾ ಮೊಯಿತ್ರಾಗೆ ನೋಟಿಸ್



**ದೆಹಲಿ:** ಸರ್ಕಾರಿ ಬಂಗಲೆಯನ್ನು ಖಾಲಿ ಮಾಡಿ ಎಂದು ಅನರ್ಹಗೊಂಡ ಸಂಸದೆ ಮಹುವಾ ಮೊಯಿತ್ರಾ ಅವರಿಗೆ ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು ಹೊಸ ನೋಟಿಸ್ ನೀಡಿದೆ. ಡೈರೆಕ್ಟರೇಟ್ ಆಫ್ ಎಸ್ಟೇಟ್ಸ್ (ಆಅಇ) ಮುಂದೆ ಹಾಜರಾಗಲು ಆಕೆಗೆ ಜನವರಿ 16 ರವರೆಗೆ ಕಾಲಾವಕಾಶ ನೀಡಲಾಗಿದೆ. ಕಳೆದ ವರ್ಷ ಡಿಸೆಂಬರ್ 8 ರಂದು ಲೋಕಸಭೆಯಿಂದ ಉಚ್ಚಾಟಿಸಲ್ಪಟ್ಟ ತೃಣಮೂಲ ಕಾಂಗ್ರೆಸ್ ನಾಯಕಿ, ಅವರ ಹಂಚಿಕೆಯನ್ನು ರದ್ದುಗೊಳಿಸಿದ ನಂತರ ಜನವರಿ 7 ರೊಳಗೆ ಮನೆಯನ್ನು ಖಾಲಿ ಮಾಡುವಂತೆ ಈ ಹಿಂದೆ ಕೇಳಲಾಗಿತ್ತು. ಜನವರಿ 4 ರಂದು, ದೆಹಲಿ ಹೈಕೋರ್ಟ್ ಮೊಯಿತ್ರಾ ಅವರಿಗೆ ಮಂಜೂರು ಮಾಡಲಾದ ಸರ್ಕಾರಿ ವಸತಿಗಳನ್ನು ಬಳಸಲು ಅವಕಾಶ ನೀಡುವ ವಿನಂತಿಯೊಂದಿಗೆ ಆಅಇ ಅನ್ನು ಸಂಪರ್ಕಿಸುವಂತೆ ಕೇಳಿತು. ಪ್ರಶ್ನೆಗಾಗಿ ನಗದು ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಸಭೆಯಿಂದ ಉಚ್ಚಾಟನೆಗೊಂಡ ಬಳಿಕ ಮಹುವಾ ಮೊಯಿತ್ರಾ ಅವರಿಗೆ ಮಂಜೂರಾಗಿದ್ದ ಮನೆಯನ್ನು ಖಾಲಿ ಮಾಡುವಂತೆ ನೋಟೀಸ್ ನೀಡಲಾಗಿತ್ತು. ಈ ನೋಟಿಸ್ ವಿರುದ್ಧ ಮಹುವಾ ಮೊಯಿತ್ರಾ ಅವರು ದೆಹಲಿ ಹೈಕೋರ್ಟ್ ಮೊರೆ ಹೋಗಿದ್ದರು. ಈ ಅರ್ಜಿಯನ್ನು ವಿಚಾರಣೆ ನಡೆಸಿದ ದೆಹಲಿ ಹೈಕೋರ್ಟ್ ಅರ್ಜಿಯನ್ನು ವಜಾಗೊಳಿಸಿತ್ತು.

# ಅಪಘಾತ; ಅಪಾಯದಿಂದ ಪಾರಾದ ಮೆಹಬೂಬಾ ಮುಫ್ತಿ



**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಸಂಗಮ್‌ನಲ್ಲಿ ಪಿಡಿಪಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಅವರ ಕಾರು ಅಪಘಾತಕ್ಕೀಡಾಗಿದ್ದು, ಗುರುವಾರ ಸ್ವಲ್ಪದರಲ್ಲೇ ಅಪಾಯದಿಂದ ಪಾರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಂಗಮ್‌ನಲ್ಲಿ ಮುಫ್ತಿ ಅವರ ಕಾರು ನಾಗರಿಕರ ಕಾರಿಗೆ ಡಿಕ್ಕಿ ಹೊಡೆದಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಬೆಂಕಿ ಅವಘಡವೊಂದರ ಸಂತ್ರಸ್ತರನ್ನು ಭೇಟಿ ಮಾಡಲು ಖಾನಬಾಲ್ಗೆ ತೆರಳುತ್ತಿದ್ದ ಮುಫ್ತಿ ಅವರಿಗೆ ಯಾವುದೇ ಗಾಯಗಳಾಗಿಲ್ಲ. ಆದರೆ, ಅವರ ವೈಯಕ್ತಿಕ ಭದ್ರತೆಯಲ್ಲಿದ್ದ ಪೊಲೀಸ್ ಅಧಿಕಾರಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಅಧಿಕಾರಿ ತಿಳಿಸಿದ್ದಾರೆ. ಅಪಘಾತದಲ್ಲಿ ಮುಫ್ತಿ ಅವರ ವಾಹನಕ್ಕೆ ತೀವ್ರ ಹಾನಿಯಾಗಿದೆ.

ಅಪಘಾತದ ನಂತರ ಮುಫ್ತಿ ಅವರು ಮತ್ತೊಂದು ಕಾರಿನಲ್ಲಿ ತಮ್ಮ ನಿಗದಿತ ಭೇಟಿಗೆ ತೆರಳಿದರು. ಮುಫ್ತಿ ಸುರಕ್ಷಿತವಾಗಿದ್ದು, ಯಾವುದೇ ಗಾಯಗಳಾಗಿಲ್ಲ ಎಂದು ಪೀಪಲ್ಸ್ ಡೆಮಾಕ್ರಟಿಕ್ ಪಾರ್ಟಿ (ಪಿಡಿಪಿ) ವಕ್ತಾರರು ತಿಳಿಸಿದ್ದಾರೆ. ಪಿಡಿಪಿ ಅಧ್ಯಕ್ಷರ ಮಾಧ್ಯಮ ಸಲಹೆಗಾರರಾಗಿರುವ ಮುಫ್ತಿ ಅವರ ಪುತ್ರಿ ಇಲ್ತಿಜಾ ಮುಫ್ತಿ ಅವರು, ತಮ್ಮ ತಾಯಿ ಸುರಕ್ಷಿತವಾಗಿದ್ದಾರೆ ಎಂದು ಖಚಿತಪಡಿಸಿದ್ದಾರೆ. 'ಇಂದು ಅನಂತನಾಗ್ ಮಾರ್ಗವಾಗಿ ಸಂಚರಿಸುತ್ತ ವೇಳೆ ಮುಫ್ತಿ ಅವರ ಕಾರು ಭೀಕರ ಅಪಘಾತಕ್ಕೆ ಒಳಗಾಯಿತು.

ದೇವರ ಕೃಪೆಯಿಂದಾಗಿ ಆಕೆ ಮತ್ತು ಆಕೆಯ ಭದ್ರತಾ ಅಧಿಕಾರಿಗಳು ಯಾವುದೇ ಗಂಭೀರ ಗಾಯಗಳಿಲ್ಲದೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ' ಎಂದು ಇಲ್ತಿಜಾ ಮುಫ್ತಿ ಟ್ವೀಟ್ ಮಾಡಿದ್ದಾರೆ

## ಆಪಲ್ ಹಿಂದಿಕ್ಕಿದ ಮೈಕ್ರೋಸಾಫ್ಟ್




**ನವದೆಹಲಿ:** ಆಪಲ್'ಗೆ ಬಿಗ್ ಶಾಕಿಂಗ್ ಸುದ್ದಿ ಸಿಕ್ಕಿದ್ದು, ಆಪಲ್ ಹಿಂದಿಕ್ಕಿ ವಿಶ್ವದ ಅತ್ಯಂತ ಮೌಲ್ಯಯುತ ಕಂಪನಿಯಾಗಿ ಮೈಕ್ರೋಸಾಫ್ಟ್ ಹೊರಹೊಮ್ಮಿದೆ. ವಾಷಿಂಗ್ಟನ್ ಮೂಲದ ಮೈಕ್ರೋಸಾಫ್ಟ್ ರೆಡ್ಮಂಡ್ನ ಷೇರುಗಳು 1.5% ರಷ್ಟು ಏರಿಕೆಯಾಗಿದ್ದು, 2.888 ಟ್ರಿಲಿಯನ್ ಡಾಲರ್ ಮಾರುಕಟ್ಟೆ ಮೌಲ್ಯವನ್ನು ನೀಡಿದೆ. ಆಪಲ್ 2.887 ಟ್ರಿಲಿಯನ್ ಡಾಲರ್ ಮಾರುಕಟ್ಟೆ ಬಂಡವಾಳೀಕರಣದೊಂದಿಗೆ 0.3% ಕಡಿಮೆಯಾಗಿದೆ – 2021 ರ ನಂತರ ಮೊದಲ ಬಾರಿಗೆ ಅದರ ಮೌಲ್ಯವು ಮೈಕ್ರೋಸಾಫ್ಟ್ಗಿಂತ ಕಡಿಮೆಯಾಗಿದೆ. ಕ್ಯಾಲಿಫೋರ್ನಿಯಾ ಮೂಲದ ಕಂಪನಿಯ ಕ್ಯುಪರ್ಟಿನೊ ಮೈಕ್ರೋಸಾಫ್ಟ್‌ನಲ್ಲಿ 1.8% ಏರಿಕೆಗೆ ಹೋಲಿಸಿದರೆ, ಕಳೆದ ಮುಕ್ತಾಯದ ವೇಳೆಗೆ ಜನವರಿಯಲ್ಲಿ ಇಲ್ಲಿಯವರೆಗೆ 3.3% ರಷ್ಟು ಕುಸಿದಿದೆ.ಆಪಲ್‌ನಲ್ಲಿನ ದೌರ್ಬಲ್ಯವು ರೇಟಿಂಗ್ ಡೌನ್ಗ್ರೇಡ್ಗಳ ಸರಣಿಯನ್ನು ಅನುಸರಿಸುತ್ತದೆ, ಇದು ಅದರ ಅತಿದೊಡ್ಡ ನಗದು ಹಸುವಾದ ಐಫೋನ್ನ ಮಾರಾಟವು ದುರ್ಬಲವಾಗಿ ಉಳಿಯುತ್ತದೆ ಎಂಬ ಆತಂಕವನ್ನ ಹುಟ್ಟುಹಾಕಿದೆ, ವಿಶೇಷವಾಗಿ ಪ್ರಮುಖ ಮಾರುಕಟ್ಟೆ ಚೀನಾದಲ್ಲಿ. ಮುಂಬರುವ ವರ್ಷಗಳಲ್ಲಿ ಚೀನಾ ಕಾರ್ಯಕ್ಷಮತೆಯ ಮೇಲೆ ಎಳೆಯಬಹುದು ಎಂದು ಬ್ರೋಕರೇಜ್ ರೆಡ್ಬರ್ನ್ ಅಟ್ಲಾಂಟಿಕ್ ಬುಧವಾರ ಗ್ರಾಹಕರ ಟಿಪ್ಪಣಿಯಲ್ಲಿ ಹೇಳಿದೆ, ಪುನರುಜ್ಜೀವನಗೊಂಡ ಹುವಾವೇ ಮತ್ತು ಚೀನಾ–ಯುಎಸ್ನಿಂದ ಸ್ಪರ್ಧೆಯನ್ನು ಸೂಚಿಸುತ್ತದೆ.

## ಇಮ್ರಾನ್ ಪಕ್ಷದ ಮುಖಂಡನ ಗುಂಡಿಕ್ಕಿ ಹತ್ಯೆ

**ಪೇಷಾವರ:** ಪಾಕಿಸ್ತಾನದ ಪ್ರಕ್ಷುಬ್ಧ ಖೈಬರ್ ಪಖ್ತೂಂಕ್ವಾ ಪ್ರಾಂತದಲ್ಲಿ ಗುರುವಾರ ಮಾಜಿ ಪ್ರಧಾನಿ ಇಮ್ರಾನ್ಖಾನ್ ಅವರ ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್ (ಪಿಟಿಐ) ಪಕ್ಷದ ಮುಖಂಡ ಶಾ ಖಾಲಿದ್ರನ್ನು ಗುಂಡಿಕ್ಕಿ ಹತ್ಯೆ ಮಾಡಿರುವುದಾಗಿ ವರದಿಯಾಗಿದೆ. ಖೈಬರ್ ಪಖ್ತೂಂಕ್ವಾದ ಸ್ವಾಬಿ ಜಿಲ್ಲೆಯಲ್ಲಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಖಾಲಿದ್ ಅವರನ್ನು ಬೈಕ್ನಲ್ಲಿ ಹಿಂಬಾಲಿಸಿಕೊಂಡು ಬಂದ ಗುರುತಿಸಲಾಗದ ಹಂತಕರು ಕಾರನ್ನು ಅಡ್ಡಗಟ್ಟಿ ಗುಂಡಿನ ದಾಳಿ ನಡೆಸಿದ್ದಾರೆ. ಖಾಲಿದ್ ಸ್ಥಳದಲ್ಲೇ ಮೃತಪಟ್ಟಿದ್ದು ದುಷ್ಕರ್ಮಿಗಳು ಪರಾರಿಯಾಗಿದ್ದಾರೆ ಎಂದು 'ಜಿಯೊ ನ್ಯೂಸ್' ವರದಿ ಮಾಡಿದೆ.



# ಲಕ್ಷದ್ವೀಪಕ್ಕೆ ಭಾರೀ ಬೇಡಿಕೆ



**ಲಕ್ಷದ್ವೀಪ:** ಪ್ರಧಾನಿ ಮೋದಿ ಲಕ್ಷದ್ವೀಪಕ್ಕೆ ಭೇಟಿ ನೀಡಿದ ಫೋಟೊಗಳು ವೈರಲ್ ಆದ ಬೆನ್ನಲ್ಲೆ ದ್ವೀಪ ರಾಜ್ಯಕ್ಕೆ ಭಾರೀ ಬೇಡಿಕೆ ಬಂದಿದ್ದು, ಮಾರ್ಚ್‌ವರೆಗೆ ವಿಮಾನದ ಟಿಕೆಟ್ಗಳು ಸೋಲ್ಡ್ ಔಟ್ ಆಗಿದೆ.

ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಲಕ್ಷ ದ್ವೀಪದಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಬೆನ್ನಲ್ಲೇ ದ್ವೀಪ ರಾಜ್ಯಕ್ಕೆ ಭೇಟಿ ನೀಡಿದ್ದ ಅನೇಕ ಫೋಟೋಗಳು ವೈರಲ್ ಆಗಿತ್ತು.

ಈ ಬೆನ್ನಲ್ಲೇ ಮಾಲ್ಡೀವ್ಸ್ ಸರ್ಕಾರದ ಅನೇಕ ಸಚಿವರು ಮೋದಿಯನ್ನು ಟೀಕಿಸಿದ್ದರು. ಅದಾದ ಬಳಿಕ ದೇಶದಲ್ಲಿ ಬಾಯ್ಕಾಟ್ ಮಾಲ್ಡೀವ್ಸ್ ಕರೆ ಹೆಚ್ಚಾಗಿದ್ದು, ಪ್ರವಾಸಿಗರು ಲಕ್ಷ ದ್ವೀಪದತ್ತ ಮುಖ ಮಾಡಿದ್ದಾರೆ.

ಈ ಬೆನ್ನಲ್ಲೇ ಲಕ್ಷದ್ವೀಪಕ್ಕೆ ಹೋಗುವ ವಿಮಾನ ಟಿಕೆಟ್ಗಳು ಮಾರ್ಚ್ ತಿಂಗಳ ಅಂತ್ಯದವರೆಗೂ ಸಂಪೂರ್ಣವಾಗಿ ಮಾರಾಟವಾಗಿವೆ. ಜೊತೆಗೆ ಅನೇಕ ಉದ್ಯಮಿಗಳು ಲಕ್ಷದ್ವೀಪದಲ್ಲಿ ಹೋಟೆಲ್ಗಳನ್ನು ನಿರ್ಮಿಸಲು ಸೈಟ್ಗಳ ಹುಡುಕಾಟದಲ್ಲಿದ್ದಾರೆ.

ಲಕ್ಷದ್ವೀಪವು ದೇಶದ ಇತರ ಭಾಗಗಳಿಗೆ ಸರಿಯಾಗಿ ಸಂಪರ್ಕ ಹೊಂದಿಲ್ಲ. ಲಕ್ಷದ್ವೀಪದಲ್ಲಿ ಅಲಯನ್ಸ್ ಏರ್ ಎಂಬ ಒಂದೇ ಒಂದು ವಿಮಾನಯಾನ ಸಂಸ್ಥೆಯು ಕಾರ್ಯನಿರ್ವಹಿಸುತ್ತಿದೆ. ಇದು ಕೇರಳದ ಕೊಚ್ಚಿ (ಕೊಚ್ಚಿನ್) ಮತ್ತು ಲಕ್ಷದ್ವೀಪದಲ್ಲಿ ಏರ್‌ಸ್ಟ್ರಿಪ್ ಹೊಂದಿರುವ ಏಕೈಕ ದ್ವೀಪವಾದ ಅಗಟ್ಟಿ ವಿಮಾನ ನಿಲ್ದಾಣದಲ್ಲಿ ಇಳಿಯಲಿದೆ.



# ಅಜ್ಮೀರ್ ಷರೀಫ್ ದರ್ಗಾಕ್ಕೆ ಚಾದರ್ ಉಡುಗೊರೆಯಾಗಿ ನೀಡಿದ ಮೋದಿ



**ದೆಹಲಿ:** ಸೂಫಿ ಸಂತ ಮೊಯಿನುದ್ದೀನ್ ಚಿಶ್ತಿ ಅವರ ಪುಣ್ಯಸ್ಮರಣೆಯ ಕಾರ್ಯಕ್ರಮದ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಮುಸ್ಲಿಂ ಸಮುದಾಯದ ನಿಯೋಗದೊಂದಿಗೆ ಸಂವಾದ ನಡೆಸಿದ್ದು ಅವರಿಗೆ ಅಜ್ಮೀರ್ ಷರೀಫ್ ದರ್ಗಾಕ್ಕೆ ಅರ್ಪಿಸಲು ಉದ್ದೇಶಿಸಿರುವ 'ಚಾದರ್' ಅನ್ನು ಉಡುಗೊರೆಯಾಗಿ ನೀಡಿದರು.

ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಚಿತ್ರಗಳನ್ನು ಹಂಚಿಕೊಂಡ ಮೋದಿ, ಮುಸ್ಲಿಂ ಸಮುದಾಯದ ನಿಯೋಗವನ್ನು ಭೇಟಿಯಾದೆ. ನಮ್ಮ ಸಂವಾದದ ಸಮಯದಲ್ಲಿ, ನಾನು ಪವಿತ್ರ ಚಾದರ್ ಅನ್ನು ನೀಡಿದ್ದು ಇದನ್ನು ಗೌರವಾನ್ವಿತ ಅಜ್ಮೀರ್ ಷರೀಫ್ ದರ್ಗಾದಲ್ಲಿ ಖ್ವಾಜಾ ಮೊಯಿನುದ್ದೀನ್ ಚಿಸ್ತಿಯ ಉರೂಸ್ ಸಮಯದಲ್ಲಿ ಇರಿಸಲಾಗುವುದು ಎಂದಿದ್ದಾರೆ.

ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವೆ ಸ್ಮೃತಿ ಇರಾನಿ ಮತ್ತು ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾದ ಅಧ್ಯಕ್ಷ ಜಮಾಲ್ ಸಿದ್ದಿಕಿ ಕೂಡ ಸಭೆಯಲ್ಲಿ ಭಾಗವಹಿಸಿದ್ದರು.

ಮೋದಿ ಅವರು ಹಂಚಿಕೊಂಡ ಚಿತ್ರಗಳಲ್ಲಿ, ಪ್ರಧಾನಿ ಅವರು ನಿಯೋಗದೊಂದಿಗೆ ಮಾತನಾಡುತ್ತಿರುವುದು ಮತ್ತು ಅವರಿಗೆ 'ಚಾದರ್' ನೀಡುತ್ತಿರುವುದನ್ನು ಕಾಣಬಹುದು. ಸುಮಾರು 10 ಸದಸ್ಯರನ್ನೊಳಗೊಂಡ ನಿಯೋಗವು ಪ್ರಧಾನಮಂತ್ರಿ ಮತ್ತು ಚಾದರ್ ಜತೆ ಪೋಸ್ ನೀಡಿದೆ. ಖ್ವಾಜಾ ಮೊಯಿನುದ್ದೀನ್ ಚಿಶ್ತಿಯ 812 ನೇ ವಾರ್ಷಿಕ ಉರೂಸ್ ಜನವರಿ 8 ರಂದು ಪ್ರಾರಂಭವಾಯಿತು. ಭಿಲ್ವಾರಾದ ಗೋರಿ ಕುಟುಂಬವು ಜನವರಿ 7 ರಂದು ಧ್ವಜಾರೋಹಣ ಮಾಡಿದೆ ಎಂದು ಟೈಮ್ಸ್ ಆಫ್ ಇಂಡಿಯಾ ವರದಿ ಮಾಡಿದೆ.

# ಅರಬ್ ಕಂಟ್ರಿಯಲ್ಲಿ ಮೊದಲ ಹಿಂದೂ ದೇವಸ್ಥಾನ ಪ್ರಧಾನಿ ಮೋದಿ ಅವರಿಂದ ಲೋಕಾರ್ಪಣೆ




**ದೆಹಲಿ:** ಅರಬ್ ದೇಶವಾದ ಅಬುದಾಬಿಯಲ್ಲಿ ಇದೇ ವರ್ಷಾ ಫೆಬ್ರವರಿ 14ರಂದು ಹಿಂದೂ ದೇವಾಲಯ ಲೋಕಾರ್ಪಣೆಗೊಳ್ಳಲಿದೆ. ರಾಮಮಂದಿರ ಉದ್ಘಾಟನೆ ಬಿಟ್ಟರೆ, ಹಿಂದೂಗಳಿಗೆ ಇದು ಈ ವರ್ಷದ ಎರಡನೇಯ ಹೆಮ್ಮೆಯ ವಿಷಯವಾಗಿದೆ. ಏಕೆಂದರೆ, ಈ ದೇವಸ್ಥಾನ ಅರಬ್ ಕಂಟ್ರಿಯಲ್ಲಿ ಉದ್ಘಾಟನೆಯಾಗಲಿರುವ ಮೊದಲ ಹಿಂದೂ ದೇವಸ್ಥಾನವಾಗಿದೆ. ಅಬುದಾಬಿಯ ಮೊದಲ ಬಿಎಪಿಎಸ್ ಹಿಂದೂ ದೇವಾಲಯ ಇದಾಗಿದ್ದು, ಅಬು ಮುರೇಖಾ ಪ್ರದೇಶದಲ್ಲಿ ಇದನ್ನು ನಿರ್ಮಾಣ ಮಾಡಲಾಗಿದೆ. 2015ರಲ್ಲಿ ಮೋದಿ ಮೊದಲ ಬಾರಿ ಪ್ರಧಾನಿಯಾಗಿದ್ದಾಗ, ಅಬುದಾಬಿಗೆ ಭೇಟಿ ನೀಡಿದ್ದರು. ಇಂದಿರಾಗಾಂಧಿ ಬಳಿಕ ಈ ರಾಷ್ಟ್ರಕ್ಕೆ ಭೇಟಿ ನೀಡಿದ ಪ್ರಧಾನಿ ಅಂದ್ರೆ, ಅದು ನರೇಂದ್ರ ಮೋದಿ. ಆಗಲೇ ಅವರು ಹಿಂದೂ ದೇವಸ್ಥಾನಕ್ಕಾಗಿ ಜಾಗ ಮಂಜೂರಿಗೆ ಮನವಿ ಮಾಡಿ ಬಂದಿದ್ದರು. 2018ರಲ್ಲಿ ಮೋದಿ ಪುನಃ ಅಬುದಾಬಿಗೆ ಹೋಗಿ, ಅಲ್ಲಿ 700 ಕೋಟಿ ರೂಪಾಯಿ ವೆಚ್ಚದ ದೇವಸ್ಥಾನದ ನಿರ್ಮಾಣಕ್ಕೆ ಯೋಜನೆ ಉದ್ಘಾಟಿಸಿ ಬಂದಿದ್ದರು. ಇದೀಗ ಅಬುದಾಬಿಯಲ್ಲಿ ಭವ್ಯ ಹಿಂದೂ ಮಂದಿರ ನಿರ್ಮಾಣವಾಗಿದೆ. ಫೆಬ್ರವರಿ 14ರಂದು ವಸಂತ ಪಂಚಮಿ ಇದ್ದು, ಆ ದಿನ ಪ್ರಧಾನಿ ಮೋದಿ, ಈ ಹಿಂದೂ ದೇವಾಲಯವನ್ನು ಉದ್ಘಾಟನೆ ಮಾಡಲಿದ್ದಾರೆ.

## ನಿಂಬೆಹಣ್ಣು ನುಂಗಿ ಮಗು ಸಾವು

**ಆಂಧ್ರಪ್ರದೇಶ:** ಆಂಧ್ರಪ್ರದೇಶದ ಅನಂತಪುರಂನಲ್ಲಿ ಮನೆಯಲ್ಲಿ ಆಟವಾಡುತ್ತಾ ಮಗುವೊಂದು ನಿಂಬೆಹಣ್ಣು ನುಂಗಿದ ಪರಿಣಾಮ ಉಸಿರುಗಟ್ಟಿ ಮೃತಪಟ್ಟಿರುವ ದಾರುಣ ಘಟನೆ ಜರುಗಿದೆ. ಸಾಕಿದೀಪ ಮತ್ತು ಗೋವಿಂದರಾಜ್ ದಂಪತಿಯ ಜಸ್ವಿತಾ (9 ತಿಂಗಳು) ಮೃತ ಮಗು. ಎಂದಿನಂತೆ ಮನೆಯಲ್ಲಿ ಆಡುತ್ತಾ ಮನೆಯಲ್ಲಿತ್ತು. ತಾಯಿ ಮಗುವನ್ನು ನೋಡುತ್ತಾ , ಮತ್ತೊಂದು ಕಡೆ ಕೆಲಸದಲ್ಲಿ ನಿರತರಾಗಿದ್ದರು. ಈ ವೇಳೆ ಮಗು ಜಗಲಿಯಲ್ಲಿದ್ದ ನಿಂಬೆಹಣ್ಣನ್ನು ಹಿಡಿದು ನುಂಗಿದೆ. ಆ ಬಳಿಕ ಮಗುವಿನ ಉಸಿರಾಟದಲ್ಲಿ ತೊಂದರೆ ಆಗಿದೆ. ಕೂಡಲೇ ತಾಯಿ ಗಂಟಲಿನಲ್ಲಿ ಸಿಲುಕಿದ್ದ ನಿಂಬೆಹಣ್ಣನ್ನು ತೆಗೆಯಲು ಯತ್ನಿಸಿ, ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದಾರೆ. ಆಸ್ಪತ್ರೆಯಲ್ಲಿ ವೈದ್ಯರು ಪರಿಕ್ಷೀಸಿದ ಬಳಿಕ ಆದಾಗಲೇ ಮಗು ಮೃತಪಟ್ಟಿದೆ ಎಂದಿದ್ದಾರೆ. ಸಾಕಿದೀಪ ಮತ್ತು ಗೋವಿಂದರಾಜ್ ದಂಪತಿಗೆ ಮದುವೆಯಾದ 7 ವರ್ಷದ ಬಳಿಕ ಮಗು ಜನಿಸಿತ್ತು. ಆದರೆ ಇಂತಹ ಆಕಸ್ಮಿಕ ದುರಂತದಲ್ಲಿ ಮಗು ಮೃತಪಟ್ಟಿದೆ.



# ಎಕ್ಸ್‌ಸಂಸ್ಥೆ :1 ಸಾವಿರ ಉದ್ಯೋಗಿಗಳಿಗೆ ಗೇಟ್‌ಪಾಸ್



**ದೆಹಲಿ:** ವಿಶ್ವದ ನಂಬರ್ 1 ಶ್ರೀಮಂತ್ ಎಲಾನ್ ಮಸ್ಕ್ ಮಾಲೀಕತ್ವದ ಎಕ್ಸ್ ಸಂಸ್ಥೆಯ ಸುರಕ್ಷತಾ ವಿಭಾಗದಿಂದ 1 ಸಾವಿರ ಉದ್ಯೋಗಿಗಳನ್ನು ಮನೆಗೆ ಕಳಿಸಲಾಗಿದೆ. ಟ್ವೀಟರ್‌ನಲ್ಲಿ ಬರುತ್ತಿದ್ದ ದ್ವೇಷದ ಪೋಸ್ಟ್ಗಳು, ನಿಂದನೆಗಳ ಟ್ವೀಟ್ಗಳನ್ನು ಗಮನಿಸುತ್ತಿದ್ದ ಸುರಕ್ಷತಾ ವಿಭಾಗದಿಂದ 1 ಸಾವಿರ ಜನರಿಗೆ ಗೇಟ್ ಪಾಸ್ ನೀಡಲಾಗಿದೆ. ಏಕೆಂದರೆ, ಇವರೆಲ್ಲ ತಮ್ಮ ಜವಾಬ್ದಾರಿಯನ್ನು ನಿಭಾಯಿಸುವಲ್ಲಿ ವಿಫಲರಾಗಿದ್ದರೆಂಬ ಕಾರಣ ಕೊಟ್ಟಿರುವ ಸಂಸ್ಥೆ, ಇಷ್ಟು ಜನರನ್ನು ಕೆಲಸದಿಂದ ಕಿತ್ತು ಹಾಕಿದೆ. ಆದರೆ ಹೀಗೆ ಸುರಕ್ಷತಾ ತಂಡದವರನ್ನು ತೆಗೆದು ಹಾಕಿದ ಪರಿಣಾಮ, ಟ್ವಿಟರ್‌ನಲ್ಲಿ ಇನ್ನೂ ಹೆಚ್ಚು ದ್ವೇಷಪೂರಿತ ಟ್ವೀಟ್ಗಳು ಹರಿದಾಡುವುದು ಹೆಚ್ಚಾಗಿದೆ ಎಂದು ವರದಿಯಾಗಿದೆ. ಅಷ್ಟೇ ಅಲ್ಲದೇ, ಮಕ್ಕಳ ಅಶ್ಲೀಲ ಫೋಟೋಗಳನ್ನು ಎಕ್ಸ್‌ನಿಂದ ತೆಗೆಯಲು, ಈ ಸೇಫ್ಟಿ ಕಮಿಷನ್ ಸಮಯ ಕೂಡ ನೀಡಿತ್ತು. ಆದರೆ ಆ ಫೋಟೋಗಳನ್ನು ತೆಗೆಯದ ಕಾರಣ, ಎಕ್ಸ್ ಸಂಸ್ಥೆಗೆ 3,88,000 ಸಾವಿರ ಡಾಲರ್ ದಂಡ ವಿಧಿಸಿತ್ತು. ಆದರೆ ಇನ್ನೂ ಕೂಡ ಎಕ್ಸ್ ಸಂಸ್ಥೆ ಈ ದಂಡ ಕಟ್ಟಲಿಲ್ಲ. ಅಲ್ಲದೇ, ದಂಡ ರದ್ದುಪಡಿಸಲು ಕೋರ್ಟ್ ಮೊರೆ ಹೋಗಿದೆ.

# ಒಂದು ರಾಷ್ಟ್ರ, ಒಂದು ಚುನಾವಣೆ ಸ್ವೀಕಾರಾರ್ಹವಲ್ಲ



**ಕೋಲ್ಕತ್ತಾ:** 'ಒಂದು ರಾಷ್ಟ್ರ, ಒಂದು ಚುನಾವಣೆ' ಕಲ್ಪನೆಯು ಪ್ರಾಯೋಗಿಕವಾಗಿ ಜಾರಿಗೊಳಿಸುವುದು ಸಾಧ್ಯವಿಲ್ಲ. ಹೀಗಾಗಿ ಇದು ಸ್ವೀಕಾರಾರ್ಹವಲ್ಲ ಎಂದು ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮತ್ತು ತೃಣಮೂಲ ಕಾಂಗ್ರೆಸ್ ವರಿಷ್ಠೆ ಮಮತಾ ಬ್ಯಾನರ್ಜಿ ಹೇಳಿದರು.

ಒಂದು ರಾಷ್ಟ್ರ, ಒಂದು ಚುನಾವಣೆ ಕಲ್ಪನೆಯ ಅನುಷ್ಠಾನಕ್ಕೆ ಸಲಹೆಗಳನ್ನು ಕೋರಿ ಉನ್ನತ ಮಟ್ಟದ ಸಮಿತಿಯ ಕಾರ್ಯದರ್ಶಿ ಡಾ. ನಿತೇನ್ ಚಂದ್ರ ಅವರಿಗೆ ಪತ್ರವನ್ನು ಕಳುಹಿಸಿದ ಬಳಿಕ ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವಿಷಯವನ್ನು ಪರಿಶೀಲಿಸುವಂತೆ ಭಾರತೀಯ ಚುನಾವಣಾ ಆಯೋಗವನ್ನು ವಿನಂತಿಸುವುದಾಗಿ ತಿಳಿಸಿದರು. ಇದು ಪ್ರಾಯೋಗಿಕವಾಗಿ ಸ್ವೀಕಾರಾರ್ಹವಲ್ಲ. ಇದು ನಮ್ಮ ಧ್ವನಿ ಮಾತ್ರವಲ್ಲ, ಭಾರತದ ಧ್ವನಿ. ನಾವು ನಮ್ಮ ರಾಜ್ಯ ನೀತಿ, ಕೇಂದ್ರ ನೀತಿ, ರಾಜ್ಯ ರಚನೆ, ನಮ್ಮ ಫೆಡರಲ್ ರಚನೆಯನ್ನು ನೋಡಬೇಕು ಎಂದು ಅವರು ಹೇಳಿದರು.



## 2026ರಲ್ಲಿ ದೇಶದ ಮೊಟ್ಟಮೊದಲ ಬುಲೆಟ್ ಟ್ರೈನ್ ಕಾರ್ಯಾರಂಭ

**ದೆಹಲಿ:** ದೇಶದ ಮೊಟ್ಟಮೊದಲ ಬುಲೆಟ್ ಟ್ರೈನ್ 2026ರಲ್ಲಿ ಕಾರ್ಯಾರಂಭ ಮಾಡಲಿದೆ ಎಂದುಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

ವೈಬ್ರಂಟ್ ಗುಜರಾತ್ ಶೃಂಗಸಭೆಯಲ್ಲಿ ಮಾತನಾಡಿದ ಸಚಿವ, ಈವರೆಗೂ 270 ಕಿಲೋಮೀಟರ್‌ವರೆಗಿನ ಕೆಲಸ ಸಂಪೂರ್ಣವಾಗಿದೆ .ರಾಷ್ಟ್ರೀಯ ಹೈಸ್ಪೀಡ್ ರೈಲ್ ಕಾರ್ಪೊರೇಷನ್ ಲಿಮಿಟೆಡ್ ಜನವರಿ 8 ರಂದು ಗುಜರಾತ್, ಮಹಾರಾಷ್ಟ್ರ ಮತ್ತು ದಾದ್ರಾ ಮತ್ತು ನಗರ ಹವೇಲಿಯಾದ್ಯಂತ ಬುಲೆಟ್ ರೈಲು ಯೋಜನೆ ಎಂದು ಕರೆಯಲ್ಪಡುವ ಮುಂಬೈ–ಅಹಮದಾಬಾದ್ ರೈಲು ಕಾರಿಡಾರ್ಗಾಗಿ 100% ಭೂಸ್ವಾಧೀನವನ್ನು ಪೂರ್ಣಗೊಳಿಸಿದೆ ಎಂದು ಹೇಳಿದ್ದಾರೆ.

ಭೂಸ್ವಾಧೀನದ ಸ್ಥಿತಿಯ ಮಾಹಿತಿ ನೀಡಿದ ಅವರು, ಯೋಜನೆಗೆ ಅಗತ್ಯವಿರುವ ಸಂಪೂರ್ಣ 1389.49 ಹೆಕ್ಟೇರ್ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಹೇಳಿದರು. ಗುಜರಾತ್ನ ವಲ್ಸಾದ್ ಜಿಲ್ಲೆಯ ಜರೋಲಿ ಗ್ರಾಮದ ಬಳಿ 350 ಮೀಟರ್ ಉದ್ದ ಮತ್ತು 12.6 ಮೀಟರ್ ವ್ಯಾಸದ ಮೊದಲ ಪರ್ವತ ಸುರಂಗವನ್ನು ಕೇವಲ 10 ತಿಂಗಳಲ್ಲಿ ಪೂರ್ಣಗೊಳಿಸುವುದರೊಂದಿಗೆ ಗಮನಾರ್ಹ ಮೈಲಿಗಲ್ಲನ್ನು ಸಾಧಿಸಿದೆ ಎಂದು ರಾಷ್ಟ್ರೀಯ ಹೈಸ್ಪೀಡ್ ರೈಲ್ ಕಾರ್ಪೊರೇಷನ್ ಲಿಮಿಟೆಡ್ ಹೇಳಿದೆ.

# ರಾಮ ಮಂದಿರ ಉದ್ಘಾಟನೆ ವೇಳೆ ದಾಳಿಗೆ ಸ್ಕೆಚ್: ಹೈ ಅಲರ್ಟ್

**ನವದೆಹಲಿ:** ಜನವರಿ 22 ರಂದು ರಾಮ ಮಂದಿರದ ಪ್ರತಿಷ್ಠಾಪನಾ ಸಮಾರಂಭಕ್ಕೆ ಮುಂಚಿತವಾಗಿ, ಗುಪ್ತಚರ ಸಂಸ್ಥೆಗಳು ಅಯೋಧ್ಯೆಯಲ್ಲಿ ಸಂಭಾವ್ಯ ಭಯೋತ್ಪಾದಕನನ್ನ ಎಚ್ಚರಿಸಿವೆ. ಮಾಹಿತಿಯ ಪ್ರಕಾರ, ಭಯೋತ್ಪಾದಕರು ರಾಜಕೀಯ ನಾಯಕರು, ಅಧಿಕಾರಿಗಳನ್ನ ಗುರಿಯಾಗಿಸಲು ಮತ್ತು ಈ ಪ್ರದೇಶದಲ್ಲಿ ಅಶಾಂತಿಯನ್ನ ಸೃಷ್ಟಿಸಲು ತಯಾರಿ ನಡೆಸುತ್ತಿದ್ದಾರೆ. ತೀವ್ರಗಾಮಿ ಶಕ್ತಿಗಳು ನಿರ್ದಿಷ್ಟ ಸಮುದಾಯವನ್ನ ಪದೇ ಪದೇ ಪ್ರಚೋದಿಸಲು ಪ್ರಯತ್ನಿಸುತ್ತಿವೆ ಎಂದು ಕೇಂದ್ರ ಭದ್ರತಾ ಸಂಸ್ಥೆಗಳು ವರದಿ ಮಾಡಿವೆ. ಏತನ್ಮಧ್ಯೆ, ಭಯೋತ್ಪಾದಕರು ಪ್ರಸ್ತುತ ಇಸ್ರೇಲ್ –ಹಮಾಸ್ ಸಂಘರ್ಷವನ್ನ ಇಸ್ರೇಲ್ ಪರವಾಗಿ ಭಾರತ ಸರ್ಕಾರದ ನಿಲುವನ್ನ ಬದಲಾಯಿಸಲು ಬಳಸಿಕೊಂಡಿದ್ದಾರೆ ಎಂದು ಗುಪ್ತಚರ ಸಂಸ್ಥೆಗಳು ತಿಳಿಸಿವೆ. ಎಚ್ಚರಿಕೆಯ ನಂತರ, ನಗರದಲ್ಲಿ ಸಂಭಾವ್ಯ ಬೆದರಿಕೆಯನ್ನ ಪರಿಹರಿಸಲು ಕೇಂದ್ರ ಏಜೆನ್ಸಿಗಳು ಉನ್ನತ ಮಟ್ಟದ ಸಭೆಯನ್ನ ನಡೆಸಿದವು. ಮಾಹಿತಿಯ ಪ್ರಕಾರ, ರಾಮ ಜನ್ಮಭೂಮಿ ಸಮಾರಂಭದಲ್ಲಿ ನಿಯೋಜಿಸಲಾದ ಎಲ್ಲಾ ಭದ್ರತಾ ಸಂಸ್ಥೆಗಳನ್ನ ಹೈ ಅಲರ್ಟ್ ಮಾಡಲಾಗಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054





# ರಾಗಿಣಿ ನಟನೆಯ 'ಬಿಂಗೊ' ಸಿನಿಮಾದ ಶೂಟಿಂಗ್ ಮುಕ್ತಾಯ

ಈ ಹಿಂದೆ ಶಂಭೋ ಶಿವ ಶಂಕರ ಚಿತ್ರ ನಿರ್ದೇಶಿಸಿದ್ದ ಶಂಕರ್ ಕೋನಮಾನಹಳ್ಳಿ ನಿರ್ದೇಶನದ, ಆರ್.ಕೆ ಚಂದನ್ ಹಾಗೂ ರಾಗಿಣಿ ದ್ವಿವೇದಿ ನಾಯಕ ನಾಯಕಿಯಾಗಿ ನಟಿಸಿರುವ 'ಬಿಂಗೊ' ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ಸಸ್ಪೆನ್ಸ್ ಥ್ರಿಲ್ಲರ್ ಜಾನರ್ ನ ಈ ಚಿತ್ರಕ್ಕೆ ಬೆಂಗಳೂರಿನಲ್ಲೇ ಚಿತ್ರೀಕರಣ ನಡೆದಿದೆ. ಪೋಸ್ಟ್ ಪ್ರೊಡಕ್ಷನ್ ವರ್ಕ್ ಬಿರುಸಿನಿಂದ ಸಾಗಿದೆ.

ಆರ್.ಕೆ ಸ್ಟುಡಿಯೋಸ್ ಮತ್ತು ಮುತರಾ ವೆಂಚರ್ಸ್ ಲಾಂಛನದಲ್ಲಿ ಲಲಿತಾಸ್ವಾಮಿ ಮತ್ತು ಆರ್ ಪರಾಂಕುಶ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಆರ್ ಕೆ ಚಂದನ್ , ರಾಗಿಣಿ ದ್ವಿವೇದಿ, ರಾಜೇಶ್ ನಟರಂಗ, ಪವನ್(ಮಜಾ ಟಾಕೀಸ್), ಮುರಳಿ ಪೂರ್ವಿಕ್, ಅಪೂರ್ವ, ಶ್ರವಣ್ ಮುಂತಾದವರು ತಾರಾಬಳಗದಲ್ಲಿದ್ದಾರೆ.

ಹಿತನ್ ಹಾಸನ್ ಸಂಗೀತ ನೀಡಿರುವ ಮೂರು ಹಾಡುಗಳು ಸುಮಧುರವಾಗಿ ಮೂಡಿಬಂದಿದೆ. ಸದ್ಯದಲ್ಲೇ ಅದ್ದೂರಿ ಸಮಾರಂಭ ಆಯೋಜಿಸಿ ಟ್ರೇಲರ್ ಹಾಗೂ ಹಾಡುಗಳನ್ನು ಬಿಡುಗಡೆ ಮಾಡುವುದಾಗಿ ನಿರ್ದೇಶಕರು ತಿಳಿಸಿದ್ದಾರೆ.



ನಟರಾಜ್ ಮುದ್ದಾಲ್ ಅವರ ಛಾಯಾಗ್ರಹಣವಿರುವ ಈ ಚಿತ್ರದಲ್ಲಿ ಮೈನವಿರೇಳಿಸುವ ಸಾಹಸ ಸನ್ನಿವೇಶಗಳಿದ್ದು, ನರಸಿಂಹ ಸಾಹಸ ನಿರ್ದೇಶನ ಮಾಡಿದ್ದಾರೆ. ಕಂಬಿ ರಾಜು ಅವರ ನೃತ್ಯ ನಿರ್ದೇಶನ ಹಾಗೂ ವೆಂಕಿ ಸಂಕಲನ ಬಿಂಗೊ ಚಿತ್ರಕ್ಕಿದೆ.

# ಚೊಚ್ಚಲ 'ಗೌರಿ' ಚಿತ್ರಕ್ಕೆ ಡಬ್ಬಿಂಗ್ ಮಾಡುತ್ತಿದ್ದಾರೆ ಸಾನ್ಯಾ ಅಯ್ಯರ್

ಸಾನ್ಯ ಅಯ್ಯರ್ ತಮ್ಮ ಚೊಚ್ಚಲು ಸಿನಿಮಾ 'ಗೌರಿ' ಶೂಟಿಂಗ್ ಮುಗಿಸಿದ್ದಾರೆ. ಇದೀಗ ಅವರು ಡಬ್ಬಿಂಗ್ ಕೆಲಸದಲ್ಲಿ ನಿರತರಾಗಿದ್ದಾರೆ. ಡಬ್ಬಿಂಗ್ ಮಾಡುತ್ತಿರುವ ಫೋಟೋ ಅವನ್ನು ಸೋಷಿಯಲ್ ಮೀಡಿಯಾದಲ್ಲಿ ಅವರು ಪೋಸ್ಟ್ ಮಾಡಿದ್ದಾರೆ. ಜೊತೆಗೆ ನಿರ್ದೇಶಕ ಇಂದ್ರಜಿತ್ ಲಂಕೇಶ್ ಕೂಡ ಇದ್ದಾರೆ.

'ಗೌರಿ' ಸಿನಿಮಾದಲ್ಲಿ ನಾಯಕಿಯಾಗಿ ನಟಿಸುತ್ತಿದ್ದಂತೆಯೇ ಕಿರುತೆರೆಯ ಪುಟ್ಟಗೌರಿ ಸಾಕಷ್ಟು ಬದಲಾವಣೆ ಕಾಣುತ್ತಿದ್ದಾರೆ. ಸಖತ್ ಹಾಟ್ ಹಾಟ್ ಆಗಿ ಫೋಟೋಶೂಟ್ ಮಾಡಿಸಿಕೊಂಡಿದ್ದ ಸಾನ್ಯಾ ಅಯ್ಯರ್, ಈ ಚಿತ್ರಕ್ಕಾಗಿ ಮತ್ತೊಂದು ಫೋಟೋ ಶೂಟ್ ನಲ್ಲಿ ಭಾಗಿಯಾಗಿದ್ದರು.

ಬ್ಲೌಸ್ ಇಲ್ಲದೇ ಕೇವಲ ಸೀರೆ ಉಟ್ಟುಕೊಂಡು



ಫೋಟೋ ಶೂಟ್ ಮಾಡಿಸಿಕೊಂಡಿರುವ ಸಾನ್ಯಾ ಅಯ್ಯರ್. ಆ ಫೋಟೋದಲ್ಲಿ ಸಖತ್ ಬೋಲ್ಡ್ ಆಗಿ ಕಾಣಿಸಿಕೊಂಡಿದ್ದರು. ಬ್ಯಾಕ್ ಲೆಸ್ ಪೋಸ್ ಕೂಡ ನೀಡಿದ್ದರು. ಆ ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಕೂಡ ಆಗಿದ್ದವು.

ಈ ಹಿಂದೆಯೂ ಸಾನ್ಯಾ ಬಿಕಿನಿ ಫೋಟೋಶೂಟ್‌ನಲ್ಲಿ ಬೋಲ್ಡ್ ಆಗಿ ಕಾಣಿಸಿಕೊಳ್ಳುವ ಮೂಲಕ ಸೋಶಿಯಲ್ ಮೀಡಿಯಾದಲ್ಲಿ ಸೆನ್ಸೇಷನ್ ಕ್ರಿಯೇಟ್ ಮಾಡಿದ್ದರು. ಗೌರಿ ಚಿತ್ರಕ್ಕಾಗಿ ಹೊಸ ಲುಕ್‌ನಲ್ಲಿ ಸ್ಟೈಲೀಶ್ ಗೆಟಪ್‌ನಲ್ಲಿ ಕ್ಯಾಮೆರಾ ಕಣ್ಣಿಗೆ ನಟಿ ಪೋಸ್ ನೀಡಿದ್ದಾರೆ. ಬ್ಲೌಸ್ ಇಲ್ಲದೇ ಸೀರೆ ತೊಟ್ಟಿದ್ದಾರೆ.

ಗೌರಿ ಸಿನಿಮಾ ಚಿಕ್ಕಮಗಳೂರು ಸೇರಿದಂತೆ ನಾನಾ ಸ್ಥಳಗಳಲ್ಲಿ ಶೂಟ್ ಆಗಿದೆ. ರವಿವರ್ಮ ಅವರ ಸಾಹಸ ನಿರ್ದೇಶನದಲ್ಲಿ ಸಾಹಸ ದೃಶ್ಯಗಳು ಅದ್ಭುತವಾಗಿ ಮೂಡಿಬಂದಿದೆ. ಸಮರ್ಜಿತ್ ನಾನು ಅಂದುಕೊಂಡದಕ್ಕಿಂತ ಚೆನ್ನಾಗಿ ಅಭಿನಯಿಸಿದ್ದಾರೆ. ಸಾನ್ಯ ಅವರು ಕೂಡ. ಮುಖ್ಯಮಂತ್ರಿ ಚಂದ್ರು, ಸಿಹಿಕಹಿ ಚಂದ್ರು, ಮಾನಸಿ ಸುಧೀರ್, ಎಸ್ತರ್ ನರೋನ ಮುಂತಾದವರು ಚಿತ್ರದಲ್ಲಿ ನಟಿಸಿದ್ದಾರೆ.

# ಸಂಕ್ರಾಂತಿ ಹಬ್ಬದಂದು ಇನ್ನಷ್ಟು ಹೊಸತನದೊಂದಿಗೆ ಶುರುವಾಗ್ತಿದೆ ಬೊಂಬಾಟ್ ಭೋಜನ ಸೀಸನ್ 4

ಕನ್ನಡ ಕಿರುತೆರೆ ಇತಿಹಾಸದಲ್ಲೇ 1000 ಸಂಚಿಕೆಗಳನ್ನು ದಾಟಿ ಹೊಸ ಮೈಲಿಗಲ್ಲು ಸೃಷ್ಟಿಸಿ ಕರುನಾಡಿನ ಮನಗೆದ್ದ ಸ್ಟಾರ್ ಸುವರ್ಣ ವಾಹಿನಿಯ ಅಡುಗೆ ಷೋ ಬೊಂಬಾಟ್ ಭೋಜನ. ಈಗಾಗಲೇ 3 ಸೀಸನ್ ಗಳನ್ನು ಯಶಸ್ವಿಯಾಗಿ ಪೂರೈಸಿದ್ದು ಇದೀಗ 4ನೇ ಆವೃತ್ತಿಯೊಂದಿಗೆ ಬರಲು ಸಜ್ಜಾಗಿದೆ. ಇನ್ನು ಈ ಬಾರಿಯ 'ಬೊಂಬಾಟ್ ಭೋಜನ ಸೀಸನ್ 4' ಅನೇಕ ವಿಶೇಷತೆಗಳೊಂದಿಗೆ ನಿಮ್ಮ ಮುಂದೆ ಬರ್ತಿದೆ. ಈ ಸೀಸನ್ ಅಲ್ಲಿ ಏನೆಲ್ಲಾ ಇರುತ್ತೆ ಎಂದು ಹೇಳೋದಾದ್ರೆ

**ನಿಮ್ಮ ಅಡುಗೆ :** ಜನಸಾಮಾನ್ಯರು ಬಂದು ವಿವಿಧ ರೀತಿಯ ಕೈರುಚಿಯನ್ನು ತಿಳಿಸುವುದು.

**ಆರೋಗ್ಯವೇ ಭಾಗ್ಯ :** ಡಾ|| ಗೌರಿ ಸುಬ್ರಮಣ್ಯ ರವರು ಜನರಿಗೆ ಉಪಯುಕ್ತವಾದ ಮನೆಮದ್ದನ್ನು ಇಲ್ಲಿ ತಿಳಿಸುತ್ತಾರೆ.

**ಮನೆ ಊಟ :** ಒಬ್ಬರ ಮನೆಗೆ ಸರ್ಪ್ರೈಸ್ ಎಂಟ್ರಿ ಕೊಟ್ಟು, ಅವರು ತಯಾರಿಸಿರುವ ಅಡುಗೆಯ ರುಚಿಯನ್ನು ಸವಿದು ಅವರೊಂದಿಗೆ ಮಾತುಕತೆ ನಡೆಸುವುದು.




**ನಮ್ಮೂರ ಊಟ :** ಕರ್ನಾಟಕದಾದ್ಯಂತ ಚಲಿಸಿ, ಜನಪ್ರಿಯತೆಗಳಿಸಿರುವ ವರ್ಷಗಳ ಇತಿಹಾಸವಿರುವ ಹೋಟೆಲ್ ಗಳಿಗೆ ಧಾವಿಸಿ ಅಲ್ಲಿನ ಜನಪ್ರಿಯ ತಿನಿಸುಗಳನ್ನು ಜನರಿಗೆ ತಿಳಿಸುವುದು.

**ಸವಿಯೂಟ :** ಬೇರೆ ಬೇರೆ ಜಿಲ್ಲೆಗಳಲ್ಲಿರುವ ಲೇಡೀಸ್ ಕ್ಲಬ್ ಗಳಿಗೆ ಹೋಗಿ ಅಲ್ಲಿನ ಜನರೊಂದಿಗೆ ಬೆರೆತು, ಅಡುಗೆ ಮಾಂತ್ರಿಕ ಸಿಹಿ ಕಹಿ ಚಂದ್ರು ರವರು ವಿಭಿನ್ನ ಅಡುಗೆ ಡಿಶ್ ಗಳನ್ನು ತಯಾರಿಸುತ್ತಾರೆ.

**ಟಿಫನ್ ಕ್ಯಾರಿಯರ್ :** ಬೆಳಗ್ಗೆ ಆಫೀಸ್, ಸ್ಕೂಲ್ ಗೆ ಹೋಗೋರಿಗೆ ಡಬ್ಬಿಗೆ ಕಟ್ಟಿಕೊಡಬಹುದಾದ ಬಲು ಸುಲಭವಾಗಿರುವ ತಿನಿಸುಗಳನ್ನು ಹೇಳಲಾಗುತ್ತದೆ.

**ತಿಂಡಿ-ತಿನಿಸು :** ಸಂಜೆಯ ಚಹಾಕ್ಕೆ ಸವಿಯಬಹುದಾದ ಹೊಸ ಬಗೆಯ ಕುರುಕ್ ತಿಂಡಿಗಳನ್ನು ಹೇಳಲಾಗುವುದು.

**ಮುಖ್ಯ ಅತಿಥಿ :** 'ಬೊಂಬಾಟ್ ಭೋಜನ' ಸೆಟ್ ಗೆ ಜನಪ್ರಿಯ ಕಲಾವಿದರನ್ನು, ಸಿನಿಮಾ ತಾರೆಯರನ್ನು ಕರೆಸಿ ಅವರಿಗಿಷ್ಟವಾದ ಅಡುಗೆಯನ್ನು ಮಾಡಿಕೊಡುವುದು.ಹೀಗೆ ಅನೇಕ ಹೊಸ ಹೊಸ ಅಡುಗೆ ವಿಭಾಗಗಳನ್ನು ಈ ಬಾರಿಯ 'ಬೊಂಬಾಟ್ ಭೋಜನ ಸೀಸನ್ 4' ಹೊಂದಿದೆ.ನಳಮಹಾರಾಜ ಸಿಹಿ ಕಹಿ ಚಂದ್ರು ರವರ ನೇತೃತ್ವದಲ್ಲಿ ಶುರುವಾಗುತ್ತಿರುವ 'ಬೊಂಬಾಟ್ ಭೋಜನ ಸೀಸನ್ 4' ಇದೇ ಸೋಮವಾರದಿಂದ ಮಧ್ಯಾಹ್ನ 12 ಗಂಟೆಗೆ ನಿಮ್ಮ ನೆಚ್ಚಿನ ಸ್ಟಾರ್ ಸುವರ್ಣ ವಾಹಿನಿಯಲ್ಲಿ ಪ್ರಸಾರವಾಗುತ್ತಿದೆ ತಪ್ಪದೇ ವೀಕ್ಷಿಸಿ.

# ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ 2024 ನೇ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿದ ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ 2024ನೇ ವರ್ಷದ ಕ್ಯಾಲೆಂಡರ್ ಅನ್ನು ಸಿಎಂ ಸಿದ್ದರಾಮಯ್ಯ ಬಿಡುಗಡೆ ಮಾಡಿದರು.

ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ಯಾಲೆಂಡರ್ ಬಿಡುಗಡೆ ಮಾಡಿದರು. ಈ ವೇಳೆ ಸಂಘದ ವತಿಯಿಂದ ರಾಜ್ಯದ ಪತ್ರಕರ್ತರಿಗೆ ವೈದ್ಯಕೀಯ ನಿಧಿಗಾಗಿ ರಾಜ್ಯ ಸರ್ಕಾರದಿಂದ 5 ಕೋಟಿ ರೂ. ಸಹಾಯಧನ ನೀಡಲು ಮನವಿ ಮಾಡಲಾಯಿತು. ಹಾಗೆಯೇ ಸಂಗಘದ ಕಚೇರಿ ಪಕ್ಕದಲ್ಲಿರುವ ರಾಜಕಾಲುವೆ ಸ್ವಚ್ಛಗೊಳಿಸಿ ಕಸ ತೆಗೆದು ಹಾಕಲು ಬಿಬಿಎಂಪಿ ಅಧಿಕಾರಿಗಳಿಗೆ ಸೂಚನೆ ನೀಡಲು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ. ಪ್ರಭಾಕರ್, ಕರ್ನಾಟಕ ಪತ್ರಕರ್ತರ ಸಹಕಾರ ಸಂಘದ ಅಧ್ಯಕ್ಷರಾದ ರಮೇಶ್ ಎಂ. ಪಾಳ್ಯ, ಉಪಾಧ್ಯಕ್ಷರಾದ ದೊಡ್ಡ ಬೊಮ್ಮಯ್ಯ, ಖಜಾಂಚಿ ಮೋಹನ್ ಕುಮಾರ್ ಬಿ.ಎನ್., ನಿರ್ದೇಶಕರಾದ ವಿನೋದ್ ಕುಮಾರ್ ಬಿ. ನಾಯ್ಕ, ರಮೇಶ್ ಹಿರೇಜಂಬೂರು, ಸೋಮಣ್ಣ ಕೆ.ಎಸ್., ಧ್ಯಾನ್ ಪೂಣಚ್ಚ, ಆನಂದ ಪಿ. ಬೈದನಮನೆ, ಪರಮೇಶ್ವರ್ ಕೆ.ವಿ., ವನಿತಾ ಎನ್., ನಯನಾ ಎಸ್., ಕಾರ್ಯದರ್ಶಿ ಕೆಂಪಣ್ಣ, ಸಿಬ್ಬಂದಿಗಳಾದ ವಿನುತಾ, ಹೇಮಂತ್, ಆನಂದ್ ಉಪಸ್ಥಿತರಿದ್ದರು.

## ಅಫ್ಘಾನಿಸ್ತಾನ ವಿರುದ್ಧದ ಮೊದಲ ಟಿ20

# ಭಾರತಕ್ಕೆ ಸುಲಭದ ಗೆಲುವು!

ಅಫ್ಘಾನಿಸ್ತಾನ ವಿರುದ್ಧದ ಟಿ20 ಸರಣಿಯ ಮೊದಲ ಪಂದ್ಯದಲ್ಲಿ ಭಾರತ 6 ವಿಕೆಟ್ ಗಳ ಗೆಲುವು ಸಾಧಿಸಿದೆ. ಈ ಮೂಲಕ ಭಾರತ ಅಫ್ಘಾನಿಸ್ತಾನ ವಿರುದ್ಧದ ಅಜೇಯ ಗೆಲುವಿನ ಸಾಧನೆ ಮುಂದುವರಿದಿದೆ. ಅಫ್ಘಾನಿಸ್ತಾನ ವಿರುದ್ಧ ಇದು ಭಾರತದ ಐದನೇ ಗೆಲುವು. ಮೂರು ಪಂದ್ಯಗಳ ಸರಣಿಯಲ್ಲಿ ಭಾರತ 1-0 ಮುನ್ನಡೆ ಸಾಧಿಸಿದೆ. ಸರಣಿಯ ಎರಡನೇ ಪಂದ್ಯ ಜನವರಿ 14ರಂದು ಇಂದೋರ್‌ನಲ್ಲಿ ನಡೆಯಲಿದೆ.

ಮೊಹಾಲಿಯಲ್ಲಿ ಕೊರೆಯುವ ಚಳಿ ನಡುವೆ ನಡೆದ ಪಂದ್ಯದಲ್ಲಿ ಟಾಸ್ ಗೆದ್ದ ಭಾರತ ಬೌಲಿಂಗ್ ಆಯ್ಕೆ ಮಾಡಿತು. ಮೊದಲು ಬ್ಯಾಟಿಂಗ್ ಮಾಡಿದ ಅಫ್ಘಾನಿಸ್ತಾನ ನಿಗದಿತ 20 ಓವರ್ ಗಳಲ್ಲಿ 5 ವಿಕೆಟ್ ನಷ್ಟಕ್ಕೆ 158 ರನ್ ಗಳಿಸಿತು. ಇದು ಭಾರತದ ವಿರುದ್ಧ ಅಫ್ಘಾನಿಸ್ತಾನ ಅತ್ಯಧಿಕ ಮೊತ್ತವಾಗಿದೆ. 159 ರನ್ ಟಾರ್ಗೆಟ್ ಬೆನ್ನತ್ತಿದ ಭಾರತ 17.4 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 159 ರನ್ ಗಳಿಸಿ ಗೆಲುವು ಸಾಧಿಸಿತು.

ಮೊದಲು ಬ್ಯಾಟ್ ಮಾಡಿದ ಆಫ್ಘನ್ ತಂಡಕ್ಕೆ ಮೊಹಮ್ಮದ್ ನಬಿ 27 ಬಾಲ್‌ನಲ್ಲಿ 42 ರನ್ ಗಳಿಸಿ, ಟಾಪ್ ಸ್ಕೋರರ್ ಆದರು. ಅಜ್ಮತ್ ಉಲ್ಲ ಒಮರ್ ಝೈ 29 ರನ್ ಗಳಿಸಿದರು. ಭಾರತ ತಂಡದ ಪರವಾಗಿ ಅಕ್ಷರ್ ಪಟೇಲ್ ಹಾಗೂ ಮುಕೇಶ್ ಕುಮಾರ್ 2 ವಿಕೆಟ್ ಗಳಿಸಿದರು.

ಟೀ ಇಂಡಿಯಾ ಪರವಾಗಿ ಶಿವಂ ದುಬೆ ಅಜೇಯ 60 ರನ್ ಗಳಿಸಿ ಗೆಲುವಿನ ರೂವಾರಿಯಾದರು. 40 ಎಸೆತಗಳಲ್ಲಿ 2 ಸಿಕ್ಸರ್ ಹಾಗೂ 5 ಬೌಂಡರಿ ಬಾರಿಸಿದರು. ಜಿತೇಶ್



ಶರ್ಮಾ 31, ತಿಲಕ್ ವರ್ಮಾ 26, ಶುಭ್ ಮನ್ ಗಿಲ್ 23, ರಿಂಕು ಸಿಂಗ್ ಅಜೇಯ 16 ರನ್ ಗಳಿಸಿದರು. ಆಫ್ಘನ್ ತಂಡದ ಪರವಾಗಿ



ಮುಜೀಬ್ ಉರ್ ರಹ್ಮಾನ್ 2 ವಿಕೆಟ್ ಗಳಿಸಿದರೆ, ಒಮರ್‌ಝೈ 1 ವಿಕೆಟ್ ಪಡೆದರು. ಶಿವಂ ದುಬೆ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

## ರೇಪ್ ಕೇಸ್

# ಡೆಲ್ಲಿ ಕ್ಯಾಪಿಟಲ್ಸ್ ಆಟಗಾರನಿಗೆ 8 ವರ್ಷ ಜೈಲು

ನೇಪಾಳದ ನೆಲದಲ್ಲಿ ಕ್ರಿಕೆಟ್ ಬೆಳೆಸಿ ದೇಶದ ಕೀರ್ತಿ ಹೆಚ್ಚಿಸಿದ್ದ ಕ್ರಿಕೆಟಿಗ ಸಂದೀಪ್ ಲಮಿಚಾನೆ (24) ಅತ್ಯಾಚಾರ ಪ್ರಕರಣದಲ್ಲಿ ಜೈಲು ಶಿಕ್ಷೆಗೆ ಗುರಿಯಾಗಿದ್ದಾರೆ.

17 ವರ್ಷದ ಯುವತಿಯ ಅತ್ಯಾಚಾರ ಪ್ರಕರಣದಲ್ಲಿ 2023ರ ಅಕ್ಟೋಬರ್‌ನಲ್ಲಿ ಅವರನ್ನು ಬಂಧಿಸಲಾಗಿತ್ತು. ಇದೀಗ ಈ ಪ್ರಕರಣ ಸಾಬೀತಾದ ಹಿನ್ನೆಲೆ ಕಠ್ಮಂಡು ಜಿಲ್ಲಾ ನ್ಯಾಯಾಲಯ 8 ವರ್ಷಗಳ ಜೈಲು ಶಿಕ್ಷೆ ವಿಧಿಸಿದೆ. ಅಲ್ಲದೇ 3 ಲಕ್ಷ ರೂ. ದಂಡ ವಿಧಿಸಿದ್ದು, 2 ಲಕ್ಷ ರೂ.ಗಳನ್ನು ಸಂತ್ರಸ್ಥೆಗೆ ಪರಿಹಾರ ನೀಡುವಂತೆ ಆದೇಶಿಸಿದೆ. 2022ರ ಆಗಸ್ಟ್‌ನಲ್ಲಿ ಕಠ್ಮಂಡುವಿನ ಹೋಟೆಲ್ ಒಂದರಲ್ಲಿ ಅತ್ಯಾಚಾರ ಮಾಡಿದ್ದಾರೆ ಎಂದು 18 ವರ್ಷದ ಯುವತಿಯೊಬ್ಬಳು



ಸಂದೀಪ್ ಮಿಚಾನೆ ವಿರುದ್ಧ ದೂರು ದಾಖಲಿಸಿದ್ದರು.

ಆರೋಪಗಳ ಹೊರತಾಗಿಯೂ ಜಾಮೀನಿನ ಮೇಲೆ ಹೊರಗೆ ಬಂದಿದ್ದ ಅವರು ತಮ್ಮ ತಂಡಕ್ಕಾಗಿ ಕ್ರಿಕೆಟ್ ಆಡುವುದನ್ನು ಮುಂದುವರೆಸಿದ್ದರು. ಕಳೆದ ನವೆಂಬರ್‌ನಲ್ಲಿ ನಡೆದ ಟಿ20 ಏಷ್ಯಾ ಫೈನಲ್‌ನಲ್ಲಿ ಒಮಾನ್ ವಿರುದ್ಧ ನೇಪಾಳ ಪರ ಕೊನೆ ಬಾರಿಗೆ ಆಡಿದ್ದರು. ಇದೀಗ 2023ರ ಡಿಸೆಂಬರ್‌ನಲ್ಲಿ ಆರೋಪ ಸಾಬೀತಾಗಿತ್ತು. ಇದೀಗ ನ್ಯಾಯಾಲಯ ಶಿಕ್ಷೆಯ ಪ್ರಮಾಣ ಪ್ರಕಟ ಮಾಡಿದೆ.

ನೇಪಾಳದಲ್ಲಿ ಕ್ರಿಕೆಟ್‌ನ್ನು ಪೋಷಿಸಿದ್ದ ಸಂದೀಪ್ ಲಮಿಚಾನೆ, ಏಕದಿನ ಮತ್ತು ಟಿ20 ಕ್ರಿಕೆಟ್‌ನಲ್ಲಿ ತಮ್ಮ ದೇಶದ ಪರ ಅತ್ಯಧಿಕ ವಿಕೆಟ್ ಪಡೆದ ಬೌಲರ್ ಎನಿಸಿಕೊಂಡಿದ್ದಾರೆ. ಐಪಿಎಲ್ ನಲ್ಲಿ 2018-20ರ ಅವಧಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಪ್ರತಿನಿಧಿಸಿದ್ದರು.

# ಸ್ತಬ್ಧಚಿತ್ರ ರಾಜಕಾರಣ ಸಿಎಂಗೆ ಶೋಭೆ ತರಲ್ಲ: ಪ್ರಹ್ಲಾದ್ ಜೋಶಿ

**ಬೆಂಗಳೂರು:** ಗಣರಾಜ್ಯೋತ್ಸವಕ್ಕೆ ಕರುನಾಡಿನ ಸ್ತಬ್ಧಚಿತ್ರ ಆಯ್ಕೆ ಆಗದಿರುವುದನ್ನೇ ಮುಂದಿಟ್ಟುಕೊಂಡು ಕೀಳುಮಟ್ಟದ ರಾಜಕಾರಣ ಮಾಡುವುದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಶೋಭೆ ತರುವುದಿಲ್ಲ ಎಂದು ಕೇಂದ್ರ ಸಂಸದೀಯ ಸಚಿವ ಪ್ರಹ್ಲಾದ್ ಜೋಶಿ ಕಿವಿಮಾತು ಹೇಳಿದ್ದಾರೆ.

ಗಣರಾಜ್ಯೋತ್ಸವಕ್ಕೆ ಕರ್ನಾಟಕದ ಸ್ತಬ್ಧಚಿತ್ರವನ್ನು ಆಯ್ಕೆ ಮಾಡದೆ ಕರುನಾಡಿಗೆ ಕೇಂದ್ರ ಸರ್ಕಾರ ಅವಮಾನ ಮಾಡಿದೆ ಎಂಬ ಸಿದ್ದರಾಮಯ್ಯ ಟೀಕೆಗೆ ಜೋಶಿ ಅವರು ಎಕ್ಸ್ ಮೂಲಕ ಪ್ರತ್ಯುತ್ತರ ಕೊಟ್ಟಿದ್ದಾರೆ.

ಎಕ್ಸ್‌ನಲ್ಲೇನಿದೆ.. : ಸಿದ್ದರಾಮಯ್ಯನವರೇ ರಾಜಕೀಯ ಮಾಡಬೇಕು ನಿಜ. ಆದರೆ ಎಲ್ಲದರಲ್ಲೂ ರಾಜಕೀಯ ಮಾಡುವುದು, ಸುಳ್ಳು ಹೇಳಿಕೊಂಡು ಜನರನ್ನು ಮೂರ್ಖರನ್ನಾಗಿಸುವುದು ನಿಮಗಾಗಲಿ, ನಿಮ್ಮ ಸ್ಥಾನಕ್ಕಾಗಲಿ ಶೋಭೆ ತರದು ಎಂದು ಹೇಳಿದ್ದಾರೆ.

2015 ರಿಂದ 2023 ರವರೆಗೆ ಕರ್ನಾಟಕ ಪ್ರತಿ ವರ್ಷ ಗಣರಾಜ್ಯೋತ್ಸವ ವೇಳೆ ಸ್ತಬ್ಧಚಿತ್ರ ಪ್ರದರ್ಶನ ಮಾಡಿದೆ. ಅದನ್ನರಿತು ರಾಜಕಾರಣ ಮಾಡಿ ಎಂದು ಸಲಹೆ ನೀಡಿದ್ದಾರೆ. ಜೊತೆಗೆ ಗಣರಾಜ್ಯೋತ್ಸವ ಸಂದರ್ಭದಲ್ಲಿ ಈವರೆಗೆ ಕರ್ನಾಟಕಕ್ಕೆ ಸ್ತಬ್ಧಚಿತ್ರ ಪ್ರದರ್ಶಿಸಲು ಬರೋಬ್ಬರಿ 14 ಅವಕಾಶಗಳಿದ್ದವು.




ಅಂದರೆ ಕೇಂದ್ರದಲ್ಲಿ ಬಿಜೆಪಿ ಇದ್ದಾಗಲೇ 10 ಬಾರಿ ಕರುನಾಡಿನ ಸ್ತಬ್ಧಚಿತ್ರ ಪ್ರದರ್ಶನವಾಗಿದೆ. ಸಿಎಂ ಇದನ್ನು ಮರೆತಂತೆ ಇದೆ ಎಂದು ಜೋಶಿ ಲೇವಡಿ ಮಾಡಿದ್ದಾರೆ.

2007, 2009 ಹಾಗೂ 2010 ರಲ್ಲಿ ಕರ್ನಾಟಕಕ್ಕೆ ಸ್ತಬ್ಧಚಿತ್ರ ಪ್ರದರ್ಶಿಸಲು ಅವಕಾಶ ಸಿಗಲಿಲ್ಲವಲ್ಲ. ಆಗ ಎಲ್ಲಿ ಹೋಗಿತ್ತು ನಿಮ್ಮ ನಾಡಪ್ರೇಮ ಆಗ ಏಕೆ ಪ್ರಶ್ನಿಸಲಿಲ್ಲ ಆ ಅವಧಿಯಲ್ಲಿ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಇತ್ತು. ಆಗ ಕರ್ನಾಟಕಕ್ಕೆ ಅವಮಾನ ಆಗಿರಲಿಲ್ಲವೇ ಎಂದು ಸಚಿವ ಜೋಶಿ ಅವರು ಪ್ರಶ್ನಿಸಿದ್ದಾರೆ. ಅಲ್ಲದೆ ಆಗಿಲ್ಲದ ಅವಮಾನ ಪದ ಈಗೇಕೆ ಎಂಬುದು ಜನರಿಗೆ ಅರ್ಥವಾಗುತ್ತದೆ. ಜನರೇನು ಮೂರ್ಖರಲ್ಲ ಎಂದು ಕೇಂದ್ರ ಸಚಿವರು ಕಿಡಿಕಾರಿದ್ದಾರೆ.

ಸ್ತಬ್ಧಚಿತ್ರ ಪ್ರದರ್ಶನಕ್ಕೆ ಅವಕಾಶ ಕೊಡುವುದು ನಮ್ಮ ಕೈಯಲಿಲ್ಲ. ಎಲ್ಲವೂ ನ್ಯಾಯ ಬದ್ಧವಾಗಿಯೇ ನಡೆದಿದೆ. ಆಯ್ಕೆಗಾಗಿ ಆಯಾ ಕ್ಷೇತ್ರದ ಹೆಸರಾಂತ ಕಲಾವಿದರನ್ನು ಒಳಗೊಂಡ ಸಮಿತಿಯನ್ನು ರಚಿಸಲಾಗಿತ್ತು. ಅದರಂತೆ ಆಯ್ಕೆ ನಡೆದಿದೆ. ಸಂಸ್ಕತಿ, ಕಲೆ, ದೇಶ- ರಾಜ್ಯದ ಗೌರವ ಬಿಂಬಿಸುವ, ಸಾದರಪಡಿಸುವ ವಿಷಯದಲ್ಲಿ ಬಿಜೆಪಿ ಎಂದೂ ರಾಜಕಾರಣ ಮಾಡುವುದಿಲ್ಲ. ಅದೇನಿದ್ದರೂ ಕಾಂಗ್ರೆಸ್ ನ ಚಾಳಿ ಎಂದು ಪ್ರಹ್ಲಾದ್ ಜೋಶಿ ಸಿಎಂಗೆ ಛಾಟಿ ಬೀಸಿದ್ದಾರೆ.

ಕೇಂದ್ರ ಸರ್ಕಾರ ರಾಜ್ಯಗಳ ವಿಷಯದಲ್ಲಿ ಒಂದು ಕಣ್ಣಿಗೆ ಬೆಣ್ಣೆ ಒಂದು ಕಣ್ಣಿಗೆ ಸುಣ್ಣ ಎಂಬಂತೆ ಮಾಡುವುದಿಲ್ಲ. ಸಿದ್ದರಾಮಯ್ಯ ಅವರು ಒಬ್ಬ ಮುಖ್ಯಮಂತ್ರಿ ಆಗಿ ನಮ್ಮ ಸ್ತಬ್ಧಚಿತ್ರವನ್ನು ಮೊದಲು ಪ್ರದರ್ಶನ ಮಾಡಲು ಬಿಡಲಿಲ್ಲ. ಅವಮಾನವಾಯಿತು ಎನ್ನುವುದು ತರವಲ್ಲ ಎಂದು ಖಂಡಿಸಿದ್ದಾರೆ.

## ಲೋಕಸಭೆ ಚುನಾವಣೆಗೆ ಗ್ಯಾರಂಟಿಯೇ ಕಾಂಗ್ರೆಸ್ ಅಸ್ತ್ರ

# 3 ಡಿಸಿಎಂ ಬಗ್ಗೆ ಕುಮಾರಸ್ವಾಮಿ ಲೇವಡಿ

**ಚಿಕ್ಕಮಗಳೂರು:** ಕಾಂಗ್ರೆಸ್ ಸರ್ಕಾರದಲ್ಲಿ ಮೂರು ಡಿಸಿಎಂ ಹುದ್ದೆಗಳ ಸೃಷ್ಟಿ ಬಗ್ಗೆ ಚರ್ಚೆ ವಿಚಾರವಾಗಿ ವ್ಯಂಗ್ಯವಾಡಿರುವ ಜೆಡಿಎಸ್ ನಾಯಕ ಹೆಚ್‌ಡಿ ಕುಮಾರಸ್ವಾಮಿ, ಕಾಂಗ್ರೆಸ್ ಯಾರದೋ ದುಡ್ಡಲ್ಲಿ ಯಲ್ಲಮ್ಮನ ಜಾತ್ರೆ ಮಾಡುತ್ತಿದೆ ಎಂದು ಹೇಳಿದ್ದಾರೆ. ಚಿಕ್ಕಮಗಳೂರಿನಲ್ಲಿ ಮಾತನಾಡಿದ ಅವರು, ಜಾತಿಗೊಂದು ಡಿಸಿಎಂ ಸ್ಥಾನ ಕೊಟ್ಟುಬಿಡಿ. 30-35 ಶಾಸಕರಿಗೆ ಡಿಸಿಎಂ ಸ್ಥಾನ ಕೊಡುವುದು ಒಳ್ಳೆಯದು. ಆಗ ಪ್ರತಿನಿತ್ಯ ಡಿಸಿಎಂ ಸ್ಥಾನದ ಬೇಡಿಕೆ ಬಗ್ಗೆ ಗೊಂದಲ ಇರಲ್ಲ ಎಂದು ಲೇವಡಿ ಮಾಡಿದ್ದಾರೆ.

ಈಗ ಗ್ಯಾರಂಟಿ ನೋಡಿಕೊಳ್ಳೋದಕ್ಕೆ ಓರ್ವ ಅಧ್ಯಕ್ಷ ನೇಮಕ ಮಾಡುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳಿಗೆ ವಾರ್ಷಿಕ 16 ಕೋಟಿ ಹಣ ಬೇಕಂತೆ. ಗ್ಯಾರಂಟಿ ಯೋಜನೆಗೆ ಐವರು ಉಪಾಧ್ಯಕ್ಷರು ಯಾಕೆ ಬೇಕು ಕಾಂಗ್ರೆಸ್ ಯಾರದೋ ದುಡ್ಡಲ್ಲಿ ಯಲ್ಲಮ್ಮನ ಜಾತ್ರೆ ಮಾಡುತ್ತಿದೆ. ಕಾಂಗ್ರೆಸ್‌ನ ಸದ್ಯದ ಪರಿಸ್ಥಿತಿ ನನಗೆ ಅರ್ಥವಾಗಿದೆ. ಚುನಾವಣೆ ಫಲಿತಾಂಶ ಬಂದ ಬಳಿಕ ಎಲ್ಲವೂ ಗೊತ್ತಾಗುತ್ತದೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ.



ಯುವನಿಧಿ ಯೋಜನೆಯ ಮೊದಲ ಕಂತಿನ ಹಣ ಬಿಡುಗಡೆ ವಿಚಾರವಾಗಿ ಪ್ರತಿಕ್ರಿಯಿಸಿದ ಕುಮಾರಸ್ವಾಮಿ, ಯುವನಿಧಿ ಯೋಜನೆ ಕಾರ್ಯಕ್ರಮದಲ್ಲಿ ಏನಿದೆ ಯುವನಿಧಿ ಯೋಜನೆಗೆ ಎಷ್ಟು ಜನ ನೋಂದಣಿ ಮಾಡಿಸಿದ್ದಾರೆ 2023-2024 ಎಷ್ಟು ಜನ ಪದವಿ ಪಡೆದಿದ್ದಾರೆ, ಅವರ ಗೈಡ್‌ಲೈನ್ಸ್ ನಲ್ಲಿ ಏನಿದೆ ಎಂದು ಪ್ರಶ್ನಿಸಿದ್ದಾರೆ.

ಮಂಡ್ಯದಲ್ಲಿ ನಮ್ಮ ಸಾಮಾನ್ಯ ಕಾರ್ಯಕರ್ತ ಕೂಡ ಗೆಲ್ಲುತ್ತಾನೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಕಳೆದ ಬಾರಿಯ ಲೋಕಸಭೆ ಚುನಾವಣೆ ಬೇರೆ, ಈ ಚುನಾವಣೆ ಬೇರೆ. ಇವತ್ತು ಓರ್ವ ಸಾಮಾನ್ಯ ಕಾರ್ಯಕರ್ತನ ನಿಲ್ಲಿಸಿದರೂ ಗೆಲ್ಲಲಿದ್ದಾರೆ. ಕಳೆದ ಬಾರಿ ಎಲ್ಲರೂ ಪಕ್ಷೇತರ ಅಭ್ಯರ್ಥಿಯ ಪರ ಮತ ಹಾಕಿದರು. ರೈತರು, ಬಿಜೆಪಿ, ಕಾಂಗ್ರೆಸ್ಸಿಗರು ಪಕ್ಷೇತರ ಅಭ್ಯರ್ಥಿ ಪರ ಮತ ಹಾಕಿದ್ದರು. ಜೆಡಿಎಸ್ ಬಿಟ್ಟು ಶೇ.2ರಿಂದ 3 ರಷ್ಟು ಮತದಾರರು ಮಾತ್ರ ನಮ್ಮ ಪರ ಇದ್ದರು. ಈಗ ಮಂಡ್ಯ ಕ್ಷೇತ್ರದಲ್ಲಿ ಆ ವಾತಾವರಣ ಇಲ್ಲ ಎಂದು ಅವರು ಹೇಳಿದ್ದಾರೆ.

ರಾಮಮಂದಿರ ಉದ್ಘಾಟನೆ ಕಾರ್ಯಕ್ರಮಕ್ಕೆ ಯಾಕೆ ಹೋಗಲ್ಲ ಅಂತಾ ಕಾಂಗ್ರೆಸ್ಸಿಗರೇ ಹೇಳಬೇಕು. ಕಾಂಗ್ರೆಸ್‌ನವರ ತೀರ್ಮಾನಕ್ಕೂ ನನಗೂ ಸಂಬಂಧವಿಲ್ಲ. ರಾಮಮಂದಿರ ಆಗಬೇಕು ಅನ್ನೋದು ದೇಶದ ಜನರ ನಿರೀಕ್ಷೆ. ಹಲವು ವರ್ಷಗಳ ಗೊಂದಲಕ್ಕೆ ಸುಪ್ರೀಂಕೋರ್ಟ್ ತೆರೆ ಎಳೆದಿದೆ. ರಾಮ ಮಂದಿರ ನಿಜವಾದ ರಾಮ ರಾಜ್ಯದ ಕನಸು ಎಂದು ಕುಮಾರಸ್ವಾಮಿ ಅಭಿಪ್ರಾಯಪಟ್ಟಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com